**ಸಂಪುಟ:** 06 **ಸಂಚಿಕೆ:** 118 **ಪುಟಗಳು:** 08 **ಶನಿವಾರ** 11 ಜುಲೈ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಆಯ್ಕೆ ಮತ್ತು ಅವಕಾಶಗಳನ್ನು ಸರಿಯಾಗಿ ಉಪಯೋಗಿಸಿಕೊಂಡರೆ ಬಯಸಿದ ಬದಲಾವಣೆ ಕಷ್ಟವೇನಲ್ಲ, ಪ್ರಯತ್ನಿಸೋಣ!

## ರೌಡಿಗಳ ನಿದ್ದೆಗೆಡಿಸಿದ ಪೊಲೀಸರು, ಅಪರಾಧ ತಡೆಗೆ ವಿಶೇಷ ಕಾರ್ಯಾಚರಣೆ

• ಉದಯವಾಹಿನಿ, ಬೆಂಗಳೂರು

ಕೇಂದ್ರ ವಿಭಾಗದ ಪೊಲೀಸರು ರಾತ್ರಿ ಡ್ರಗ್ ಪೆಡ್ಲರ್, ಹಳೇ ಆರೋಪಿಗಳು ಹಾಗೂ ರೌಡಿ ಶೀಟರ್‌ಗಳ ಮನೆ ಮೇಲೆ ದಾಳಿ ಮಾಡಿ ಕಾರ್ಯಾಚರಣೆ ನಡೆಸಿದ್ದಾರೆ.

ನಗರದಲ್ಲಿ ಹೆಚ್ಚಾಗುತ್ತಿರುವ ಅಕ್ರಮ ಚಟುವಟಿಕೆಗಳು, ಮಾದಕ ದ್ರವ್ಯ ಜಾಲ ಹಾಗೂ ಅಪರಾಧ ಕೃತ್ಯಗಳಿಗೆ ಕಡಿವಾಣ ಹಾಕುವ ಉದ್ದೇಶದಿಂದ ಡಿಸಿಪಿ ಅಕ್ಷಯ್ ಮಚೀಂದ್ರ ಹಕೇ ಅವರ ನೇತೃತ್ವದಲ್ಲಿ 400 ಕ್ಕೂ ಹೆಚ್ಚು ಅಧಿಕಾರಿ ಮತ್ತು ಸಿಬ್ಬಂದಿಗಳು ಈ ಕಾರ್ಯಾಚರಣೆ ಕೈಗೊಂಡಿದ್ದರು.

ಕೇಂದ್ರ ವಿಭಾಗದ ಎಲ್ಲಾ ಪೊಲೀಸ್ ಠಾಣೆ ವ್ಯಾಪ್ತಿಗಳು ಹಾಗೂ ಗಡಿಯಲ್ಲಿರುವ ಕೋರಮಂಗಲ, ಮಡಿವಾಳ, ಸಿದ್ದಾಪುರ ಪೊಲೀಸ್ ಠಾಣೆ ವ್ಯಾಪ್ತಿಗಳಲ್ಲೂ ಈ ಕಾರ್ಯಾಚರಣೆ ನಡೆಸಲಾಯಿತು. ಸಾರ್ವಜನಿಕ ಶಾಂತಿಗೆ ಧಕ್ಕೆ ತರುವ, ದಾಂಧಲೆ ನಡೆಸುವ ರೌಡಿಗಳಿಗೆ, ಹಳೇ ಆರೋಪಿಗಳಿಗೆ ಹಾಗೂ ಡ್ರಗ್‌ಸಪೆಡ್ಲರ್‌ಗಳಿಗೆ ಚಳಿ ಬಿಡಿಸಿದ್ದಾರೆ.

## ಶೀಘ್ರವೇ ಬಿಜೆಪಿ-ಜೆಡಿಎಸ್ ಮಧ್ಯೆ ಸಮನ್ವಯ ಸಮಿತಿ ರಚನೆ: ಹೆಚ್‌ಡಿಕೆ

• ಉದಯವಾಹಿನಿ, ಬೆಂಗಳೂರು

ಶೀಘ್ರವೇ ಬಿಜೆಪಿ-ಜೆಡಿಎಸ್ ಮಧ್ಯೆ ಸಮನ್ವಯ ಸಮಿತಿ ಸಭೆ ಆಗಲಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಜೊತೆ ಚರ್ಚೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ನಾವು ಆಗಾಗ ಭೇಟಿ ಆಗ್ತಾ ಇದ್ದೇವೆ. ರಾಜ್ಯದ ರಾಜಕೀಯದ ಬಗ್ಗೆ ವಿಜಯೇಂದ್ರ ಜೊತೆ ಚರ್ಚೆ ಆಗಿದೆ. ಸಮನ್ವಯ ಸಮಿತಿ ಬಗ್ಗೆ ಈಗಾಗಲೇ ಅಂತಿಮ ಆಗಿದೆ. ಶೀಘ್ರವೇ ಅಂತಿಮ ಆಗುತ್ತದೆ ಎಂದರು. ಹಿರಿಯೂರು ಉಪಚುನಾವಣೆಗೆ ಟಿಕೆಟ್ ಕೊಡಿ ಅಂತ ಮನವಿ ಮಾಡಿದ್ದೇವೆ ಅಂತ ಇದೇ ವೇಳೆ ಸ್ಪಷ್ಟಪಡಿಸಿದರು. ಖಾಸಗಿ ಹೋಟೆಲ್‌ನಲ್ಲಿ ಇಬ್ಬರು ನಾಯಕರು 30 ನಿಮಿಷಗಳ ಕಾಲ ಚರ್ಚೆ ಮಾಡಿದರು. ಸಭೆಯಲ್ಲಿ ಹಿರಿಯೂರು-ಧಾರವಾಡ ಗ್ರಾಮೀಣ ಭಾಗದ ಉಪಚುನಾವಣೆ ಕುರಿತು ಚರ್ಚೆ ಆಯ್ತು.

ಬಿಜೆಪಿ-ಜೆಡಿಎಸ್‌ಗೆ ಒಂದೊಂದು ಕ್ಷೇತ್ರದ ಬಗ್ಗೆ ಜೆಡಿಎಸ್‌ನಿಂದ ಪ್ರಸ್ತಾಪ ಮಾಡಲಾಗಿದೆ. 1+1 ಸೂತ್ರದ ಬಗ್ಗೆ ಚರ್ಚೆ ಮಾಡಲಾಗಿದೆ. ಇನ್ನು ಎರಡು ಕ್ಷೇತ್ರದಲ್ಲಿ ನಮ್ಮ ಸಂಘಟನೆ ಪ್ರಬಲವಾಗಿದೆ ಎಂದು ವಿಜಯೇಂದ್ರ ಪ್ರಸ್ತಾಪ ಮಾಡಿದ್ದು, ದೆಹಲಿಯಲ್ಲಿ ಹೈಕಮಾಂಡ್ ಬಳಿ ಜೊತೆ ಚರ್ಚೆ ಮಾಡಲು ಸಭೆಯಲ್ಲಿ ನಿರ್ಧಾರ ಮಾಡಲಾಗಿದೆ.

ರಾಜ್ಯ ಸರ್ಕಾರ ಶಾಶ್ವತ ನಿವಾಸ ಪ್ರಮಾಣ ಪತ್ರ ನಿಡ್ತಿರೋದು ಅಕ್ರಮ ವಲಸಿಗರನ್ನು ಸಕ್ರಮ ಮಾಡಲು ಎಂಬ ಬಿಜೆಪಿ ಆರೋಪಕ್ಕೆ ಕೇಂದ್ರ ಸಚಿವ ಕುಮಾರಸ್ವಾಮಿ ಧ್ವನಿಗೂಡಿಸಿದ್ದಾರೆ. ಜೆಪಿ ಭವನದಲ್ಲಿ ಮಾತನಾಡಿದ ಅವರು, ಬಿಜೆಪಿ ಹೇಳಿಕೆಗೆ ನಮ್ಮ ಸಹಮತ ಇದೆ. ನಿಜವಾದ ಮತದಾರರ ಉಳಿಸೋಕೆ ಮಾಡ್ತಿರೋದು. ಚುನಾವಣಾ ಆಯೋಗ ಗೊಂದಲಗಳನ್ನ ಸರಿ ಮಾಡಬೇಕು ಅನ್ನೋದು ನಮ್ಮ ಒತ್ತಾಯ ಎಂದರು.

## ಮುಚ್ಚೋ ಸ್ಥಿತಿಗೆ ಸರ್ಕಾರಿ ಶಾಲೆ ರಾಜ್ಯ ಸರ್ಕಾರದ ವಿರುದ್ಧ ಪ್ರಹ್ಲಾದ ಜೋಶಿ ಕಿಡಿ

• ಉದಯವಾಹಿನಿ, ಬೆಂಗಳೂರು

ಬಡ ಮತ್ತು ಮಧ್ಯಮ ವರ್ಗದ ಮಕ್ಕಳಿಗೆ ಆಸರೆಯಾಗಿದ್ದ ಸಾವಿರಾರು ಸರ್ಕಾರಿ ಶಾಲೆಗಳನ್ನು ಮುಚ್ಚುವ ಸ್ಥಿತಿಗೆ ತರುವ ಮೂಲಕ ರಾಜ್ಯ ಕಾಂಗ್ರೆಸ್ ಆಡಳಿತಾತ್ಮಕ ದಿವಾಳಿತನ ಪ್ರದರ್ಶಿಸಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಹ್ಲಾದ್ ಜೋಶಿ ಆರೋಪಿಸಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ದಿನದಿಂದಲೂ ಅಧಿಕಾರ, ಕುರ್ಚಿ ಕಿತ್ತಾಟದಲ್ಲೇ ಕಾಲ ಕಳೆದಿದೆ. ಪರಿಣಾಮ ಆಡಳಿತಯಂತ್ರ ಸಂಪೂರ್ಣ ಸ್ತಬ್ಧಗೊಂಡಂತಿದ್ದು, ಶಿಕ್ಷಣ ಕ್ಷೇತ್ರದ ಮೇಲೂ ನೇರ ದುಷ್ಪರಿಣಾಮ ಬೀರಿದೆ ಎಂದು ವಾಗ್ದಾಳಿ ನಡೆಸಿದ್ದಾರೆ. ರಾಜ್ಯದ ಸಹಸ್ರಾರು ಸರ್ಕಾರಿ ಶಾಲೆಗಳಲ್ಲಿ ಇಂದು ಮಕ್ಕಳ ದಾಖಲಾತಿ ಭಾರೀ ಕುಸಿದಿದೆ.

ವರದಿಯೇ ಇದನ್ನು ಬಹಿರಂಗಪಡಿಸಿದ್ದು, ಪ್ರತಿ ವರ್ಷವೂ ಮಕ್ಕಳ ಸಂಖ್ಯೆ ಗಣನೀಯವಾಗಿ ಕ್ಷೀಣಿಸುತ್ತಲೇ ಇದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ರಾಜ್ಯದಲ್ಲಿ ಕಳೆದ ಮೂರು ವರ್ಷದಲ್ಲಿ 2.12 ಲಕ್ಷ ಮಕ್ಕಳು ಸರ್ಕಾರಿ ಶಾಲೆ ತೊರೆದಿರುವುದು ಕಾಂಗ್ರೆಸ್ ಸರ್ಕಾರದ ನಿಷ್ಕ್ರಿಯತೆಗೆ ಕೈಗನ್ನಡಿ. ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸುವ ಬದಲು ಮುಚ್ಚುವಂಥ ಸ್ಥಿತಿಗೆ ತಂದಿರುವುದೇ ಈ ಸರ್ಕಾರದ ಮಹತ್ಸಾಧನೆ ಟೀಕಿಸಿದ್ದಾರೆ.

2023-24ರಲ್ಲಿ ಸರ್ಕಾರಿ ಶಾಲೆಗಳ ದಾಖಲಾತಿ 1,19,26,303 ಇದ್ದರೆ, 2024-25ರಲ್ಲಿ ಅದು 1,17,80,251ಕ್ಕೆ ಇಳಿದು 1,46,052 ವಿದ್ಯಾರ್ಥಿಗಳ ಕುಸಿತ ದಾಖಲಾಗಿದೆ.

## ನಾಳೆಯಿಂದ ರಾಜ್ಯದ ಎಲ್ಲಾ ಉಪನೋಂದಣಿ ಕಚೇರಿಗಳು ಎಂದಿನಂತೆ ಕಾರ್ಯನಿರ್ವಹಣೆ : ಇಲಾಖೆ ಮಾಹಿತಿ

• ಉದಯವಾಹಿನಿ, ಬೆಂಗಳೂರು

ಜು.12ರ ಭಾನುವಾರದಂದು ರಾಜ್ಯದ ಎಲ್ಲಾ ಉಪನೋಂದಣಿ ಕಚೇರಿಗಳು ಎಂದಿನಂತೆ ಕರ್ತವ್ಯ ನಿರ್ವಹಿಸಲಿವೆ ಎಂದು ನೋಂದಣಿ ಮತ್ತು ಮುದ್ರಾಂಕಗಳ ಇಲಾಖೆ ಮಾಹಿತಿ ನೀಡಿದೆ. ರಾಜ್ಯಾದ್ಯಂತ ಇರುವ ಎಲ್ಲಾ ಉಪನೋಂದಣಿ ಕಚೇರಿಗಳು ಇದೇ ಭಾನುವಾರ (ಜು.12) ಎಂದಿನಂತೆ ಕರ್ತವ್ಯ ನಿರ್ವಹಿಸಲಿವೆ. ಸಾರ್ವಜನಿಕ ರಜಾ ದಿನವಾಗಿದ್ದರೂ ಸಹ, ಸಾರ್ವಜನಿಕರ ಅನುಕೂಲಕ್ಕಾಗಿ ಮತ್ತು ಇಲಾಖೆಯ ಕಾರ್ಯದೊತ್ತಡ ನಿವಾರಣೆಗಾಗಿ ಎಂದಿನಂತೆ ತೆರೆದಿದ್ದು, ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸಲಿವೆ. ಈ ದಿನದಂದು ಸಾರ್ವಜನಿಕರು ಎಂದಿನಂತೆ ಆಸ್ತಿ ನೋಂದಣಿ, ಮುದ್ರಾಂಕ ಖರೀದಿ ಹಾಗೂ ಇಲಾಖೆಗೆ ಸಂಬಂಧಿಸಿದ ಇತರ ಸೇವೆಗಳನ್ನು ಪಡೆದುಕೊಳ್ಳಬಹುದಾಗಿದೆ. ಸಾರ್ವಜನಿಕರು ಈ ವಿಶೇಷ ಅವಕಾಶದ ಸದುಪಯೋಗವನ್ನು ಪಡೆದುಕೊಳ್ಳಬಹುದು ಎಂದು ನೋಂದಣಿ ಮತ್ತು ಮುದ್ರಾಂಕಗಳ ಇಲಾಖೆಯು ಪ್ರಕಟಣೆಯಲ್ಲಿ ತಿಳಿಸಿದೆ.



# ಮೈಸೂರು ಜಂಬೂಸವಾರಿ ಈ ಬಾರಿ ಭರ್ಜರಿ

## ಅದ್ದೂರಿಯಾಗಿ ನಡೆಯಲಿದೆ ದಸರಾ

- ಅಕ್ಟೋಬರ್ 11ರಿಂದ 11 ದಿನಗಳ ನಾಡಹಬ್ಬ ದಸರಾ ಉತ್ಸವ
- ದಸರಾ ಆಚರಣೆಗೆ ರಾಜ್ಯ ಸರ್ಕಾರದಿಂದ ಸಕಲ ಸಿದ್ಧತೆಗಳು ಆರಂಭ
- ಮೈಸೂರು ದಸರಾದಲ್ಲಿ ದಕ್ಷಿಣ ಕನ್ನಡದ ಕಂಬಳ ಇರುತ್ತಾ?



### ಏರ್ ಶೋ ನಡೆಸುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಮನವಿ

ಇಂದಿನ ಸಭೆಯಲ್ಲಿ ಅನೇಕ ಸಭೆಗಳು ಬಂದಿದೆ. ದಸರಾ ಆಯೋಜನೆ ಹಿನ್ನೆಲೆಯಲ್ಲಿ ಶೀಘ್ರದಲ್ಲೇ ಕಾರ್ಯಕಾರಿ ಸಮಿತಿ ರಚನೆ ಮಾಡಲಿದ್ದೇನೆ. ಈ ಬಾರಿ ಏರ್ ಶೋ ನಡೆಸಲು ಕೇಂದ್ರ ಸರ್ಕಾರದ ಬಳಿ ಮನವಿ ಮಾಡಬೇಕು ಎಂದು ಸಲಹೆ ಬಂದಿದೆ. ಹೀಗಾಗಿ, ಈ ವಿಚಾರವಾಗಿ ಕೇಂದ್ರಕ್ಕೆ ಮನವಿ ಸಲ್ಲಿಸಲಾಗುವುದು. ದಸರಾ ಉದ್ಘಾಟನೆಯನ್ನು ಯಾರ ಕೈಯಿಂದ ಮಾಡಿಸಬೇಕು ಎಂಬ ತೀರ್ಮಾನವನ್ನು ಸಮಿತಿಯು ಮುಖ್ಯಮಂತ್ರಿಗಳಿಗೆ ನೀಡಿದ್ದಾರೆ. ನಾನು ಚರ್ಚೆ ಮಾಡಿ ತೀರ್ಮಾನ ಮಾಡಲಿದ್ದೇನೆ ಎಂದು ತಿಳಿಸಿದರು.

• ಉದಯವಾಹಿನಿ, ಬೆಂಗಳೂರು

ವಿಶ್ವವಿಖ್ಯಾತ ಮೈಸೂರು ದಸರಾ 2026ರ ಉದ್ಘಾಟನೆಗೆ ಶುಕ್ರವಾರ ಮುಹೂರ್ತ ನಿಗದಿ ಮಾಡಲಾಗಿದ್ದು, ನಾಡಹಬ್ಬವನ್ನು ಈ ಬಾರಿ ಅದ್ದೂರಿಯಾಗಿ ಆಚರಿಸಲು ರಾಜ್ಯ ಸರ್ಕಾರ ನಿರ್ಧಾರಿಸಿದೆ. ನಾಡಹಬ್ಬ ದಸರಾ - 2026 ಆಚರಿಸುವ ಸಂಬಂಧ ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ನಡೆದ ಉನ್ನತ ಮಟ್ಟದ ಪೂರ್ವಭಾವಿ ಸಭೆಯಲ್ಲಿ ದಸರಾ ಉದ್ಘಾಟನೆಗೆ ದಿನಾಂಕ ಫಿಕ್ಸ್ ಆಗಿದೆ.

ಜುಲೈ 26ರಂದು ಗಜಪಯಣ ಆರಂಭವಾಗಲಿದ್ದು, ಅಕ್ಟೋಬರ್ 11ಕ್ಕೆ ದಸರಾ ಉದ್ಘಾಟನೆಗೊಳ್ಳಲಿದೆ. ಅ.21ರಂದು ವಿಜಯದಸಮಿ ಜಂಬೂಸವಾರಿ ನಡೆಯಲಿದೆ. ಅಂದು ಸಾಯಂಕಾಲ 4:10ರ ಮೀನಾ ಲಗ್ನದಲ್ಲಿ ಜಂಬೂಸವಾರಿಗೆ ಮುಖ್ಯಮಂತ್ರಿಗಳು ಪುಷ್ಪಾರ್ಚನೆ ಮಾಡುವ ಮೂಲಕ ಚಾಲನೆ ನೀಡಲಿದ್ದಾರೆ. ಈ ದಸರಾವನ್ನು ಅದ್ದೂರಿಯ ಜೊತೆಗೆ ವೈವಿಧ್ಯಮಯ ಕಾರ್ಯಕ್ರಮಗಳ ಮೂಲಕ ನಾಡಹಬ್ಬವನ್ನು ಆಚರಿಸಲು ಸಿಎಂ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ತೀರ್ಮಾನಿಸಲಾಗಿದೆ. ನಾಡಹಬ್ಬದ ರೂಪುರೇಷೆ ಸೇರಿದಂತೆ ಗಜ ಪಯಣ, ದಸರಾ ಉದ್ಘಾಟನೆ, ಜಂಬೂ ಸವಾರಿ ಸೇರಿದಂತೆ ಈ ಬಾರಿ ದಸರಾದ ಪ್ರಮುಖ ಕಾರ್ಯಕ್ರಮಗಳ ಕುರಿತು ಸಿಎಂ ಡಿಕೆ ಶಿವಕುಮಾರ್ ಅವರು ಚರ್ಚೆ ನಡೆಸಿದರು. ಮೈಸೂರು ದಸರಾ ಐತಿಹಾಸಿಕ ಮತ್ತು ಪಾರಂಪರಿಕ ಉತ್ಸವವಾಗಿದ್ದು, ಅದರ ಘನತೆಗೆ ಯಾವುದೇ ಧಕ್ಕೆಯಾಗದಂತೆ ಕಾಲಕ್ಕೆ ತಕ್ಕ ಬದಲಾವಣೆಗಳನ್ನು ಅಳವಡಿಸಿಕೊಂಡು ಅಂತಾರಾಷ್ಟ್ರೀಯ ಮಟ್ಟದ ಗುಣಮಟ್ಟದಲ್ಲಿ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಮೈಸೂರು ದಸರಾ ನಮ್ಮ ರಾಜ್ಯದ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಜಗತ್ತಿಗೆ ಪರಿಚಯಿಸುವ ಮಹೋತ್ಸವವಾಗಿದ್ದು, ನಮ್ಮ ಸಂಸ್ಕೃತಿ ಮತ್ತು ಸಂಪ್ರದಾಯಗಳಿಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದರು.

ರಾಜ್ಯದಲ್ಲಿ ಶಕ್ತಿ ಯೋಜನೆ ಜಾರಿ ಮಾಡಿದ ಬಳಿಕ ಪ್ರವಾಸಿಗರ ಸಂಖ್ಯೆಯಲ್ಲಿ ಗಣನೀಯ ಏರಿಕೆಯಾಗಿದ್ದು,ಈ ಹಿನ್ನೆಲೆಯಲ್ಲಿ ಅಗತ್ಯ ಮೂಲಸೌಕರ್ಯ ಮತ್ತು ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಬೇಕು.

ರಾಷ್ಟ್ರಮಟ್ಟದ ಖ್ಯಾತಿಯ ಗಾಯಕರುಹಾಗೂ ಕಲಾವಿದರನ್ನು ಆಹ್ವಾನಿಸಿ ಜನರಿಗೆ ಗುಣಮಟ್ಟದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೀಡಲಾಗಿದ್ದು, ಈ ಪರಂಪರೆ ಮುಂದುವರಿಸಬೇಕು. ದಸರಾ ಕುರಿತು ಟೀಕೆ-ವಿಮರ್ಶೆಗಳು ಸಹಜ. ಜನರ ನಿರೀಕ್ಷೆಗೆ ತಕ್ಕಂತೆ ಅತ್ಯುತ್ತಮ ಉತ್ಸವ ಆಯೋಜಿಸುವುದರತ್ತ ಸಂಪೂರ್ಣ ಗಮನಹರಿಸಬೇಕು ಎಂದರು. ಡಾ. ಜಿ ಪರಮೇಶ್ವರ, ಸಚಿವ ಕೆ.ಜೆ ಜಾರ್ಜ್, ಪ್ರಿಯಾಂಕ್ ಖರ್ಗೆ, ಯತೀಂದ್ರ ಸಿದ್ದರಾಮಯ್ಯ, ಮಾಜಿ ಸಚಿವ ಹೆಚ್.ಸಿ ಮಹದೇವಪ್ಪ, ಕೆ. ವೆಂಕಟೇಶ್, ಸಂಸದ ಯದುವೀರ್ ಒಡೆಯರ್, ಮಾಜಿ ಸಚಿವ ಜಿ.ಟಿ ದೇವೇಗೌಡ, ಶಾಸಕರಾದ ತನ್ವೀರ್ ಸೇಠ್, ಅನಿಲ್ ಚಿಕ್ಕಮಾದು, ರಮೇಶ್ ಬಂಡಿಸಿದ್ದೇಗೌಡ, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅಧಿಕಾರಿಗಳು ಉಪಸ್ಥಿತರಿದ್ದರು.





### ದಸರಾ ವೇಳೆ 2 ದಿನಗಳ ಕಾಲ ಕಂಬಳ ಆಯೋಜನೆಗೆ ಮನವಿ

ಇನ್ನು ಮೈಸೂರು ದಸರಾದಲ್ಲಿ ಮೊದಲ ಬಾರಿಗೆ ಕರಾವಳಿಯ ಸಾಂಪ್ರದಾಯಿಕ ಕ್ರೀಡೆ ಕಂಬಳವನ್ನು ಆಯೋಜಿಸುವ ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು. ಅಕ್ಟೋಬರ್ 18 ಮತ್ತು 19ರಂದು ಎರಡು ದಿನಗಳ ಕಾಲ ಕಂಬಳ ಆಯೋಜಿಸಲು ಮತ್ತು ಇದಕ್ಕೆ ಪ್ರತ್ಯೇಕ ಅನುದಾನ ನೀಡುವಂತೆ ಕಂಬಳ ಸಮಿತಿ ಮನವಿ ಮಾಡಿದೆ.

ದಸರಾ ಮಹೋತ್ಸವದ ವೇಳೆ ಭದ್ರತೆ, ಸ್ವಚ್ಛತೆ ಕಾಪಾಡುವುದು, ಅಗತ್ಯ ಮೂಲಸೌಕರ್ಯ ಕಲ್ಪಿಸುವುದು ಹಾಗೂ ದೇಶ-ವಿದೇಶಿ ಪ್ರವಾಸಿಗರನ್ನು ಆಕರ್ಷಿಸಲು ಪ್ರವಾಸೋದ್ಯಮಕ್ಕೆ ವಿಶೇಷ ಉತ್ತೇಜನ ನೀಡುವ ಕುರಿತು ಸಭೆಯಲ್ಲಿ ಸುದೀರ್ಘ ಸಮಾಲೋಚನೆ ಮಾಡಲಾಗಿದೆ. ಇನ್ನು ಈ ಬಾರಿಯ ದಸರಾ ಮಹೋತ್ಸವದ ಉದ್ಘಾಟಕರನ್ನು ನಿರ್ಣಯಿಸುವ ಅಧಿಕಾರವನ್ನು ಸಿಎಂಗೆ ವಹಿಸುವ ಸಾಧ್ಯತೆಯಿದೆ.

### ಬರಗಾಲವಿದ್ದರೂ ಸಂಭ್ರಮಕ್ಕೆ ಕೊರತೆಯಿಲ್ಲ

ಬರಗಾಲದ ನೆಪವೊಡ್ಡಿ ದಸರಾ ಹಬ್ಬವನ್ನು ಸರಳವಾಗಿ ಆಚರಿಸುವ ಅಥವಾ ನಿಲ್ಲಿಸುವ ಪ್ರಶ್ನೆಯೇ ಇಲ್ಲ. ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಭವ್ಯತೆಯನ್ನು ಉಳಿಸಿಕೊಳ್ಳುವುದು ಸರ್ಕಾರದ ಆದ್ಯತೆ.

ಪ್ರವಾಸಿಗರ ಸಂಖ್ಯೆ ಹೆಚ್ಚುತ್ತಿರುವುದರಿಂದ ದೀಪಾಲಂಕಾರ ಸೇರಿದಂತೆ ಎಲ್ಲಾ ವ್ಯವಸ್ಥೆಗಳನ್ನು ಅದ್ದೂರಿಯಾಗಿ ಮಾಡಲಾಗುವುದು, ಎಂದು ಶಿವಕುಮಾರ್ ಸ್ಪಷ್ಟಪಡಿಸಿದರು.

### ರಾಜಕೀಯ ರಹಿತ ಆಚರಣೆ

ದಸರಾ ಸಮಿತಿ ರಚನೆಯಲ್ಲಿ ಯಾವುದೇ ರಾಜಕೀಯ ಮಾಡದೆ. ಎಲ್ಲಾ ಪಕ್ಷಗಳ ಜನಪ್ರತಿನಿಧಿಗಳನ್ನು ವಿಶ್ವಾಸಕ್ಕೆ ಪಡೆದು ಹಬ್ಬ ಯಶಸ್ವಿಗೊಳಿಸಲಾಗುವುದು. ಶಕ್ತಿ ಯೋಜನೆಯಿಂದಾಗಿ ಪ್ರವಾಸಿಗರ ಸಂಖ್ಯೆ ದುಪ್ಪಟ್ಟಾಗಿದ್ದು, ಅವರಿಗೆ ಅಗತ್ಯವಾದ ಸೌಲಭ್ಯ ಗೋಲ್ಡನ್ ಪಾಸ್' ವಿತರಣೆಯ ಬಗ್ಗೆ ಜಿಲ್ಲಾಡಳಿತದೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

## ಕೆಆರ್‌ಎಸ್ ಜಲಾಶಯದಿಂದ ಇನ್ನೆರಡು ದಿನದಲ್ಲಿ ನಾಲೆಗಳಿಗೆ ನೀರು:ಐಸಿಸಿ ಸಭೆ

• ಉದಯವಾಹಿನಿ, ಬೆಂಗಳೂರು

ಕೆಆರ್‌ಎಸ್ ಜಲಾಶಯದಿಂದ ಇನ್ನೆರಡು ದಿನಗಳಲ್ಲಿ ನಾಲೆಗಳಿಗೆ ನೀರು ಹರಿಸಲಾಗುವುದು. 15 ದಿನ ನಿರಂತರವಾಗಿ ನೀರು ಹರಿಯಬೇಕು' ಎಂಬ ತೀರ್ಮಾನವನ್ನು ನೀರಾವರಿ ಸಲಹಾ ಸಮಿತಿ ಸಭೆ ಕೈಗೊಂಡಿದೆ. ರಾಜ್ಯದ ಜಲಸಂಪನ್ಮೂಲ ಸಚಿವ ರಾಮಲಿಂಗಾ ರೆಡ್ಡಿ ಅಧ್ಯಕ್ಷತೆಯಲ್ಲಿ ಶುಕ್ರವಾರ ಬೆಂಗಳೂರಿನ ವಿಕಾಸಸೌಧದಲ್ಲಿ ನೀರಾವರಿ ಸಲಹಾ ಸಮಿತಿ (ಐಸಿಸಿ) ಸಭೆ ನಡೆಯಿತು.

ಮಂಡ್ಯ ಜಿಲ್ಲೆಯ ರೈತರ ಹಿತದೃಷ್ಟಿಯಿಂದ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ. ಮಂಡ್ಯ ಭಾಗದ ಬೆಳೆಗಳ ಸ್ಥಿತಿ, ಜಲಾಶಯಗಳಲ್ಲಿನ ನೀರಿನ ಲಭ್ಯತೆ ಹಾಗೂ ನೀರಿನ ನಿರ್ವಹಣೆ ಕುರಿತು ಸಮಗ್ರ ಚರ್ಚೆ ನಡೆಯಿತು. ರೈತರ ಸಂಕಷ್ಟವನ್ನು ಮನಗಂಡು ತ್ವರಿತವಾಗಿ ನೀರು ಬಿಡುಗಡೆ ಮಾಡುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು. ಮಂಡ್ಯ ಜಿಲ್ಲೆಯ ರೈತರು ಯಾವುದೇ ಆತಂಕ ಪಡುವ ಅಗತ್ಯವಿಲ್ಲ. ನಿಗದಿತ ವೇಳಾಪಟ್ಟಿಯಂತೆ ಮುಂದಿನ ಎರಡು ದಿನಗಳಲ್ಲಿ ನಾಲೆಗಳಿಗೆ ನೀರು ಹರಿದು, ಮುಂದಿನ 15 ದಿನ ನೀರಾವರಿಗೆ ಅನುಕೂಲವಾಗಲಿದೆ ಎಂದು ಸಭೆಯಲ್ಲಿ ಸ್ಪಷ್ಟಪಡಿಸಲಾಯಿತು. ಜಿಲ್ಲೆಯ ರೈತರ ಪರವಾಗಿ ಶಾಸಕರಾದ ರಮೇಶ ಬಂಡಿಸಿದ್ದೇಗೌಡ, ಪಿ.ರವಿಕುಮಾರ್, ಕೆ.ಎಂ. ಉದಯ್ ಮಾತನಾಡಿ, ಜಿಲ್ಲೆಯಲ್ಲಿ ಬೆಳೆಗಳು ಒಣಗುತ್ತಿದ್ದು, ರೈತರು ಸಂಕಷ್ಟಕ್ಕೆ ತುತ್ತಾಗಿದ್ದಾರೆ. ಕೂಡಲೇ ನೀರು ಬಿಡುಗಡೆ ಮಾಡುವಂತೆ ಮನವಿ ಮಾಡಿದರು. ಅದಕ್ಕೆ ಸ್ಪಂದಿಸಿದ ಸಚಿವರು ಅಧಿಕಾರಿಗಳಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಸಚಿವ ಯತೀಂದ್ರ ಸಿದ್ದರಾಮಯ್ಯ, ಜಿ.ಟಿ.ದೇವೇಗೌಡ, ದರ್ಶನ್ ಧ್ರುವನಾರಾಯಣ್, ವಿಧಾನ ಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ, ವಿವೇಕಾನಂದ, ಮೈಸೂರು ಪ್ರಾದೇಶಿಕ ಆಯುಕ್ತ ನಿತೀಶ್ ಪಾಟೀಲ್, ಜಿಲ್ಲಾಧಿಕಾರಿ ಕುಮಾರ, ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಹೇಶ್, ಮುಖ್ಯ ಎಂಜಿನಿಯರ್



ಗಣೇಶ್, ಅಧೀಕ್ಷಕ ಎಂಜಿನಿಯರ್ ಕೆ.ರಘುರಾಮನ್, ಜಂಟಿ ಕೃಷಿ ನಿರ್ದೇಶಕ ಜಿ.ಎಸ್. ಜಯಸ್ವಾಮಿ ಭಾಗವಹಿಸಿದ್ದರು. ಒಣಗುತ್ತಿರುವ ಬೆಳೆಗಳಿಗೆ ಕೂಡಲೇ ನಾಲೆಗಳಿಗೆ ನೀರು ಹರಿಸಿ ಎಂದು ಒಂದು ವಾರದಿಂದ ಜಿಲ್ಲೆಯ ವಿವಿಧೆಡೆ ರೈತರು ನಿರಂತರವಾಗಿ ಪ್ರತಿಭಟನೆ ನಡೆಸಿದ್ದರು. ರೈತರ ಹೋರಾಟ ಮತ್ತು ಜಿಲ್ಲೆಯ ಶಾಸಕರ ಮನವಿಗೆ ರಾಜ್ಯ ಸರ್ಕಾರ ಸ್ಪಂದಿಸಿದೆ.

ಶಾಸಕ ದರ್ಶನ್ ಪುಟ್ಟಣ್ಣಯ್ಯ ನೇತೃತ್ವದಲ್ಲಿ ರೈತಸಂಘದ ಕಾರ್ಯಕರ್ತರು ಕೆಆರ್‌ಎಸ್‌ನಲ್ಲಿ ಪ್ರತಿಭಟಿಸಿದ್ದರು. ರೈತನಾಯಕ ಕೆ.ಎಸ್. ನಂಜುಂಡೇಗೌಡರ ನೇತೃತ್ವದಲ್ಲಿ ಭೂಮಿತಾಯಿ ಹೋರಾಟ ಸಮಿತಿ ಕಾರ್ಯಕರ್ತರು ಕೆಆರ್‌ಎಸ್‌ನ ಕಾವೇರಿ ನೀರಾವರಿ ನಿಗಮದ ಕಚೇರಿಗೆ ಮುತ್ತಿಗೆ ಹಾಕಿದ್ದರು. ಕಾವೇರಿ ನದಿಗಿಳಿದು ಪ್ರತಿಭಟನೆ ನಡೆಸಿದ್ದರು. ಈ ಮಧ್ಯೆ ಜಿಲ್ಲಾಧಿಕಾರಿ ಕುಮಾರ ಅವರು ಎರಡು ದಿನಗಳ ಹಿಂದೆ ರೈತಸಂಘದ ಮುಖಂಡರೊಂದಿಗೆ 'ಮುಂಗಾರು ಪರಿಸ್ಥಿತಿ ಮತ್ತು ರೈತರ ಸಮಸ್ಯೆ ಮತ್ತು ಕುಂದುಕೊರತೆ ವಿಚಾರಣಾ ಸಭೆ ನಡೆಸಿದ್ದರು. ಆ ಸಭೆಯಲ್ಲೂ ರೈತರು ನಾಲೆಗಳಿಗ ನೀರು ಹರಿಸಲು ಕ್ರಮ ವಹಿಸುವಂತೆ ಜಿಲ್ಲಾಡಳಿತದ ಮೇಲೆ ಒತ್ತಡ ಹೇರಿದ್ದರು.

## ಬೀದಿ ವ್ಯಾಪಾರಿಗಳ ಅನ್ನ ಕಸಿಯಬೇಡಿ: ತೆರವು ಕಾರ್ಯಾಚರಣೆ ಟೀಕಿಸಿದ ವಿಜಯೇಂದ್ರ

• ಉದಯವಾಹಿನಿ, ಬೆಂಗಳೂರು



ನಗರದಲ್ಲಿ ಫುಟ್‌ಪಾತ್ ತೆರವುಗೊಳಿಸುವ ಕಾರ್ಯ ಸಮರೋಪಾದಿಯಲ್ಲಿ ಸಾಗಿದೆ. ಈ ನಡುವೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಫುಟ್‌ಪಾತ್ ತೆರವುಗೊಳಿಸುವುದನ್ನು ಪ್ರಶ್ನಿಸಿದ್ದಾರೆ. ಈ ಸಂಬಂಧ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು ಸರ್ಕಾರದ ವಿರುದ್ಧ ಕಿಡಿಕಾರಿದ್ದು, ಫುಟ್‌ಪಾತ್ ಮೇಲೆ ವ್ಯಾಪಾರ ಮಾಡಿಕೊಂಡು ಬದುಕು ಕಟ್ಟಿಕೊಂಡವರ ಅನ್ನವನ್ನು ಕಸಿಯುವುದು ಸರಿಯಲ್ಲ ಎಂದು ಟೀಕಿಸಿದ್ದಾರೆ.

ನಗರದ ಕಾಳಜಿ ಹಾಗೂ ಪಾದಚಾರಿಗಳ ಹಿತರಕ್ಷಣೆಯ ಕಳಕಳಿಯನ್ನು ಅನುಮಾನಿಸುವುದಿಲ್ಲ. ಆದರೆ ದಿನದ ಆದಾಯವನ್ನು ನೆಚ್ಚಿಕೊಂಡು, ಹೊಟ್ಟೆ ತುಂಬಿಸಿಕೊಳ್ಳುವ ಸ್ಥಿತಿಯಲ್ಲಿ ಬದುಕು ಕಟ್ಟಿಕೊಂಡಿರುವ ಫುಟ್‌ಪಾತ್ ವ್ಯಾಪಾರಿಗಳ ಲಕ್ಷಾಂತರ ಕುಟುಂಬಗಳ ಅನ್ನದ ದಾರಿಯನ್ನು ಬಂದ್ ಮಾಡುವುದು ಎಷ್ಟು ಸರಿ ? ಎಂಬ ಪ್ರಶ್ನೆಯೂ ನಮ್ಮ ಮುಂದಿದೆ. ಫುಟ್‌ಪಾತ್ ತೆರವು ಕಾರ್ಯಾಚರಣೆ ಎಂಬುದು ಸರ್ಕಾರದ ದ್ವಂದ್ವ ಮತ್ತು ಎಡಬಿಡಂಗಿ ಧೋರಣೆಗೆ ಮತ್ತೊಂದು ಉದಾಹರಣೆ. ಫುಟ್ಪಾತ್ ತೆರವು ಕಾರ್ಯಾಚರಣೆಗೆ ಮುನ್ನ ಕಾಂಗ್ರೆಸ್ ಸರ್ಕಾರ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಿ' ಎಂದಿದ್ದಾರೆ.

ಬೀದಿಬದಿ ವ್ಯಾಪಾರಗಳನ್ನು ಏಕಾಏಕಿ ತೆರವು ಮಾಡುವುದಾದರೆ ಕಾಂಗ್ರೆಸ್ ಸರ್ಕಾರ ಬಡವರ ಕಾಳಜಿ ಎಂಬುದು ತೋರಿಕೆ ಮಾತಲ್ಲವೇ?, ಬೀದಿ ವ್ಯಾಪಾರಿಗಳ ತೆರವು ಮಾಡುವ ಮುನ್ನ ಸೂಕ್ತ ಪುನರ್ವಸತಿ, ಪರ್ಯಾಯ ವ್ಯವಸ್ಥೆ ರೂಪಿಸಬೇಕಲ್ಲವೇ?, ಪರ್ಯಾಯ ವ್ಯವಸ್ಥೆ ಮಾಡದೇ ತೆರವು ಮಾಡುವುದು ಸರಿಯೇ?, ಬೀದಿಬದಿ ವ್ಯಾಪಾರಕ್ಕೆ ಇಲ್ಲಿವರೆಗೆ ಅನುವು ಮಾಡಿಕೊಟ್ಟ ಅಧಿಕಾರಿಗಳಿಗೆ ಯಾವ ಶಿಕ್ಷೆ ಕೊಡುತ್ತೀರಿ?, ಇಡೀ ಬೆಂಗಳೂರು ನಗರದಲ್ಲಿ ತರಕಾರಿ ಮಾರಾಟ ರಸ್ತೆಯ ಬದಿಯಲ್ಲೇ ನಡೆಯುತ್ತಿರುವುದು ನಿಮ್ಮ ಕಣ್ಣಿಗೆ ಕಾಣಿಸಿಲ್ಲವೇ? ತರಕಾರಿ ಮಾರುಕಟ್ಟೆ ನಿರ್ಮಿಸುವುದು ನಿಮ್ಮ ಕರ್ತವ್ಯ ಅಲ್ಲವೇ?, ಸಣ್ಣ ಮತ್ತು ಅತಿಸಣ್ಣ ವ್ಯಾಪಾರಿಗಳು ಆರ್ಥಿಕತೆಗೆ ಶೇ50 ಕೊಡುಗೆ ಕೊಡುತ್ತಿರುವುದು ನಿಮ್ಮ ಗಮನಕ್ಕೆ ಇಲ್ಲವೇ?, ನಿಮ್ಮ ಈ ಕ್ರಮ ಹದಗೆಟ್ಟ ರಾಜ್ಯದ ಆರ್ಥಿಕತೆಯನ್ನು ಮತ್ತಷ್ಟು ಪಾತಾಳಕ್ಕೆ ತಳ್ಳುವುದಿಲ್ಲವೇ?, ಬೀದಿಬದಿ ವ್ಯಾಪಾರ ಮಾಡುವ ಬಡವರ ಮೇಲೆ ಗದಾಪ್ರಹಾರ ಮಾಡಲು ಹೊರಟಿರುವ ನೀವು ರಾಜಕಾಲುವೆಯೂ ಸೇರಿ ಬಲಾಢ್ಯರ ಒತ್ತುವರಿ ತೆರವಿಗೆ ಯಾವ ಕ್ರಮ ತೆಗೆದುಕೊಂಡಿದ್ದೀರಿ ಬಹಿರಂಗಪಡಿಸುವಿರಾ?, ಮಳೆಗಾಲದಲ್ಲಿ ಇಡೀ ಬೆಂಗಳೂರು ಮುಳುಗಡೆ ಸಮಸ್ಯೆ ಎದುರಿಸುವುದಕ್ಕೆ ಉಳ್ಳವರ ಒತ್ತುವರಿಯೇ ಕಾರಣವಲ್ಲವೇ?, ಫುಟ್‌ಪಾತ್ ತೆರವು ಕಾರ್ಯಾಚರಣೆ ಹೆಸರಲ್ಲಿ ನಿಮಗೆ ಉಚಿತ ಪ್ರಚಾರ ಸಿಗಬಹುದು ನಿಜ. ಸಮಸ್ಯೆಗೆ ಶಾಶ್ವತ ಪರಿಹಾರ ಸಿಗಲು ಸಾಧ್ಯವೇ, ಫುಟ್‌ಪಾತ್ ತೆರವು ಮಾಡಲೇಬೇಕು, ಪಾದಚಾರಿಗಳ ಸುರಕ್ಷಿತ ಸಂಚಾರಕ್ಕೆ ಅನುವು ಮಾಡಿಕೊಡಲೇಬೇಕು.

# ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆ ವಿಳಂಬ : ಸಚಿವಾಕಾಂಕ್ಷಿಗಳ ಬೇಸರ

## ಕಾಂಗ್ರೆಸ್ ವಲಯದಲ್ಲಿ ಅಸಹನೆ ಹಾಗೂ ಚಡಪಡಿಕೆಗಳು ಶುರು; ಸರ್ಕಾರದ ಬುಡ ಅಲುಗಾಡಲಿದೆ ಎಂದು ವಿರೋಧ ಪಕ್ಷಗಳು ಭವಿಷ್ಯ

• ಉದಯವಾಹಿನಿ, ಬೆಂಗಳೂರು

ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆ ವಿಳಂಬವಾಗುತ್ತಿರುವುದಕ್ಕೆ ಕಾಂಗ್ರೆಸ್ ವಲಯದಲ್ಲಿ ಅಸಹನೆ ಹಾಗೂ ಚಡಪಡಿಕೆಗಳು ಶುರುವಾಗಿವೆ.ಸಂಪುಟ ವಿಸ್ತರಣೆಯಾಗುತ್ತಿದ್ದಂತೆ ಸರ್ಕಾರದ ಬುಡ ಅಲುಗಾಡಲಿದೆ ಎಂದು ವಿರೋಧ ಪಕ್ಷಗಳು ಭವಿಷ್ಯ ನುಡಿದಿವೆ. ಅದನ್ನು ತಳ್ಳಿಹಾಕುವ ಬದಲಾಗಿ ಮೂರ್ನಾಲ್ಕು ದಿನ ಗೊಂದಲಗಳಾಗುವುದು ನಿಜ ಎಂದು ಸಚಿವ ಸತೀಶ್ ಜಾರಕಿಹೊಳಿಯವರೇ ಒಪ್ಪಿಕೊಂಡಿದ್ದಾರೆ. ಬುಡ ಅಲುಗಾಟದ ಭಯದಿಂದಲೇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಂಪುಟ ವಿಸ್ತರಣೆಯನ್ನು ಮುಂದೂಡುತ್ತಿದ್ದಾರೆಯೇ ಎಂಬ ಅನುಮಾನಗಳು ಕಾಡಲಾರಂಭಿಸಿವೆ. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ, ಜೂನ್ 3ರಂದು ಡಿ.ಕೆ.ಶಿವಕುಮಾರ್ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ್ದರು. ಅವರೊಂದಿಗೆ 13 ಸಚಿವರು ಸಂಪುಟ ಸೇರಿದ್ದಾರೆ.

ಸುಮಾರು 16 ಪ್ರಮುಖ ಇಲಾಖೆಗಳಿಗೆ ಸಚಿವರ ನಿಯೋಜನೆಯಾಗಿದೆ. ಉಳಿದಂತೆ ಬಹುತೇಕ ಇಲಾಖೆಗಳು ಮುಖ್ಯಮಂತ್ರಿಯವರ ವ್ಯಾಪ್ತಿಯಲ್ಲೇ ಇವೆ. ಶಾಲಾ ಶಿಕ್ಷಣ,



ಉನ್ನತ ಶಿಕ್ಷಣ, ಕೃಷಿ, ಸಹಕಾರ, ತೋಟಗಾರಿಕೆ, ಹಿಂದುಳಿದ ವರ್ಗಗಳ ಕಲ್ಯಾಣ, ಸಮಾಜ ಕಲ್ಯಾಣ, ಅರಣ್ಯ ಸೇರಿದಂತೆ ಪ್ರಮುಖ ಇಲಾಖೆಗಳಿಗೆ ಸಚಿವರಿಲ್ಲ.

ಶೈಕ್ಷಣಿಕ ವರ್ಷ ಆರಂಭವಾಗಿದ್ದು, ನಾನಾ ರೀತಿಯ ಸಮಸ್ಯೆಗಳು ಪೋಷಕರನ್ನು ಕಾಡುತ್ತಿವೆ. ಕೃಷಿ ಚಟುವಟಿಕೆಗಳ ವಿಚಾರದಲ್ಲೂ ಹಲವಾರು ಸಮಸ್ಯೆಗಳಿವೆ. ಇದರ ಬಗ್ಗೆ ಗಮನ ಹರಿಸಲು ಸಚಿವರಿಲ್ಲದೇ ಇರುವುದು ಸಮಸ್ಯೆಗೆ ಕಾರಣವಾಗಿದೆ. ಜುಲೈ 10ರಂದು ಎಂದರೆ ಇಂದು ಸಚಿವ ಸಂಪುಟ ವಿಸ್ತರಣೆಯಾಗಬಹುದು ಎಂದು ಹೇಳಲಾಗಿತ್ತು. ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ವಿದೇಶ ಪ್ರವಾಸದಲ್ಲಿರುವುದರಿಂದ ಅವರೊಂದಿಗೆ ಚರ್ಚೆ ಸಾಧ್ಯವಾಗಿಲ್ಲ. ಸಂಪುಟ ವಿಸ್ತರಣೆಯೂ ಮತ್ತಷ್ಟು ಮುಂದೂಡಿಕೆಯಾಗುತ್ತಿದೆ ಎಂದು ಹೇಳಲಾಗುತ್ತಿದೆ. ಜುಲೈ 14ರಿಂದ ಆಷಾಢ ಮಾಸ ಶುರುವಾಗಲಿದೆ. ಬಹುತೇಕರು ಆಷಾಢ ಮಾಸದಲ್ಲಿ ಹೊಸ ಕೆಲಸ ಅಥವಾ ಜವಾಬ್ದಾರಿಗಳಿಗೆ ಕೈ ಹಾಕಲು ಹಿಂದೇಟು ಹಾಕುತ್ತಾರೆ. ಒಂದು ವೇಳೆ ಸಂಪುಟ ವಿಸ್ತರಣೆಯಾದರೆ, ಅವಕಾಶ ಗಿಟ್ಟಿಸುವವರು ಅರೆ ಮನಸ್ಸಿನಿಂದಲೇ ಒಪ್ಪಿಕೊಳ್ಳಬೇಕಾಗುತ್ತದೆ. ಈ ಬಾರಿಯ ಸಂಪುಟದಲ್ಲಿ ಹೊಸ ಮುಖಗಳಿಗೆ ಆದ್ಯತೆ ನೀಡಲಾಗುವುದು ಎಂದು ಹೇಳುತ್ತಿರುವುದರಿಂದ ಮೊದಲ ಬಾರಿಗೆ ಸಚಿವರಾಗುವವರಿಗೆ ಆಷಾಢ ಇರಿಸು-ಮುರಿಸು ಉಂಟು ಮಾಡುವ ಸಾಧ್ಯತೆ ಇದೆ.

ಡಿ.ಕೆ.ಶಿವಕುಮಾರ್ ಅವರು ಈಗಾಗಲೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಚರ್ಚೆ ನಡೆಸಿ, ವೇದಿಕೆ ಸಿದ್ಧಪಡಿಸಿಕೊಂಡಿದ್ದಾರೆ. ರಾಹುಲ್‌ಗಾಂಧಿಯವರ ಅಂಕಿತ ದೊರೆತರೆ ಸಂಪುಟ ವಿಸ್ತರಣೆ ತಕ್ಷಣವೇ ನಡೆಯಲಿದೆ ಎಂದು ಹೇಳಲಾಗುತ್ತದೆ. ರಾಹುಲ್ ಗಾಂಧಿ ಜುಲೈ 12 ರಂದು ವಿದೇಶ ಪ್ರವಾಸದಿಂದ ಮರಳಲಿದ್ದಾರೆ. ಬಹುತೇಕ ಅಂದು ಅಥವಾ ಮಾರನೇ ದಿನ ಡಿ.ಕೆ.ಶಿವಕುಮಾರ್ ದೆಹಲಿಗೆ ತೆರಳಿ ಚರ್ಚೆ ನಡೆಸುವ ಸಾಧ್ಯತೆ ಇದ್ದು, ಆಷಾಢ ಮಾಸ ಆರಂಭವಾಗುವ ಮುನ್ನವೇ ಸಂಪುಟ ವಿಸ್ತರಣೆ ಮಾಡಲು ಪ್ರಯತ್ನಿಸಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.

### ಸಚಿವ ಸಂಪುಟದಲ್ಲಿ ಸ್ಥಾನ ಗಿಟ್ಟಿಸಲು ಕಸರತ್ತು

ಸಚಿವ ಸಂಪುಟದಲ್ಲಿ ಸ್ಥಾನ ಗಿಟ್ಟಿಸಲು ಸಾಕಷ್ಟು ಕಸರತ್ತು ನಡೆಸುತ್ತಿರುವವರಿಗೆ ವಿಳಂಬ ನೀತಿ, ಇರಿಸು-ಮುರಿಸು ಉಂಟು ಮಾಡಿದೆ. ಈಗಾಗಲೇ 3 ವರ್ಷ ಕಳೆದುಹೋಗಿದ್ದು, ಬಾಕಿ ಉಳಿದಿರುವ 1 ವರ್ಷ 10 ತಿಂಗಳಿಗಾದರೂ ಸಚಿವರಾಗಬೇಕೆಂದು ಕಾದು ಕುಳಿತವರಿಗೆ ಎಂದು ಮುಖಂಡರು ಕನ್ನಡಿಯ ಗಂಟು ತೋರಿಸುತ್ತಿದ್ದಾರೆ ಎಂಬ ಅಸಮಾಧಾನಗಳು ವ್ಯಕ್ತವಾಗಿವೆ. ಆದಷ್ಟು ಶೀಘ್ರ ಸಂಪುಟ ವಿಸ್ತರಣೆಯಾಗಬೇಕು. ಪ್ರಮುಖ ಇಲಾಖೆಗಳ ಜವಾಬ್ದಾರಿ ಹಂಚಿಕೆಯಾಗಿ ಸರ್ಕಾರಿ ಕಾರ್ಯನಿರ್ವಹಣೆಗೆ ತ್ವರಿತ ಆದ್ಯತೆಗಳು ದೊರೆಯಬೇಕೆಂಬ ಒತ್ತಾಯಗಳು ಕೇಳಿ ಬರುತ್ತಿವೆ.

**ಈ ದಿನದ ದರ** ಪೆಟ್ರೋಲ್: 110.44₹/L | ಡೀಸೆಲ್ : 99.56₹/L | ಬಂಗಾರ: ₹ 14,482/Gram 24ct ₹13,275/Gram 22ct | ಬೆಳ್ಳಿ: ₹240.00/Gram

# ಐಟಿ ಸಾಧನ ಗ್ರಾಮೀಣ ಶಾಲೆಗಳಿಗೆ ದಾನ: ರಾಜ್ಯ ಸರ್ಕಾರ ಚಿಂತನೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಗ್ರಾಮೀಣ ಶಾಲೆಗಳು ಹಾಗೂ ಸ್ಥಳೀಯ ಆಡಳಿತ ಸಂಸ್ಥೆಗಳಿಗೆ ಬಳಸಿದ ಲ್ಯಾಪ್‌ಟಾಪ್ ಮತ್ತು ಇತರೆ ಮಾಹಿತಿ ತಂತ್ರಜ್ಞಾನ ಉಪಕರಣಗಳನ್ನು ವಿತರಿಸುವ ರಾಜ್ಯವ್ಯಾಪಿ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರ ಆರಂಭಿಸಲು ಯೋಜನೆ ರೂಪಿಸಿದೆ.

ಗ್ಲೋಬಲ್ ಕ್ಯಾಪೆಬಿಲಿಟಿ ಸೆಂಟರ್‌ಗಳು ಹಾಗೂ ತಂತ್ರಜ್ಞಾನ ಕಂಪನಿಗಳಿಂದ ಸಂಗ್ರಹಿಸಲಾದ ಉಪಯುಕ್ತ ಐಟಿ ಸಾಧನಗಳನ್ನು ಮರುಬಳಕೆಗೆ ತಂದು ಡಿಜಿಟಲ್ ಪ್ರವೇಶವನ್ನು ಹೆಚ್ಚಿಸುವುದರ ಜೊತೆಗೆ ಇ-ತ್ಯಾಜ್ಯವನ್ನು ಕಡಿಮೆ ಮಾಡುವ ಉದ್ದೇಶ ಈ


ಉದಯವಾಹಿನಿ ಚಿತ್ರ

ಯೋಜನೆಯದ್ದಾಗಿದೆ. ಮೊನ್ನೆ ನಡೆದ 'ಕ್ಯಾಟಲಿಸ್ಟ್ ಕನೆಕ್ಟ್' ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು 225ಕ್ಕೂ ಹೆಚ್ಚು ಸಂಸ್ಥೆಗಳ ಮುಖ್ಯಸ್ಥರೊಂದಿಗೆ ನಡೆಸಿದ ಸಂವಾದದಲ್ಲಿ ಈ ಪ್ರಸ್ತಾವನೆ ಹೊರಹೊಮ್ಮಿತು. ಸಭೆಯಲ್ಲಿ ಭಾಗವಹಿಸಿದ್ದ ಸುಮಾರು ಶೇ.60ರಷ್ಟು ಉದ್ಯಮ ಪ್ರತಿನಿಧಿಗಳು ಈ ಯೋಜನೆಯಲ್ಲಿ ಪಾಲ್ಗೊಳ್ಳಲು ಆಸಕ್ತಿ ವ್ಯಕ್ತಪಡಿಸಿದರು. ಐಟಿ/ಬಿಟಿ ಹಾಗೂ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸಹ ಈ ಚರ್ಚೆಯಲ್ಲಿ ಭಾಗವಹಿಸಿದ್ದರು.

ಈಗ ಸರ್ಕಾರವು ಉದ್ಯಮಗಳ ವ್ಯಾಪಕ ಭಾಗವಹಿಸುವಿಕೆಗೆ ಅನುಕೂಲವಾಗುವಂತೆ ಒಂದು ನೀತಿ ಚೌಕಟ್ಟನ್ನು ರೂಪಿಸಲಿದೆ. ನಿಯಂತ್ರಣ ಸಂಬಂಧಿತ ಅಡೆತಡೆಗಳನ್ನು ನಿವಾರಿಸಿ, ಉದ್ಯಮಗಳು ದಾನವಾಗಿ ನೀಡುವ ಬಳಕೆಗೆ ಯೋಗ್ಯವಾದ ಲ್ಯಾಪ್‌ಟಾಪ್‌ಗಳು, ಕಂಪ್ಯೂಟರ್‌ಗಳು ಹಾಗೂ ಇತರೆ ಐಟಿ ಸಾಧನಗಳನ್ನು ನವೀಕರಿಸಿ ಸರ್ಕಾರಿ ಶಾಲೆಗಳು, ಗ್ರಾಮ ಪಂಚಾಯಿತಿಗಳು ಹಾಗೂ ಇತರ ಸಾರ್ವಜನಿಕ ಸಂಸ್ಥೆಗಳಿಗೆ ಪೂರೈಸುವ ವ್ಯವಸ್ಥೆಯನ್ನು ರೂಪಿಸಲಾಗುತ್ತದೆ.

# ಬೆಂಗಳೂರಿನಲ್ಲಿ ಅನಾಥ ವಾಹನ ತೆರವು ಕಾರ್ಯಾಚರಣೆಗೆ ಸಚಿವ ಕೃಷ್ಣ ಭೈರೇಗೌಡ ಚಾಲನೆ

• ಉದಯವಾಹಿನಿ, ಬೆಂಗಳೂರು

ಪಾದಚಾರಿ ಮಾರ್ಗಗಳ ತೆರವು ಕಾರ್ಯಾಚರಣೆ ನಂತರ ಇದೀಗ ಬೆಂಗಳೂರು ನಗರದ ರಸ್ತೆ ಹಾಗೂ ಸಾರ್ವಜನಿಕ ಸ್ಥಳಗಳನ್ನು ಅತಿಕ್ರಮಿಸಿಕೊಂಡಿರುವ ಬಿಟ್ಟುಹೋಗಿರುವ ವಾಹನಗಳನ್ನು ತೆರವುಗೊಳಿಸುವ ವಿಶೇಷ ಕಾರ್ಯಾಚರಣೆಗೆ ಇಂದು ಶುಕ್ರವಾರ ನಗರಾಭಿವೃದ್ಧಿ ಸಚಿವ ಕೃಷ್ಣ ಭೈರೇಗೌಡ ಚಾಲನೆ ನೀಡಿದರು.

ಅವರು ಕ್ವೀನ್ಸ್ ರಸ್ತೆಯಲ್ಲಿ ಹಲವು ಸಮಯಗಳಿಂದ ಬಿಟ್ಟುಹೋಗಿರುವ ವಾಹನಗಳಿಗೆ ನೋಟೀಸ್ ಅಂಟಿಸುವ ಮೂಲಕ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ ಸಂಚಾರ ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

ಪಾದಚಾರಿ ಮಾರ್ಗಗಳನ್ನು ಮುಕ್ತಗೊಳಿಸುವುದು, ಸಾರ್ವಜನಿಕ ಸುರಕ್ಷತೆಯನ್ನು ಹೆಚ್ಚಿಸುವುದು ಹಾಗೂ ನಾಗರಿಕರ ಸಂಚಾರವನ್ನು


ಉದಯವಾಹಿನಿ ಚಿತ್ರ

ಸುಗಮಗೊಳಿಸುವುದು ಈ ಕಾರ್ಯಾಚರಣೆಯ ಪ್ರಮುಖ ಉದ್ದೇಶವಾಗಿದೆ. ಬೆಂಗಳೂರಿನ ಪಾದಚಾರಿ ಮಾರ್ಗಗಳನ್ನು ಅಡೆತಡೆಗಳಿಂದ ಮುಕ್ತಗೊಳಿಸಿ, ಸಾರ್ವಜನಿಕ ಸ್ಥಳಗಳನ್ನು ಹೆಚ್ಚು ಸುಲಭವಾಗಿ ಬಳಸುವಂತಾಗಿಸುವ ಸರ್ಕಾರದ ನಿರಂತರ ಪ್ರಯತ್ನದ ಭಾಗವಾಗಿ ಈ ಅಭಿಯಾನ ಕೈಗೊಳ್ಳಲಾಗಿದೆ ಎಂದು ಸಚಿವರ ಕಚೇರಿ ತಿಳಿಸಿದೆ.

## ಮಾಜಿ ಸಚಿವ ಜಾಲಪ್ಪ ಸೊಸೆಗೆ 5 ವರ್ಷ ಜೈಲು ಶಿಕ್ಷೆ..!

• ಉದಯವಾಹಿನಿ, ಬೆಂಗಳೂರು

ಮೆಡಿಕಲ್ ಸೀಟ್ ಕೊಡಿಸುವುದಾಗಿ ಭರವಸೆ ನೀಡಿ 45 ಲಕ್ಷ ರೂ. ಪಡೆದು ವಂಚಿಸಿದ ಪ್ರಕರಣದಲ್ಲಿ ದಿವಂಗತ ಮಾಜಿ ಸಚಿವ ಆರ್.ಎಲ್. ಜಾಲಪ್ಪ ಅವರ ಸೊಸೆ ನಾಗವೇಣಿ ಅವರನ್ನು ದೋಷಿ ಎಂದು ಘೋಷಿಸಿರುವ ಬೆಂಗಳೂರಿನ 42ನೇ ಎಸಿಎಂಎಂ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ, ಐದು ವರ್ಷಗಳ ಜೈಲು ಶಿಕ್ಷೆ ವಿಧಿಸಿದೆ.

ಪ್ರಕರಣದ ಪ್ರಮುಖ ಆರೋಪಿ ಹಾಗೂ ಆರ್.ಎಲ್. ಜಾಲಪ್ಪ ಅವರ ಪುತ್ರ ಜೆ.ನರಸಿಂಹಸ್ವಾಮಿ ವಿಚಾರಣೆಯ ಅವಧಿಯಲ್ಲೇ ಮೃತಪಟ್ಟಿದ್ದರಿಂದ ಅವರ ವಿರುದ್ಧದ ಪ್ರಕರಣ ಅಂತ್ಯಗೊಂಡಿತ್ತು. ಉಳಿದ ಆರೋಪಿಯಾಗಿದ್ದ ಪತ್ನಿ ನಾಗವೇಣಿ ವಿರುದ್ಧದ ವಿಚಾರಣೆ ಪೂರ್ಣಗೊಳಿಸಿದ ನ್ಯಾಯಾಲಯ ಇಂದು ಮಹತ್ವದ ತೀರ್ಪು ಪ್ರಕಟಿಸಿದೆ.

ಜೆ. ನರಸಿಂಹಸ್ವಾಮಿ ಮತ್ತು ನಾಗವೇಣಿ ಅವರು ಪ್ರಕಾಶ್ ಕುಮಾರ್ ಎಂಬುವರಿಗೆ ಮೆಡಿಕಲ್ ಸೀಟ್ ಕೊಡಿಸುವುದಾಗಿ ನಂಬಿಸಿ 45 ಲಕ್ಷ ಪಡೆದು ವಂಚಿಸಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು.

## ಜಿಬಿಎ ಚುನಾವಣೆ ನಡೆಸಲು ಡಿಸೆಂಬರ್‌ವರೆಗೆ ಕಾಲಾವಕಾಶ ಕೊಡಿ: ಸುಪ್ರೀಂ ಕೋರ್ಟ್‌ಗೆ ಸರ್ಕಾರದ ಅರ್ಜಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ಐದು ಪಾಲಿಕೆಗಳ ಚುನಾವಣೆಯನ್ನು ಡಿಸೆಂಬರ್ ಒಳಗೆ ನಡೆಸಲು ಅನುಮತಿ ನೀಡುವಂತೆ ಕೋರಿ ಸುಪ್ರೀಂ ಕೋರ್ಟ್‌ಗೆ ರಾಜ್ಯ ಸರ್ಕಾರ ಅರ್ಜಿ ಸ್ಲಲಿಸಿದೆ. ರಾಜ್ಯದಲ್ಲಿ ಎಸ್‌ಐಆರ್ ನಡೆಯುತ್ತಿರುವುದರಿಂದ ಆಗಸ್ಟ್‌ನಲ್ಲಿ ಚುನಾವಣೆ ನಡೆಸುವುದು ಕಷ್ಟ ಎಂದು ರಾಜ್ಯ ಸರ್ಕಾರದ ವಾದ ಮಂಡಿಸಿದೆ.

ಬೆಂಗಳೂರಿನಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಪ್ರಕ್ರಿಯೆ ನಡೆಯುತ್ತಿದೆ. ಕರಡು ಮತದಾರರ ಪಟ್ಟಿ ಪ್ರಕಟಣೆ, ಆಕ್ಷೇಪಣೆಗಳ ಸ್ವೀಕಾರ ಮತ್ತು ಅವುಗಳ ವಿಚಾರಣೆ ಇನ್ನೂ ಪೂರ್ಣಗೊಂಡಿಲ್ಲ. ಚುನಾವಣೆ ನಡೆಸುವ ಸಿಬ್ಬಂದಿಯೇ ಎಸ್‌ಐಆರ್ ಕೆಲಸದಲ್ಲೂ ನಿರತರಾಗಿದ್ದಾರೆ. ಸುಮಾರು 8,972 ಬಿಎಲ್‌ಒಗಳು, 938 ಮೇಲ್ವಿಚಾರಕರು, 28 ಇಆರ್‌ಒ, 75 ಸಹಾಯಕ ಇಆರ್‌ಒಗಳು ಸೇರಿದಂತೆ ಸಾವಿರಾರು ಸಿಬ್ಬಂದಿ ಈಗಾಗಲೇ ಎಸ್‌ಐಆರ್ ಕಾರ್ಯದಲ್ಲಿ ತೊಡಗಿದ್ದಾರೆ ಎಂದು ತಿಳಿಸಿದೆ.ಐದು ಬೆಂಗಳೂರು ನಗರ ಪಾಲಿಕೆಗಳಿಗೆ ಚುನಾವಣೆಗಳುನಡೆಯಬೇಕಾಗಿತ್ತು. 31 ಆಗಸ್ಟ್ 2026 ರೊಳಗೆ ಚುನಾವಣೆ ಪೂರ್ಣಗೊಳಿಸುವಂತೆ ಸುಪ್ರೀಂಕೋರ್ಟ್ ನಿರ್ದೇಶಿಸಿತ್ತು. 20 ಮೇ 2026 ರ ಆದೇಶವನ್ನು ಮಾರ್ಪಡಿಸುವಂತೆ ಸರ್ಕಾರ ಕೋರಿದೆ. ಜಿಬಿಎ ಚುನಾವಣೆಗೆ ಸುಮಾರು 60 ಸಾವಿರ ಸಿಬ್ಬಂದಿ ಅಗತ್ಯವಿದೆ. ಮತದಾನ ಕೇಂದ್ರ ಸಿಬ್ಬಂದಿ, ರಿಟರ್ನಿಂಗ್ ಆಫಿಸರ್, ಭದ್ರತಾ ಸಿಬ್ಬಂದಿ ಸೇರಿದಂತೆ ದೊಡ್ಡ ಪ್ರಮಾಣದ ಮಾನವ ಸಂಪನ್ಮೂಲ ಬೇಕಾಗುತ್ತದೆ. ಇದೇ ವೇಳೆ, ಎಸ್‌ಐಆರ್ ಕೂಡ ನಡೆಯುತ್ತಿರುವುದರಿಂದ ಸಿಬ್ಬಂದಿ ಕೊರತೆ ಉಂಟಾಗುತ್ತದೆ.

> ಪ್ರತಿಯೊಂದನ್ನೂ ವಿಚಾರಣೆ ನಡೆಸಿ ಆದೇಶ ನೀಡುವುದು ಕಡ್ಡಾಯವಾಗಿದೆ. ನಿಖರ ಮತದಾರರ ಪಟ್ಟಿಯಿಲ್ಲದೆ ಚುನಾವಣೆ ನಡೆಸುವುದು ಸೂಕ್ತವಲ್ಲ. ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗೆ ಅಂತಿಮ ಹಾಗೂ ಸರಿಯಾದ ಮತದಾರರ ಪಟ್ಟಿ ಅಗತ್ಯ.

# ಸರ್ಕಾರಕ್ಕೆ ಶಾಶ್ವತ ನಿವಾಸ ಪ್ರಮಾಣ ಪತ್ರ ಕೊಡೋ ಅಧಿಕಾರವೇ ಇಲ್ಲ

## ಶಾಶ್ವತ ನಿವಾಸ ಪ್ರಮಾಣ ಪತ್ರ ಕೊಡೋಕೆ ರಾಜ್ಯ ಸರ್ಕಾರ ಯಾರು? ಎಂದು ಛಲವಾದಿ ನಾರಾಯಣ ಸ್ವಾಮಿ ಪ್ರಶ್ನಿಸಿದ್ದಾರೆ.

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರಕ್ಕೆ ಶಾಶ್ವತ ನಿವಾಸ ಪತ್ರ ಕೊಡೋ ಅಧಿಕಾರವೇ ಇಲ್ಲ ಎಂದು ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಕಿಡಿಕಾರಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಾಶ್ವತ ನಿವಾಸ ಪ್ರಮಾಣ ಪತ್ರ ಅಂದರೆ ಅದು ಪೌರತ್ವ ವಿಚಾರ. ಶಾಶ್ವತ ನಿವಾಸ ಪತ್ರ ಕೊಡೋದು ಇವರಿಗೆ ಅಧಿಕಾರ ಇಲ್ಲ. ಶಾಶ್ವತ ನಿವಾಸ ಪ್ರಮಾಣ ಪತ್ರ ಕೊಡೋಕೆ ರಾಜ್ಯ ಸರ್ಕಾರ ಯಾರು? ಎಂದು ಪ್ರಶ್ನಿಸಿದರು. ಈಗ ಅ ಪ್ರಮಾಣ ಪತ್ರ ಕೊಟ್ಟು ನಾವೇ ಕೇಂದ್ರ ಸರ್ಕಾರ ಅಂತ ಭಾವಿಸೋದು ಬೇಡ ಎಂದರು.

**1** ಕಡತ ವಿಲೇವಾರಿ ಆಗಬೇಕು
**2** ಅಭಿವೃದ್ಧಿ ಕೇವಲ ಮಾತಲ್ಲಿ
**3** ಚುನಾವಣೆ ಮುಂದೂಡಿಕೆ

ಇನ್ನೂ ಕಡತ ವಿಲೇವಾರಿ ಕುರಿತು ವ್ಯಂಗ್ಯವಾಡಿದ ನಾರಾಯಣಸ್ವಾಮಿ, ಕೆಲವುದರಲ್ಲಿ ಕಡತ ವಿಲೇವಾರಿ ಆಗಬೇಕು ಅಂದ್ರೆ, ಸಚಿವರು ಬರಬೇಕು. ಕಡತದ ವಾರಸುದಾರರು ಬಂದು, ನೇರವಾಗಿ ಬಂದು ಭೇಟಿಯಾಗದಿದ್ರೆ, ಹೇಗೆ ಕಡತ ವಿಲೇವಾರಿ ಆಗಲಿದೆ.

ಮಾತುಕತೆ ಮೂಲಕ ಕಡತ ವಿಲೇವಾರಿ ಮಾಡಬೇಕಿದೆ ಎಂದು ಹೇಳಿದರು.

ಸಿಎಂ ಬೆಂಗಳೂರು ಸಿಟಿ ರೌಂಡ್ಸ್ ವಿಚಾರ ಕುರಿತು ಪ್ರತಿಕ್ರಿಯಿಸಿದ ನಾರಾಯಣಸ್ವಾಮಿ, ಮಾತಲ್ಲಿ ಅಭಿವೃದ್ಧಿ ಆಗೋದಿಲ್ಲ. ಬೆಂಗಳೂರು ಅಭಿವೃದ್ಧಿ ಕೇವಲ ಮಾತಲ್ಲಿ ಆಗಲ್ಲ. ಕೆಲಸ ಮಾಡಿ ತೋರಿಸಬೇಕಿದೆ. ಸಿದ್ದರಾಮಯ್ಯ ಅವರಿದ್ದಾಗಲೂ ಅಭಿವೃದ್ಧಿ ಆಗಲಿಲ್ಲ. ಈಗ ಡಿಕೆ ಶಿವಕುಮಾರ್ ಬಂದ ಮೇಲೂ ಏನೂ ಅಭಿವೃದ್ಧಿ ಇಲ್ಲ. ಇವರು ಬಂದ ಮೇಲೆ ಮಳೆ ಕೂಡ ಸರಿಯಾಗಿ ಬರ್ತಿಲ್ಲ. ಬೆಂಗಳೂರಿನಲ್ಲಿ ಉತ್ತಮ ರಸ್ತೆ ಇಲ್ಲ, ಅದನ್ನ ಮಾಡಿ ಎಂದು ಸಲಹೆ ನೀಡಿದರು.



ಉದಯವಾಹಿನಿ ಚಿತ್ರ

> ಕೆಂಪೇಗೌಡರ ನಾಡು ಬೆಂಗಳೂರನ್ನ ಐದು ತುಂಡು ಮಾಡಿದ್ದಾರೆ. ಎರಡು ಪಾಲಿಕೆ ಮಾಡಲು ನಿರ್ಧಾರ ಮಾಡಿದ್ದಾರೆ. ಈಗ ಹೋದ್ರೆ, ಗೆಲ್ಲಲ್ಲ ಅಂತ ಗೊತ್ತಿದ್ದು, ನೆಪ ಇಟ್ಟುಕೊಂಡು ತಡೆಗೆ ಮುಂದಾಗಿದ್ದಾರೆ ಎಂದು ಆರೋಪಿಸಿದರು.
> – ಛಲವಾದಿ ನಾರಾಯಣ ಸ್ವಾಮಿ

### ಟೀಕಾ ಪ್ರಹಾರ

ಮರು ಪರಿಶೀಲನಾ ಅರ್ಜಿ ಹಾಕಿದ್ದಾರೆ. ಮತದಾರರ ಹಕ್ಕನ್ನ ಕಿತ್ತುಕೊಳ್ಳಲು ಹೊರಟಿದ್ದಾರೆ. ಸತ್ತವರ ಹೆಸರನ್ನ ತೆಯಬೇಕು. ಆದ್ರೆ, ಹೊರಗಡೆ ಇಂದ ಬಂದವರ ಹೆಸರನ್ನ ಸೇರಿಸಲಾಗ್ತಿದೆ. ಈ ಪ್ರಾಂತ್ಯದವರ ಹಕ್ಕನ್ನ ಕಿತ್ತುಕೊಳ್ಳಲು ಆಗಲ್ಲ. ಗುಂಪಾಗಿ ಹೋಗಿ ಪರಿಷ್ಕರಣೆ ಮಾಡಲಾಗ್ತಿದೆ. ಸೋಲಿನ ಭೀತಿಯಿಂದ ಚುನಾವಣೆ ಮುಂದೂಡಿಕೆ ಮಾಡಲಾಗುತ್ತಿದೆ ಎಂದು ಟೀಕಾ ಪ್ರಹಾರ ನಡೆಸಿದರು.

### ಸೋಲಿನ ಭೀತಿಯಿಂದ ಚುನಾವಣೆ ಮುಂದೂಡಿಕೆ

ಚುನಾವಣೆ ಮುಂದೂಡಿಕೆಗೆ ಮೆಲ್ಮನವಿ ವಿಚಾರ ಕುರಿತು ಮಾತನಾಡಿದ ನಾರಾಯಣಸ್ವಾಮಿ, ಕೋರ್ಟ್ ಆದೇಶವನ್ನ ಸರ್ಕಾರ ಗೌರವಿಸಬೇಕು. ಬಹು ಕಾಲದಿಂದ ಬೆಂಗಳೂರು ಪ್ರಜೆಗಳು ಚುನಾವಣೆ ಆಗಬೇಕು ಅಂತ ಕಾಯ್ತಿದ್ದಾರೆ. ಕಾಂಗ್ರೆಸ್ ಸರ್ಕಾರಕ್ಕೆ ಕಂಟಕ ಇದೆ. ಅಭಿವೃದ್ಧಿ ಶೂನ್ಯ, ಭ್ರಷ್ಟಾಚಾರ, ಗುಂಡಿ, ಕಸ ಅನೇಕ ವಿಚಾರ ಕಾಡ್ತಿದೆ. ನಾವು ಚುನಾವಣೆ ಮಾಡಿ ನಾವು ಗೆಲ್ಲಲು ಸಾಧ್ಯವಿಲ್ಲ ಅನ್ನೋದು ಗೊತ್ತಾಗಿದೆ.

### ಮಾತುಕತೆ ಮೂಲಕ ಕಡತ ವಿಲೇವಾರಿ ಮಾಡಬೇಕಿದೆ

### ಸಿಎಂ ಬೆಂಗಳೂರು ಸಿಟಿ ರೌಂಡ್ಸ್ ವಿಚಾರ

ಈಗ ಡಿಕೆ ಶಿವಕುಮಾರ್ ಬಂದ ಮೇಲೂ ಏನೂ ಅಭಿವೃದ್ಧಿ ಇಲ್ಲ



## ಸಿವಿಲ್ ಮೊಕದ್ದಮೆಗಳ ಪ್ರಥಮ ಮೇಲ್ಮನವಿ ಇನ್ಮುಂದೆ ಜಿಲ್ಲಾ ನ್ಯಾಯಾಲಯಗಳಲ್ಲೇ ವಿಚಾರಣೆ: ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಹಲವಾರು ವರ್ಷಗಳಿಂದ ಹೈಕೋರ್ಟ್‌ನಲ್ಲಿ ಬಾಕಿ ಉಳಿದಿರುವ ಸಾವಿರಾರು ಸಿವಿಲ್ ಪ್ರಕರಣಗಳ ಹೊರೆ ತಗ್ಗಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಜಾರಿಗೆ ತಂದಿದ್ದ ಮಹತ್ವದ ಕಾನೂನು ತಿದ್ದುಪಡಿಯನ್ನು ಹೈಕೋರ್ಟ್ ಎತ್ತಿಹಿಡಿದಿದೆ.


ಈ ಆದೇಶದಿಂದ ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಲಯಗಳ ಆದೇಶಗಳ ವಿರುದ್ಧ ಸಲ್ಲಿಸಲಾಗುವ ಪ್ರಥಮ ಮೇಲ್ಮನವಿಗಳ ವಿಚಾರಣಾ ವ್ಯಾಪ್ತಿಯನ್ನು ಜಿಲ್ಲಾ ನ್ಯಾಯಾಲಯಗಳಿಗೆ ವರ್ಗಾಯಿಸಲು ಹಸಿರು ನಿಶಾನೆ ಸಿಕ್ಕಂತಾಗಿದೆ.

ರಾಜ್ಯ ಸರ್ಕಾರ ಪರಿಚಯಿಸಿರುವ ಕಾಯಿದೆ ಸಂವಿಧಾನಬಾಹಿರವಾಗಿದೆ ಎಂದು ಘೋಷಿಸುವಂತೆ ಕೋರಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನ ಇಟ್ಟಸಂದ್ರ ಗ್ರಾಮದ ನಾರಾಯಣಮ್ಮ ಅರ್ಜಿ ಮತ್ತು ಈ ಸಂಬಂಧ ಏಕಸದಸ್ಯ ಪೀಠ ನೀಡಿರುವ ಆದೇಶ ರದ್ದುಪಡಿಸಬೇಕು ಎಂದು ಕೋರಿ ರಾಯಚೂರಿನ ಬ್ರಾಹ್ಮಣವಾಡಿ ಸ್ಟೇಷನ್ ರಸ್ತೆಯ ನಿವಾಸಿ ಬಾಬುರಾವ್ ಮತ್ತಿತರರು ಹೈಕೋರ್ಟ್‌ಗೆ ಮೇಲ್ಮನವಿ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಗಳ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಸಿ.ಎಂ.ಪೂಣಚ್ಚ ಅವರನ್ನೊಳಗೊಂಡ ವಿಭಾಗೀಯ ಪೀಠ ಈ ಆದೇಶ ನೀಡಿದ್ದು, 'ಕರ್ನಾಟಕ ಹೈಕೋರ್ಟ್ (ತಿದ್ದುಪಡಿ) ಕಾಯ್ದೆ-2023' ಮತ್ತು 'ಕರ್ನಾಟಕ ಸಿವಿಲ್ ನ್ಯಾಯಾಲಯಗಳ (ತಿದ್ದುಪಡಿ) ಕಾಯ್ದೆ-2023'ರ ಸಾಂವಿಧಾನಿಕ ಸಿಂಧುತ್ವವನ್ನು ಎತ್ತಿಹಿಡಿದಿದೆ.

ಅಲ್ಲದೆ, ಹೈಕೋರ್ಟ್‌ನ ಬೆಂಗಳೂರು ಪ್ರಧಾನ ಪೀಠ, ಧಾರವಾಡ ಹಾಗೂ ಕಲಬುರಗಿ ಪೀಠಗಳಲ್ಲಿ ಸದ್ಯ ಸಾವಿರಾರು ಪ್ರಥಮ ಮೇಲ್ಮನವಿಗಳು ಬಾಕಿ ಇವೆ. ಈ ತಿದ್ದುಪಡಿಯಿಂದ ಜಿಲ್ಲಾ ಮಟ್ಟದಲ್ಲೇ ಸುಮಾರು 200 ನ್ಯಾಯಾಲಯಗಳು ಇಂತಹ ಮೇಲ್ಮನವಿಗಳ ವಿಚಾರಣೆಗೆ ಲಭ್ಯವಾಗಲಿವೆ.

ನ್ಯಾಯದಾನವನ್ನು ನಾಗರಿಕರ ಮನೆಬಾಗಿಲಿಗೆ ತಲುಪಿಸುವ ಆಶಯ ಸಾಕಾರಗೊಳ್ಳಬೇಕಾದರೆ, ಮೇಲ್ಮನವಿಗಳ ವಿಚಾರಣಾ ವ್ಯಾಪ್ತಿಯನ್ನು ವಿಕೇಂದ್ರೀಕರಿಸುವುದು ಇಂದಿನ ಅಗತ್ಯವಾಗಿದೆ ಎಂದು ಪೀಠ ತನ್ನ ಆದೇಶದಲ್ಲಿ ತಿಳಿಸಿದೆ. ಜಿಲ್ಲೆ ಹಾಗೂ ತಾಲ್ಲೂಕುಗಳ ಹಿರಿಯ ಸಿವಿಲ್ ನ್ಯಾಯಾಧೀಶರು ನೀಡುವ ಆದೇಶಗಳ ವಿರುದ್ಧದ ಪ್ರಥಮ ಮೇಲ್ಮನವಿಗಳನ್ನು ಇನ್ಮುಂದೆ ನೇರವಾಗಿ ಹೈಕೋರ್ಟ್‌ಗೆ ಸಲ್ಲಿಸುವಂತಿಲ್ಲ, ಅವುಗಳನ್ನು ಆಯಾ ಜಿಲ್ಲಾ ನ್ಯಾಯಾಲಯಗಳೇ ವಿಚಾರಣೆ ನಡೆಸಲಿವೆ. ಆದರೆ, ಬೆಂಗಳೂರು ನಗರ ಸಿವಿಲ್ ನ್ಯಾಯಾಲಯದ ಆದೇಶಗಳ ವಿರುದ್ಧದ ಮೇಲ್ಮನವಿಗಳು ಎಂದಿನಂತೆ ಹೈಕೋರ್ಟ್‌ನ ಪ್ರಧಾನ ಪೀಠದಲ್ಲೇ ವಿಚಾರಣೆಗೆ ಒಳಪಡಲಿ ಎಂದು ಪೀಠ ಹೇಳಿದೆ. ಈ ಕಾಯ್ದೆಗೆ 2007ರಿಂದ ಪೂರ್ವಾನ್ವಯವಾಗಿ ಜಾರಿಯಾಗುವಂತೆ ಏಕಸದಸ್ಯ ಪೀಠ ಆದೇಶಿಸಿತ್ತು.

## ಸ್ವಂತ ವಿದ್ಯುತ್ ಸ್ಥಾವರ ಹೊಂದಲು ಗೇಟೆಡ್ ಕಮ್ಯುನಿಟಿಗೆ ಅವಕಾಶ: ಅನುಮತಿ ನೀಡಲು ಸರ್ಕಾರ ಚಿಂತನೆ!


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ದೊಡ್ಡ ದೊಡ್ಡ ವಸತಿ ಸಂಕೀರ್ಣಗಳು, ಗೇಟೆಡ್ ಸಮುದಾಯಗಳು ಮತ್ತು ವಾಣಿಜ್ಯ ಸಂಸ್ಥೆಗಳು ತಮ್ಮದೇ ಆದ ವಿದ್ಯುತ್ ಸ್ಥಾವರಗಳನ್ನು ಸಾಮೂಹಿಕವಾಗಿ ಸ್ಥಾಪಿಸಲು ಅಧಿಕಾರ ನೀಡಲು ಯೋಜಿಸುತ್ತಿದೆ. ಗ್ರಾಹಕರು ಸೌರ, ಪವನ ವಿದ್ಯುತ್‌ನ ಮತ್ತು ಹಸಿರು ವಿದ್ಯುತ್ ಉತ್ಪಾದನಾ ಸ್ಥಾವರಗಳನ್ನು ಸ್ಥಾಪಿಸಲು ಅನುಮತಿ ನೀಡಲಾಗುತ್ತದೆ. ಅವರು ತಮ್ಮ ಸ್ವಂತ ಪ್ರದೇಶದಲ್ಲಿ ಅಥವಾ ದೂರದ ಸ್ಥಳದಲ್ಲಿ ವಿದ್ಯುತ್ ಸ್ಥಾವರವನ್ನು ಸ್ಥಾಪಿಸಲು ಮತ್ತು ವಿದ್ಯುತ್ ಪೂರೈಸಲು ಅಸ್ತಿತ್ವದಲ್ಲಿರುವ ಮೂಲಸೌಕರ್ಯವನ್ನು ಬಳಸಲು ಅವಕಾಶವಿರುತ್ತದೆ. ನಿಗದಿಪಡಿಸಿದ ಪ್ರಸರಣ ಶುಲ್ಕಗಳು ಮತ್ತು ಸಂಬಂಧಪಟ್ಟ ಎಸ್ಕಾಮ್ ವಿಧಿಸುವ ಯಾವುದೇ ಹೆಚ್ಚುವರಿ ಶುಲ್ಕಗಳನ್ನು ಪಾವತಿಸಬೇಕಾಗುತ್ತದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅಂತಿಮ ಆದೇಶಗಳನ್ನು ರೂಪಿಸುವ ಮೊದಲು ಎಲ್ಲಾ ಪಾಲುದಾರರೊಂದಿಗೆ ಸಭೆಗಳನ್ನು ನಡೆಸಿ, ಅವರ ಅಭಿಪ್ರಾಯಗಳನ್ನು ತೆಗೆದುಕೊಳ್ಳುತ್ತಿದೆ. ಗುಜರಾತ್, ಮಧ್ಯಪ್ರದೇಶ, ದೆಹಲಿ ಮತ್ತು ಉತ್ತರ ಪ್ರದೇಶದಂತಹ ರಾಜ್ಯಗಳಲ್ಲಿ ಇದೇ ರೀತಿಯ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ ಎಂದು ಅಧಿಕಾರಿ ಹೇಳಿದ್ದಾರೆ.

ಕರ್ನಾಟಕವು ಈ ಕ್ಷೇತ್ರವನ್ನು ತಡವಾಗಿ ಪ್ರವೇಶಿಸುತ್ತಿದೆ. ಪ್ರಸ್ತುತ, ವ್ಯಕ್ತಿಯೊಬ್ಬರಿಗೆ ಸೌರ ಫಲಕಗಳನ್ನು ಸ್ಥಾಪಿಸಲು ಅನುಮತಿಸಲಾಗಿದೆ. ಅಪಾರ್ಟ್ಮೆಂಟ್ ಸಂಕೀರ್ಣಗಳ ಮೇಲ್ಛಾವಣಿಗಳಲ್ಲಿ ಮಧ್ಯಮ ಗಾತ್ರದ ಫಲಕಗಳನ್ನು ಅಳವಡಿಸಿಕೊಳ್ಳಲು ಅನುಮತಿಸಲಾಗಿದೆ. ಆದರೆ ಖಾಸಗಿ ವಸತಿ ಘಟಕಗಳು ಇಲ್ಲಿಯವರೆಗೆ ಯಾವುದೇ ದೊಡ್ಡ ಪ್ರಮಾಣದ ಯೋಜನೆ ಕೈ ಗೊಂಡಿಲ್ಲ.

## ಕರಾವಳಿ ಸಹಿತ ವಿವಿಧ ಜಿಲ್ಲೆಗಳಿಗಳಿಗೆ ಯೆಲ್ಲೋ ಅಲರ್ಟ್

• ಉದಯವಾಹಿನಿ, ಬೆಂಗಳೂರು

ರಾಜ್ಯದ ಕೆಲವೆಡೆ ಮುಂಗಾರು ನಿಧಾನವಾಗಿ ಚುರುಕುಗೊಂಡಿದೆ. ಶುಕ್ರವಾರವೂ ಕರಾವಳಿ ಸೇರಿ ವಿವಿಧ ಕಡೆಗಳಲ್ಲಿ ವ್ಯಾಪಕ ಮಳೆ ಮುಂದುವರಿಯಲಿದೆ. ಉತ್ತರ ಕನ್ನಡ, ಶಿವಮೊಗ್ಗ, ಹಾಸನ, ಕೊಡಗು, ದಕ್ಷಿಣ ಕನ್ನಡ, ಉಡುಪಿ ಮತ್ತು ಚಿಕ್ಕಮಗಳೂರು ಸೇರಿ 6 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ . ಮುಂದಿನ 24 ಗಂಟೆಯವರೆಗೆ ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ ಇರಲಿದೆ. ಕೆಲವು ಪ್ರದೇಶಗಳಲ್ಲಿ ಗಂಟೆಗೆ 40-50 ಕಿ.ಮೀ. ವೇಗದಲ್ಲಿ ಗಾಳಿ ಬೀಸಿ ಮಧ್ಯಮ ಮಳೆಯಾಗುವ ಸಾಧ್ಯತೆ ಇದೆ. ಕನಿಷ್ಠ ಮತ್ತು ಗರಿಷ್ಠ ತಾಪಮಾನ ಕ್ರಮವಾಗಿ 21 ಡಿಗ್ರಿ ಸೆಲ್ಸಿಯಸ್ ಮತ್ತು 29ಡಿಗ್ರಿ ಸೆಲ್ಸಿಯಸ್ ಇರಲಿದೆ.

ಕರಾವಳಿಯ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ 40-50 ಕಿ.ಮೀ. ವೇಗದ ಗಾಳಿಯೊಂದಿಗೆ ಭಾರಿ ಮಳೆಯಾಗುವ ಸಾಧ್ಯತೆ ಇದೆ. ಇನ್ನು ದಕ್ಷಿಣ ಒಳನಾಡಿನ ಶಿವಮೊಗ್ಗ, ಚಿಕ್ಕಮಗಳೂರು, ಹಾಸನ ಕೊಡಗು ಜಿಲ್ಲೆಗಳಲ್ಲೂ ಜೋರಾಗಿ ವರ್ಷಧಾರೆಯಾಗಲಿದೆ. ಬಳ್ಳಾರಿ, ಬೆಂಗಳೂರು (ನಗರ, ಗ್ರಾಮಾಂತರ), ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳಲ್ಲಿ ನಿರಂತರ ಗಾಳಿಯೊಂದಿಗೆ ಸಾಧಾರಣ ಮಳೆ ಸುರಿಯಲಿದೆ.ಉತ್ತರ ಒಳನಾಡಿನ ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗಾಳಿಯೊಂದಿಗೆ ಸಾಧಾರಣ ಮಳೆಯಾಗಲಿದೆ.

## 'ಚಂದಾ ಚೋರಿಯ ಹೊಣೆಯನ್ನೂ ಹೊರಿ': ಆರ್‌ಎಸ್‌ಎಸ್ ವಿರುದ್ಧ ಪ್ರಿಯಾಂಕ್ ಖರ್ಗೆ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರ

ಸಚಿವ ಪ್ರಿಯಾಂಕ್ ಖರ್ಗೆ ಅವರು ಶುಕ್ರವಾರ ರಾಷ್ಟ್ರೀಯ ಸ್ವಯಂಸೇವಕ ಸಂಘ ವಿರುದ್ಧ ವಾಗ್ದಾಳಿ ನಡೆಸಿದ್ದು, ರಾಮ ಮಂದಿರ ನಿರ್ಮಾಣದ ಶ್ರೇಯಸ್ಸು ಪಡೆದಿದ್ದರೆ, ದೇಣಿಗೆ ಹಣದ ಕಳ್ಳತನದ ಹೊಣೆಯನ್ನೂ ಸಂಘವೇ ಹೊತ್ತುಕೊಳ್ಳಬೇಕು ಎಂದು ವ್ಯಂಗ್ಯವಾಡಿದರು.

ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ಮೌನವನ್ನೂ ಪ್ರಶ್ನಿಸಿದರು. ದೇಣಿಗೆ ಹಣ ಕಳವು ಮಾಡಿದವರ ಹೆಸರುಗಳನ್ನು ಬಹಿರಂಗಪಡಿಸಬೇಕು ಎಂದು ಆಗ್ರಹಿಸಿದ ಅವರು, ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಬಹಿರಂಗ ಸುದ್ದಿಗೋಷ್ಠಿ ನಡೆಸುವಂತೆ ಸವಾಲು ಹಾಕಿದರು.

ರಾಮ ಮಂದಿರ ನಿರ್ಮಾಣದ ಶ್ರೇಯಸ್ಸನ್ನು ನೀವು ಪಡೆದಿದ್ದರೆ, 'ಚಂದಾ ಚೋರಿ'ಯ ಶ್ರೇಯಸ್ಸನ್ನೂ ನೀವೇ ಪಡೆಯಬೇಕು.

ನೀವು ನೋಂದಾಯಿತ ಸಂಸ್ಥೆಯಲ್ಲದಿದ್ದರೂ 'ದಕ್ಷಿಣೆ' ಪಡೆಯುತ್ತೀರಿ. ಅದರಲ್ಲಿ ಎಷ್ಟು ಹಣ ನಿಮ್ಮ ಬಳಿ ಬಂದಿದೆ? ನಿಮ್ಮೊಳಗೇ ಕುಳಿತು ಚರ್ಚೆ ಮಾಡುವ ಬದಲು ಸಾರ್ವಜನಿಕರ ಮುಂದೆ ಬನ್ನಿ.

ಕಳ್ಳರು ಯಾರು, ಎಷ್ಟು ಹಣ ನಿಮ್ಮ ಬಳಿ ಬಂದಿದೆ, ನೀವು ಮತ್ತು ಪ್ರಧಾನಮಂತ್ರಿ ಏಕೆ ಮೌನವಾಗಿದ್ದೀರಿ ಎಂಬುದನ್ನು ತಿಳಿಸಿ. ಮೋಹನ್ ಭಾಗವತ್ ಹಾಗೂ ಉಳಿದವರಿಗೆ ನಾನು ಬಹಿರಂಗ ಸುದ್ದಿಗೋಷ್ಠಿ ನಡೆಸುವಂತೆ ಸವಾಲು ಹಾಕುತ್ತೇನೆ ಎಂದು ಹೇಳಿದರು. ರಾಮ ಮಂದಿರದ ದೇಣಿಗೆ ಹಣದ ದುರುಪಯೋಗದ


ಉದಯವಾಹಿನಿ ಚಿತ್ರ

ಆರೋಪ ದೇಶಾದ್ಯಂತ ಚರ್ಚೆಗೆ ಗ್ರಾಸವಾಗಿರುವ ಬೆನ್ನಲ್ಲೇ ಪ್ರಿಯಾಂಕ್ ಖರ್ಗೆ ಈ ಹೇಳಿಕೆ ನೀಡಿದ್ದಾರೆ.

ಇದೇ ವೇಳೆ, ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ನಡೆದಿರುವ ಅಕ್ರಮಗಳ ಕುರಿತು ಪ್ರಧಾನಿ ಮೋದಿ ವಿರುದ್ಧವೂ ಅವರು ಟೀಕಾಪ್ರಹಾರ ನಡೆಸಿದರು. ಪ್ರಧಾನಿ ಮೋದಿ ನಡೆಸುವ 'ಪರೀಕ್ಷಾ ಪೇ ಚರ್ಚಾ' ಕಾರ್ಯಕ್ರಮವನ್ನು ಉಲ್ಲೇಖಿಸಿದ ಅವರು, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪೇ ಚರ್ಚಾ ಅಥವಾ ಒಎಸ್‌ಎಂ (ಆನ್-ಸ್ಕ್ರೀನ್ ಮಾರ್ಕಿಂಗ್) ಪೇ ಚರ್ಚಾ ಯಾವಾಗ ನಡೆಸುತ್ತಾರೆ ಎಂದು ಪ್ರಶ್ನಿಸಿದರು.

# ಪರಿಸರಸ್ನೇಹಿ ಸಾರಿಗೆ ಮೂಲಕ ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಹೊಸ ಬಲ

• ಉದಯವಾಹಿನಿ, ಬೆಂಗಳೂರು

ಜಾಗತಿಕ ಮಟ್ಟದ ವೃತ್ತಿಪರ ಸೇವಾ ಸಂಸ್ಥೆಯಾದ ಆನ್ ಸಂಸ್ಥೆಯ ಸಹಯೋಗದೊಂದಿಗೆ ಶಿಶು ಮಂದಿರ ಸಂಸ್ಥೆಯು ಹಲ್ಲಾ ನಗರದ ಶಿಶು ನಗರ ಕ್ಯಾಂಪಸ್‌ನಲ್ಲಿ ಆರ್ಥಿಕವಾಗಿ ಹಿಂದುಳಿದ ಸಮುದಾಯಗಳ ಮಹಿಳೆಯರಿಗೆ 12 ಎಲೆಕ್ಟ್ರಿಕ್ ಆಟೋರಿಕ್ಷಾ ಗಳನ್ನು ಹಸ್ತಾಂತರಿಸಿತು. ಈ ಕಾರ್ಯಕ್ರಮವು ಶಿಶು ಮಂದಿರದ ಮಹತ್ವಾಕಾಂಕ್ಷಿ 'ಇಕೋ-ವೀಲ್ಸ್' ಉಪಕ್ರಮದ ಮತ್ತೊಂದು ಪ್ರಮುಖ ಮೈಲಿಗಲ್ಲಾಗಿದ್ದು, ಆನ್ ಸಂಸ್ಥೆಯ ಪ್ರಾಯೋಜಕತ್ವದಲ್ಲಿ ಈವರೆಗೆ ಒಟ್ಟು 254 ಎಲೆಕ್ಟ್ರಿಕ್ ವಾಹನಗಳನ್ನು ಮಹಿಳೆಯರಿಗೆ ವಿತರಿಸಿದ ಸಾಧನೆಯನ್ನು ದಾಖಲಿಸಿದೆ.

ಕೆ.ಆರ್.ಪುರಂ ಹಾಗೂ ಪೂರ್ವ ಬೆಂಗಳೂರಿನ ವಿವಿಧ ಪ್ರದೇಶಗಳಿಂದ ಆಯ್ಕೆಯಾದ 12 ಮಹಿಳಾ ಫಲಾನುಭವಿಗಳಲ್ಲಿ ಹೆಚ್ಚಿನವರು ಒಂಟಿ ತಾಯಂದಿರು ಮತ್ತು ವಿಧವೆಯರಾಗಿದ್ದಾರೆ. ವಾಹನ ಹಸ್ತಾಂತರಕ್ಕೂ ಮುನ್ನ ಅವರು ಚಾಲನಾ ಕೌಶಲ್ಯ, ರಸ್ತೆ


ಉದಯವಾಹಿನಿ ಚಿತ್ರ

ಸುರಕ್ಷತೆ ಹಾಗೂ ವಾಹನ ನಿರ್ವಹಣೆಗೆ ಸಂಬಂಧಿಸಿದ ವಿಶೇಷ ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ. ಈ ಯೋಜನೆಯು ಅವರ ಜೀವನದಲ್ಲಿ ಹೊಸ ಅವಕಾಶಗಳ ಬಾಗಿಲು ತೆರೆಯುವ ಜೊತೆಗೆ, ಆರ್ಥಿಕ ಸ್ವಾವಲಂಬನೆ ಮತ್ತು ದೀರ್ಘಕಾಲೀನ ಭದ್ರತೆಗೆ ಭದ್ರ ಅಡಿಪಾಯವನ್ನು ಒದಗಿಸಲಿದೆ.

'ಇಕೋ-ವೀಲ್ಸ್' ಉಪಕ್ರಮವು ಎರಡು ಪ್ರಮುಖ ಸಾಮಾಜಿಕ ಸವಾಲುಗಳಿಗೆ ಪರಿಣಾಮಕಾರಿ ಪರಿಹಾರ ಒದಗಿಸುವ ಉದ್ದೇಶ ಹೊಂದಿದೆ. ಒಂದೆಡೆ, ದುರ್ಬಲ ಹಿನ್ನೆಲೆಯ ಮಹಿಳೆಯರಿಗೆ ಸುಸ್ಥಿರ ಮತ್ತು ಗೌರವಯುತ ಜೀವನೋಪಾಯದ ಅವಕಾಶಗಳನ್ನು ಸೃಷ್ಟಿಸುವುದು ಮತ್ತೊಂದೆಡೆ, ಪರಿಸರ ಸ್ನೇಹಿ ಸಾರಿಗೆ ವ್ಯವಸ್ಥೆಯನ್ನು ಉತ್ತೇಜಿಸುವುದು. ಮಹಿಳೆಯರನ್ನು ಸ್ವಯಂ ಉದ್ಯೋಗಿಗಳಾಗಿಯೂ, ಕಿರು ಉದ್ಯಮಿಗಳಾಗಿಯೂ ರೂಪಿಸುವ ಮೂಲಕ ಅವರ ಆದಾಯ ಸಾಮರ್ಥ್ಯವನ್ನು ಹೆಚ್ಚಿಸುವ ಈ ಯೋಜನೆ, ಕುಟುಂಬಗಳ ಆರ್ಥಿಕ ಸ್ಥಿರತೆಯನ್ನು ಬಲಪಡಿಸುವ ಜೊತೆಗೆ ನಗರದಲ್ಲಿ ಸ್ವಚ್ಛ, ಶಬ್ದರಹಿತ ಹಾಗೂ ಪರಿಸರ ಸ್ನೇಹಿ ಸಂಚಾರ ವ್ಯವಸ್ಥೆಗೆ ಸಹಕಾರಿಯಾಗುತ್ತಿದೆ.

## ಒಂದು ವಾರದೊಳಗೆ ಬರ ಮೌಲ್ಯಮಾಪನ ಪೂರ್ಣಗೊಳಿಸಿ: ಜಿಲ್ಲಾ ಅಧಿಕಾರಿಗಳಿಗೆ ಸರ್ಕಾರದ ನಿರ್ದೇಶನ

• ಉದಯವಾಹಿನಿ, ಬೆಂಗಳೂರ

ಶೇ.60ಕ್ಕಿಂತ ಕಡಿಮೆ ಮಳೆಯಾದ ಮತ್ತು ಸತತ ಮೂರು ವಾರಗಳವರೆಗೆ ಮಳೆಯಾಗದ ತಾಲ್ಲೂಕುಗಳ ಸಮೀಕ್ಷೆಯನ್ನು ಒಂದು ವಾರದೊಳಗೆ ಪೂರ್ಣಗೊಳಿಸಲು ರಾಜ್ಯ ಸರ್ಕಾರವು ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂ.ಗಳ ಸಿಇಒಗಳಿಗೆ ನಿರ್ದೇಶಿಸಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ಮೇಲ್ವಿಚಾರಣಾ ಕೇಂದ್ರದ (ಕೆಎಸ್‌ಎನ್‌ಡಿಎಂಸಿ) ದತ್ತಾಂಶದ ಪ್ರಕಾರ, 239 ತಾಲ್ಲೂಕುಗಳಲ್ಲಿ, 121 ಮಳೆ ಕೊರತೆ ವರ್ಗಕ್ಕೆ ಸೇರಿವೆ. 11 ತೀವ್ರ ಕೊರತೆ ವರ್ಗಕ್ಕೆ ಸೇರಿವೆ.

ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಕ್ಷೇತ್ರ ಮಟ್ಟದ ಪರಿಶೀಲನೆ ನಡೆಸಿ ಸರ್ಕಾರಿ ಮಾನದಂಡಗಳ ಪ್ರಕಾರ ಬರ ಪೀಡಿತ ಪ್ರದೇಶಗಳ ಪಟ್ಟಿಯನ್ನು ತಯಾರಿಸಲು ಕಂದಾಯ ಇಲಾಖೆಗೆ ಪ್ರಸ್ತಾವನೆಗಳನ್ನು ಸಲ್ಲಿಸುವಂತೆ ಸೂಚಿಸಿದ್ದಾರೆ. ಸಾಮಾನ್ಯ ಮಳೆಯ ಶೇ 60 ಕ್ಕಿಂತ ಕಡಿಮೆ ಮಳೆಯಾದ ಮತ್ತು ಸತತ ಮೂರು ವಾರಗಳವರೆಗೆ ಮಳೆಯಾಗದ ಸ್ಥಳಗಳನ್ನು ಗುರುತಿಸಲು ಅವರು ಅಧಿಕಾರಿಗಳಿಗೆ ಪತ್ರದಲ್ಲಿ ಸೂಚಿಸಿದ್ದಾರೆ.


ಉದಯವಾಹಿನಿ ಚಿತ್ರ

# ತುರ್ತು ಪರಿಶೀಲನೆಗಾಗಿ ಕೇಂದ್ರ ಗೃಹ ಸಚಿವರಿಗೆ ಶೋಭಾ ಕರಂದ್ಲಾಜೆ ಪತ್ರ

## ಭಾರತದ ಸಂವಿಧಾನವು ದೇಶದ ಎಲ್ಲಾ ನಾಗರಿಕರಿಗೂ ಒಂದೇ ಪೌರತ್ವವನ್ನು (ಏಕ ಪೌರತ್ವ) ಕಲ್ಪಿಸಿದೆ

• ಉದಯವಾಹಿನಿ, ಬೆಂಗಳೂರ

**1** ಸಂವಿಧಾನದ ಆಶಯಗಳಿಗೆ ಧಕ್ಕೆ
**2** ಒಂದೇ ಪೌರತ್ವವನ್ನು ಕಲ್ಪಿಸಿದೆ
**3** ಶಾಶ್ವತ ವಸತಿ ಪ್ರಮಾಣಪತ್ರ

ಕರ್ನಾಟಕ ಸರ್ಕಾರ ಇತ್ತೀಚೆಗೆ ಜಾರಿಗೆ ತಂದಿರುವ 'ಕರ್ನಾಟಕ ಶಾಶ್ವತ ವಸತಿ ಪ್ರಮಾಣಪತ್ರ 2026' ನಿಯಮಾವಳಿಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ರಾಜ್ಯ ಸರ್ಕಾರದ ಈ ಆದೇಶವು ಭಾರತದ ಸಂವಿಧಾನದ ಆಶಯಗಳಿಗೆ ಧಕ್ಕೆ ತರುತ್ತದಲ್ಲದೆ, ದೇಶದ ಆಂತರಿಕ ಭದ್ರತೆಗೆ ದೊಡ್ಡ ಕಂಟಕವಾಗಲಿದೆ ಎಂದು ಆರೋಪಿಸಿರುವ ಅವರು, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಸುದೀರ್ಘ ಪತ್ರ ಬರೆದಿದ್ದಾರೆ. ಈ ವಿಚಾರದಲ್ಲಿ ತಕ್ಷಣವೇ ಮಧ್ಯಪ್ರವೇಶಿಸುವಂತೆ ಮನವಿ ಮಾಡಿದ್ದಾರೆ.

ಭಾರತದ ಸಂವಿಧಾನವು ದೇಶದ ಎಲ್ಲಾ ನಾಗರಿಕರಿಗೂ ಒಂದೇ ಪೌರತ್ವವನ್ನು (ಏಕ ಪೌರತ್ವ) ಕಲ್ಪಿಸಿದೆ. ಆದರೆ ಕರ್ನಾಟಕ ಸರ್ಕಾರವು ಯಾವುದೇ ಸಾಂವಿಧಾನಿಕ ಅಥವಾ ಶಾಸನಬದ್ಧ ಅಧಿಕಾರವಿಲ್ಲದೆ 'ಶಾಶ್ವತ ನಿವಾಸಿಗಳು' ಎಂಬ ಪ್ರತ್ಯೇಕ ವರ್ಗವನ್ನು ಸೃಷ್ಟಿಸಲು ಹೊರಟಿರುವುದು ಕಾನೂನುಬಾಹಿರವಾಗಿದೆ. ಇದು ಸಂವಿಧಾನದ ಸಮಾನತೆಯ ಹಕ್ಕನ್ನು ಪ್ರತಿಪಾದಿಸುವ 14ನೇ ವಿಧಿಯ ನೇರ ಉಲ್ಲಂಘನೆಯಾಗಿದೆ ಎಂದು ಅಮಿತ್ ಶಾಗೆ ಬರೆದಿರುವ ಪತ್ರದಲ್ಲಿ ಶೋಭಾ ಕರಂದ್ಲಾಜೆ ಉಲ್ಲೇಖಿಸಿದ್ದಾರೆ.

ರಾಜ್ಯ ಸರ್ಕಾರ ಹೊರಡಿಸಿರುವ ಅಧಿಸೂಚನೆಯಲ್ಲಿ ಕೇವಲ ಸ್ಥಳೀಯ ಕಂದಾಯ ಅಧಿಕಾರಿಗಳ ಪರಿಶೀಲನೆ ಮತ್ತು ಸ್ಥಳೀಯ ದಾಖಲೆಗಳ ಆಧಾರದ ಮೇಲೆ ಈ ಪ್ರಮಾಣಪತ್ರವನ್ನು ನೀಡಲು


ಉದಯವಾಹಿನಿ ಚಿತ್ರ

ಉದ್ದೇಶಿಸಲಾಗಿದೆ. ಇದರಲ್ಲಿ ಭಾರತೀಯ ಪೌರತ್ವವನ್ನು ಕೇಂದ್ರ ಏಜೆನ್ಸಿಗಳ ಮೂಲಕ ಕಡ್ಡಾಯವಾಗಿ ಪರಿಶೀಲಿಸುವ ಯಾವುದೇ ದೃಢವಾದ ವ್ಯವಸ್ಥೆ ಇಲ್ಲ. ಇದರಿಂದಾಗಿ ದೇಶದೊಳಗೆ ಅಕ್ರಮವಾಗಿ ನುಸುಳಿರುವ ವಿದೇಶಿ ಪ್ರಜೆಗಳು ಅಥವಾ ಅಕ್ರಮ ವಲಸಿಗರು ಸುಲಭವಾಗಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ಈ 'ಶಾಶ್ವತ ವಸತಿ ಪ್ರಮಾಣಪತ್ರ' ಪಡೆಯುವ ಅಪಾಯವಿದೆ. ಒಮ್ಮೆ ಈ ಪ್ರಮಾಣಪತ್ರ

### ಆಂತರಿಕ ಭದ್ರತೆ ದುರ್ಬಲ

ಪೌರತ್ವ, ವಿದೇಶಿಯರು, ವಲಸೆ ಮತ್ತು ಆಂತರಿಕ ಭದ್ರತೆಗೆ ಸಂಬಂಧಿಸಿದ ವಿಷಯಗಳು ಸಂವಿಧಾನದ ಅಡಿಯಲ್ಲಿ ಕೇಂದ್ರ ಸರ್ಕಾರದ ವಿಶೇಷ ಅಧಿಕಾರ ವ್ಯಾಪ್ತಿಗೆ ಒಳಪಡುತ್ತವೆ.

ಖಾಯಂ ನಿವಾಸಿ ಸ್ಥಾನಮಾನವನ್ನು ನೀಡುವ ರಾಜ್ಯ ಮಟ್ಟದ ತೀರ್ಮಾನ ಸಾಂವಿಧಾನಿಕ ಕಾರ್ಯಗಳಲ್ಲಿ ಹಸ್ತಕ್ಷೇಪ ಮಾಡುವ ಮತ್ತು ದೇಶದಾದ್ಯಂತ ಪೌರತ್ವ ಮತ್ತು ಆಂತರಿಕ ಭದ್ರತೆಯನ್ನು ದುರ್ಬಲಗೊಳಿಸುವ ಸಾಧ್ಯತೆ ಇದೆ.

> ಸರಿಯಾದ ಪೌರತ್ವ ಪರಿಶೀಲನೆಯಿಲ್ಲದೆ ಇಂತಹ ಪ್ರಮಾಣಪತ್ರಗಳನ್ನು ನೀಡುವುದರಿಂದ ಅಕ್ರಮ ವಲಸಿಗರು ರಾಜ್ಯದ ಆಡಳಿತಾತ್ಮಕ ಚೌಕಟ್ಟಿನಲ್ಲಿ ವಿಲೀನಗೊಳ್ಳಲು ಅನುಕೂಲವಾಗಬಹುದು. ಇದು ರಾಷ್ಟ್ರೀಯ ಭದ್ರತೆ ಮತ್ತು ಸಾರ್ವಜನಿಕ ಸುವ್ಯವಸ್ಥೆಗೆ ಗಂಭೀರ ಸಂಚಕಾರ ತರಬಹುದು ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಕೈಸೇರಿದರೆ, ಅದನ್ನು ಬಳಸಿ ಅವರು ಸರ್ಕಾರದ ಸವಲತ್ತುಗಳು, ಶೈಕ್ಷಣಿಕ ಪ್ರವೇಶಾತಿ ಹಾಗೂ ಉದ್ಯೋಗಾವಕಾಶಗಳನ್ನು ಪಡೆದುಕೊಳ್ಳಲಿದ್ದಾರೆ. ಇದು ಅಕ್ರಮ ವಲಸಿಗರನ್ನು ಪತ್ತೆಹಚ್ಚಿ ಹೊರಹಾಕುವ ಕೇಂದ್ರ ಸರ್ಕಾರದ ಪ್ರಯತ್ನಗಳಿಗೆ ಹಿನ್ನಡೆ ಉಂಟುಮಾಡುತ್ತದೆ ಎಂದು ಶೋಭಾ ಕರಂದ್ಲಾಜೆ ಕಳವಳ ವ್ಯಕ್ತಪಡಿಸಿದ್ದಾರೆ. ರಾಷ್ಟ್ರೀಯ ಭದ್ರತೆಯ ದೃಷ್ಟಿಯಿಂದ ಈ ಅಧಿಸೂಚನೆ ಅತ್ಯಂತ ಆತಂಕಕಾರಿಯಾಗಿದೆ. ಆದಾಗ್ಯೂ, ಸಮರ್ಥ ಕೇಂದ್ರ ಅಧಿಕಾರಾವಳಿಗಳ ಮೂಲಕ ಭಾರತೀಯ ಪೌರತ್ವದ ಪರಿಶೀಲನೆಯನ್ನು ಕಡ್ಡಾಯಗೊಳಿಸುವ ಯಾವುದೇ ನಿಬಂಧನೆ ಅಥವಾ ಅಕ್ರಮ ವಲಸಿಗರು ಮತ್ತು ವಿದೇಶಿ ಪ್ರಜೆಗಳನ್ನು ಹೊರಗಿಡಲು ಯಾವುದೇ ಬಲವಾದ ಕಾರ್ಯವಿಧಾನ ಇರುವುದಿಲ್ಲ.ಇದರ ಪರಿಣಾಮವಾಗಿ, ಭಾರತಕ್ಕೆ ಅಕ್ರಮವಾಗಿ ಪ್ರವೇಶಿಸಿದ ಅಥವಾ ರಾಜ್ಯದಲ್ಲಿ ಕಾನೂನುಬಾಹಿರವಾಗಿ ವಾಸಿಸುತ್ತಿರುವ ವ್ಯಕ್ತಿಗಳು, ಸ್ಥಳೀಯ ದಾಖಲೆಗಳನ್ನು ಪ್ರಸ್ತುತಪಡಿಸುವ ಮೂಲಕ ಅಥವಾ ವಂಚನೆಯ ಮಾರ್ಗಗಳ ಮೂಲಕ ಖಾಯಂ ನಿವಾಸಿ ಪ್ರಮಾಣಪತ್ರವನ್ನು ಪಡೆಯಬಹುದು.

# ಉದಯ ವಾಹಿನಿ

## ಪ್ರಾದೇಶಿಕ

ಶನಿವಾರ
11 ಜುಲೈ 2026




# ಆದಿವಾಸಿ ಕಾಲೋನಿಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ: 15 ದಿನಗಳಿಂದ ಕುಡಿಯುವ ನೀರಿಗೂ ಪರದಾಟ

• ಉದಯವಾಹಿನಿ, ಗುಂಡ್ಲುಪೇಟೆ

ತಾಲ್ಲೂಕಿನ ಕಾಡಂಚಿನ ಗ್ರಾಮವಾದ ಮದ್ದೂರು ಆದಿವಾಸಿ ಕಾಲೋನಿಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ತೀವ್ರವಾಗಿದ್ದು, ಕಳೆದ 15 ದಿನಗಳಿಂದ ಕುಡಿಯುವ ನೀರಿಲ್ಲದೆ ಗ್ರಾಮಸ್ಥರು ಪರದಾಡುತ್ತಿರುವ ಸ್ಥಿತಿ ನಿರ್ಮಾಣವಾಗಿದೆ.

ಸಮಸ್ಯೆ ಕುರಿತು ಹಲವು ಬಾರಿ ಮನವಿ ಮಾಡಿದರೂ ಗ್ರಾಮಪಂಚಾಯತಿ ಆಡಳಿತ ಮಂಡಳಿ ಹಾಗೂ ಅಧಿಕಾರಿಗಳು ಸ್ಪಂದಿಸಿಲ್ಲ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೇರಂಬಾಡಿ ಗ್ರಾಮಪಂಚಾಯತಿ ವ್ಯಾಪ್ತಿಗೆ ಬರುವ ಈ ಕಾಲೋನಿಯಲ್ಲಿ ಸುಮಾರು 300ಕ್ಕೂ ಹೆಚ್ಚು ಕುಟುಂಬಗಳು ವಾಸವಾಗಿದ್ದು, ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿ ಸಂಕಷ್ಟದ ಬದುಕು ನಡೆಸುತ್ತಿದ್ದಾರೆ ಎಂದು ಸ್ಥಳೀಯ ಮುಖಂಡ ಮಾದಯ್ಯ ಆರೋಪಿಸಿದ್ದಾರೆ. ಗ್ರಾಮಕ್ಕೆ ನೀರಿನ ಸಂಪರ್ಕ ಸಂಪೂರ್ಣ ಸ್ಥಗಿತಗೊಂಡಿರುವ ಬಗ್ಗೆ ಅಧಿಕಾರಿಗಳಿಗೆ ಮಾಹಿತಿ ನೀಡಿದರೂ ಸಬೂಬು ಹೇಳುತ್ತಾ ಕಾಲಹರಣ ಮಾಡಲಾಗುತ್ತಿದೆ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ನಮ್ಮ ಗ್ರಾಮವನ್ನ ದತ್ತಿ ಗ್ರಾಮ ಎಂದು ಪರಿಗಣಿಸಿದ್ದರೂ, ಅಧಿಕಾರಿಗಳಾಗಲಿ ಚುನಾಯಿತ ಜನಪ್ರತಿನಿಧಿಗಳಾಗಲಿ ನಮ್ಮ ಸಂಕಷ್ಟಗಳನ್ನು ಆಲಿಸುವ ಮನಸ್ಸೇ ತೋರಿಸುತ್ತಿಲ್ಲ.

ಕುಡಿಯುವ ನೀರಿನಂತಹ ಮೂಲಭೂತ ಸೌಲಭ್ಯವೂ ಇಲ್ಲದ ಸ್ಥಿತಿಯಲ್ಲಿ ಬದುಕು ಸಾಗಿಸುತ್ತಿದ್ದೇವೆ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಗ್ರಾಮದಲ್ಲಿನ ಚರಂಡಿಗಳು ಕಸ-ತ್ಯಾಜ್ಯದಿಂದ ತುಂಬಿಹೋಗಿದ್ದು, ಸೊಳ್ಳೆ ಹಾಗೂ ಕೀಟಗಳ ಆವಾಸಸ್ಥಾನವಾಗಿ ಮಾರ್ಪಟ್ಟಿವೆ. ಸ್ವಚ್ಛ ಪರಿಸರ ಕಾಪಾಡಬೇಕಾದ ಗ್ರಾಮಪಂಚಾಯತಿ ಆಡಳಿತ ಮಂಡಳಿ ಜವಾಬ್ದಾರಿಯಿಂದ ಕೈಕಳೆದಂತೆಯೇ ವರ್ತಿಸುತ್ತಿದೆ ಎಂಬ ಆರೋಪವೂ ಕೇಳಿಬಂದಿದೆ. ಕುಡಿಯುವ ನೀರು ಸಿಗದ ಕಾರಣ ಮಹಿಳೆಯರು ಕಿಲೋಮೀಟರ್‌ಗಳಷ್ಟು ದೂರ ಕಾಲ್ನಡಿಗೆಯಲ್ಲಿ ತೆರಳಿ ಖಾಸಗಿ ಜಮೀನಿನಿಂದ ನೀರು ತರುವ ಅನಿವಾರ್ಯತೆ ಎದುರಾಗಿದೆ ಎಂದು ಅಳಲು ತೋಡಿಕೊಂಡಿದ್ದಾರೆ.

ಇದಲ್ಲದೆ, ಗ್ರಾಮದಲ್ಲಿನ ಅಶುಚಿತ್ವ ವಾತಾವರಣ ಮಕ್ಕಳ ಆರೋಗ್ಯಕ್ಕೂ ಧಕ್ಕೆಯುಂಟು ಮಾಡತೊಡಗಿದೆ. ಕಾಲೋನಿಯ ಸಮೀಪದಲ್ಲೇ ಇರುವ ಆಶ್ರಮ ಶಾಲೆಯ ಮಕ್ಕಳು ದುರ್ವಾಸನೆಯ ನಡುವೆಯೇ ಪಾಠ ಕೇಳಬೇಕಾದ ದುಸ್ಥಿತಿ ನಿರ್ಮಾಣವಾಗಿದೆ. ಹೀಗಾಗಿ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಹಾಗೂ ಗ್ರಾಮಪಂಚಾಯತಿ ಆಡಳಿತ ಮಂಡಳಿ ಕೂಡಲೇ ಎಚ್ಚೆತ್ತುಕೊಂಡು ಕುಡಿಯುವ ನೀರಿನ ಸಮಸ್ಯೆ ಸೇರಿದಂತೆ ಗ್ರಾಮದಲ್ಲಿನ ಸ್ವಚ್ಛತೆ ಮತ್ತು ಇತರ ಮೂಲಭೂತ ಸೌಕರ್ಯಗಳ ಸಮಸ್ಯೆಯನ್ನು ತುರ್ತಾಗಿ ಬಗೆಹರಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.


ಉದಯವಾಹಿನಿ ಚಿತ್ರ

# ಗಂಗಾಕಲ್ಯಾಣ ಯೋಜನೆಯಲ್ಲಿ ಲಂಚಾವತಾರ

## ಅರ್ಹ ಬಡ ರೈತರಿಗೆ ತಲುಪಬೇಕಾದ ಸರ್ಕಾರಿ ಯೋಜನೆಯು ಇಲ್ಲಿ ಸಂಪೂರ್ಣ ದುರುಪಯೋಗವಾಗಿದೆ

• ಉದಯವಾಹಿನಿ, ಪಾವಗಡ

ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ಅರ್ಹ ಬಡ ರೈತರಿಗೆ ಉಚಿತವಾಗಿ ಸಿಗಬೇಕಾದ 'ಗಂಗಾ ಕಲ್ಯಾಣ' ಯೋಜನೆಯಡಿ, ಶಾಸಕರ ಗಮನಕ್ಕೆ ಬಾರದೇ ಮಧ್ಯವರ್ತಿಗಳು

> ಶಾಸಕರ ಆರೋಪದ ಬೆನ್ನಲ್ಲೇ ಸರ್ಕಾರ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ತಪ್ಪಿತಸ್ಥ ಅಧಿಕಾರಿಗಳನ್ನು ಅಮಾನತುಗೊಳಿಸಬೇಕು, ದಲ್ಲಾಳಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲು ಮಾಡಬೇಕೆಂದು ಸ್ಥಳೀಯ ರೈತ ಮುಖಂಡರು ಎಚ್ಚರಿಸಿದ್ದಾರೆ.

**1** ಉನ್ನತ ಮಟ್ಟದ ಸಂಪೂರ್ಣ ತನಿಖೆ
**2** ಗಂಗಾ ಕಲ್ಯಾಣ ಯೋಜನೆಯಡಿ
**3** ಸಮಿತಿಯ ಅನುಮೋದನೆ ಇಲ್ಲದೆ

ನಿಯಮ ಬಾಹಿರವಾಗಿ ಕೊಳವೆ ಬಾವಿಗಳನ್ನು ಮಂಜೂರು ಮಾಡಿಸಿರುವ ಆಘಾತಕಾರಿ ಹಗರಣ ಬಯಲಿಗೆ ಬಂದಿದೆ.

ಇತ್ತೀಚೆಗೆ ಪಾವಗಡದ ಶಾಸಕರ ಭವನದಲ್ಲಿ 2ನೇ ಜನ ಸಂಪರ್ಕ ಸಭೆಯಲ್ಲಿ ಖುದ್ದು ಕ್ಷೇತ್ರದ ಶಾಸಕರಾದ ಹೆಚ್ ವಿ ವೆಂಕಟೇಶ್ ಈ ಕುರಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿ, ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಬೆನ್ನಲ್ಲೇ, ಇಡೀ ಭ್ರಷ್ಟಾಚಾರದ ಕುರಿತು




### ಸಾರ್ವಜನಿಕರ ಒತ್ತಾಯ

> ಜವಾಬ್ದಾರಿಯುತ ಸ್ಥಾನದಲ್ಲಿರುವ ಶಾಸಕರೇ ನೇರ ಆರೋಪ ಮಾಡಿರುವುದರಿಂದ, ಈ ಪ್ರಕರಣವನ್ನು ಕೇವಲ ಇಲಾಖಾ ಮಟ್ಟದ ತನಿಖೆಗೆ ಸೀಮಿತಗೊಳಿಸದೆ ಸ್ವತಂತ್ರ ತನಿಖಾ ಸಂಸ್ಥೆಗೆ ಅಥವಾ ಜಿಲ್ಲಾಧಿಕಾರಿಗಳ ನೇತೃತ್ವದ ವಿಶೇಷ ತಂಡಕ್ಕೆ ವಹಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಉನ್ನತ ಮಟ್ಟದ ಸಂಪೂರ್ಣ ತನಿಖೆಯಾಗಬೇಕು ಎಂದು ಸಾರ್ವಜನಿಕರು ಹಾಗೂ ರೈತ ಸಂಘಟಗಳು ಒತ್ತಾಯಿಸುತ್ತಿವೆ.

ತಾಲ್ಲೂಕಿನಲ್ಲಿ ಕಳೆದ 2018 ರಿಂದ ಇಂದಿನವರೆಗೂ ಕೆಲವು ಪ್ರಭಾವಿ ದಲ್ಲಾಳಿಗಳು ಸಕ್ರಿಯರಾಗಿದ್ದು, ಗಂಗಾ ಕಲ್ಯಾಣ ಯೋಜನೆಯಡಿ ಉಚಿತವಾಗಿ ಸಿಗಬೇಕಾದ ಸೌಲಭ್ಯವನ್ನು ಕೊಡಿಸುವುದಾಗಿ ನಂಬಿಸಿ ಅರ್ಜಿದಾರರಿಂದ ಲಕ್ಷಾಂತರ ರೂಪಾಯಿ ಲಂಚದ ಹಣ ವಸೂಲಿ ಮಾಡಿದ್ದಾರೆ. ಶಾಸಕರ ನೇತೃತ್ವದ ಆಯ್ಕೆ ಸಮಿತಿಯ ಗಮನಕ್ಕೆ ತರದೆ, ಅಧಿಕಾರಿಗಳೊಂದಿಗೆ ಶಾಮೀಲಾಗಿ ತಮಗೆ ಬೇಕಾದ ಕಡೆ ಕೊಳವೆ ಬಾವಿಗಳನ್ನು ಕೊರೆಸಿರುವುದು ಇತ್ತೀಚೆಗೆ ನಡೆದ ಜನಸಂಪರ್ಕ ಸಭೆಯಲ್ಲಿ ಬೆಳಕಿಗೆ ಬಂದಿದೆ.

> ಬಿಸಿಎಂ ಇಲಾಖೆಯಲ್ಲಿ ಕೊಳವೆ ಬಾವಿಗಳಲ್ಲಿ ನನ್ನ ಲೆಟರ್ ಹೆಡ್ ಉಪಯೋಗಿಸಿಕೊಂಡು ಫಲಾನುಭವಿಗಳಿಂದ 1 ಲಕ್ಷದವರೆಗೂ ಲಂಚ ಪಡೆದುಕೊಂಡಿದ್ದಾರೆ. ಈ ವಿಷಯ ನನ್ನ ಗಮನಕ್ಕೆ ಬಂದಿದ್ದು ಸಂಪೂರ್ಣ ತನಿಖೆಗೆ ನಾನು ಉನ್ನತ ಮಟ್ಟದ ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದು ತಿಳಿಸಿದರು. -ಶಾಸಕ ವೆಂಕಟೇಶ್

ಅರ್ಹ ಬಡ ರೈತರಿಗೆ ತಲುಪಬೇಕಾದ ಸರ್ಕಾರಿ ಯೋಜನೆಯು ಇಲ್ಲಿ ಸಂಪೂರ್ಣ ದುರುಪಯೋಗವಾಗಿದೆ. ಒಂದೇ ಗ್ರಾಮದ, ಒಂದೇ ಕುಟುಂಬದ ಮೂವರು ಸದಸ್ಯರಿಗೆ ನಿಯಮಗಳನ್ನು ಗಾಳಿಗೆ ತೂರಿ ಕೊಳವೆ ಬಾವಿಗಳನ್ನು ಮಂಜೂರು ಮಾಡಲಾಗಿದೆ. ಇದರ ಜತೆಗೆ, ಇದೇ ದಂಧೆಯಲ್ಲಿ ತೊಡಗಿರುವ ಒಬ್ಬನೇ ಮಧ್ಯವರ್ತಿಯೊಬ್ಬರು ಸುಮಾರು 10 ಕೊಳವೆ ಬಾವಿಗಳನ್ನು ಕಾನೂನು ಬಾಹಿರವಾಗಿ ಕೊರೆಸಿದ್ದಾನೆ ಎನ್ನುವ ಗಂಭೀರ ಆರೋಪ ಕೇಳಿಬಂದಿದೆ. ಜನಸಂಪರ್ಕ ಸಭೆಯಲ್ಲಿ ಈ ವಿಷಯ ಪ್ರಸ್ತಾಪವಾಗುತ್ತಿದ್ದಂತೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ ಶಾಸಕರು, ಸ್ಥಳದಲ್ಲಿದ್ದ ದೇವರಾಜ ಅರಸು ಅಭಿವೃದ್ಧಿ ನಿಗಮದ ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡರು. ನಿಮ್ಮ ಕಣ್ಣೆದುರೇ ಇಷ್ಟೊಂದು ದೊಡ್ಡ ಮಟ್ಟದ ಅಕ್ರಮ ನಡೆಯುತ್ತಿದ್ದರೂ ನೀವೇನು ಮಾಡುತ್ತಿದ್ದೀರಿ, ಶಾಸಕರ ಅಧ್ಯಕ್ಷತೆಯ ಸಮಿತಿಯ ಅನುಮೋದನೆ ಇಲ್ಲದೆ ಇಷ್ಟೊಂದು ಬಾವಿಗಳನ್ನು ಕೊರೆಯಲು ಹೇಗೆ ಸಾಧ್ಯ ಎಂದು ತರಾಟೆಗೆ ತೆಗೆದುಕೊಂಡು, ತಕ್ಷಣವೇ ವರದಿ ನೀಡುವಂತೆ ಆದೇಶಿಸಿದ್ದಾರೆ.

# ಉತ್ತಮ ಹವ್ಯಾಸದಿಂದ ಯಶಸ್ವಿ ಜೀವನ ನಡೆಸಲು ಸಾಧ್ಯ: ವೃತ್ತ ನಿರೀಕ್ಷಕರಾದ ಜನಾರ್ಧನ್

• ಉದಯವಾಹಿನಿ, ಹುಳಿಯಾರು

ವಿದ್ಯಾರ್ಥಿ ದಿಸೆಯಲ್ಲಿ ಕಾಡುವ ಕೆಟ್ಟ ಚಟಗಳನ್ನು ದೂರವಿಟ್ಟು, ಆ ಜಾಗದಲ್ಲಿ ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಂಡಾಗ ಮಾತ್ರ ಆರೋಗ್ಯವಂತ ಹಾಗೂ ಯಶಸ್ವಿ ಜೀವನ ನಡೆಸಲು ಸಾಧ್ಯ ಎಂದು ಚಿಕ್ಕನಾಯಕನಹಳ್ಳಿ ವೃತ್ತ ನಿರೀಕ್ಷಕರಾದ ಜನಾರ್ಧನ್ ಹೇಳಿದರು.

ಹುಳಿಯಾರಿನ ವಾಸವಿ ವಿದ್ಯಾ ಸಂಸ್ಥೆಯಲ್ಲಿ ಪೊಲೀಸ್ ಇಲಾಖೆ ಹಾಗೂ ಎಬಿವಿಪಿ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ಮಾದಕ ವ್ಯಸನ ಮುಕ್ತ ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಧೂಮಪಾನ, ಮಾದಕ ದ್ರವ್ಯ ಹಾಗೂ ಮದ್ಯಪಾನದಂತಹ ದುರಭ್ಯಾಸಗಳು ಮನುಷ್ಯನಿಗೆ 'ಚಟ'ವಾಗಿ ಪರಿಣಮಿಸುತ್ತವೆ. ಇವು ಮನುಷ್ಯನನ್ನು ದಾಸನನ್ನಾಗಿ ಮಾಡಿ, ಆರೋಗ್ಯವನ್ನು ಬೇಗನೆ ಹಾಳು ಮಾಡುತ್ತವೆ. ಆದರೆ, ಕ್ರೀಡೆ



ಎನ್ನುವುದು ಒಂದು ಉತ್ತಮ 'ಹವ್ಯಾಸ'. ಕೆಟ್ಟ ಚಟಗಳ ಬದಲಾಗಿ ಕ್ರೀಡೆಯಂತಹ ಒಳ್ಳೆಯ ಹವ್ಯಾಸಗಳಲ್ಲಿ ತೊಡಗಿಸಿಕೊಂಡರೆ ದೈಹಿಕ ಮತ್ತು ಮಾನಸಿಕ ಆರೋಗ್ಯವು ಅತ್ಯುತ್ತಮವಾಗಿರುತ್ತದೆ ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಯೋಗ, ಧ್ಯಾನ ಹಾಗೂ ಕ್ರೀಡೆಗಳ ಜತೆಗೆ 'ಪುಸ್ತಕ ಓದುವ ಹವ್ಯಾಸ'ವನ್ನು ಬೆಳೆಸಿಕೊಳ್ಳುವುದು ಅತ್ಯಂತ ಮುಖ್ಯ. ಓದುವುದೆಂದರೆ ಕೇವಲ ಶಾಲಾ ಪಠ್ಯಪುಸ್ತಕಗಳನ್ನಷ್ಟೇ ಓದುವುದಲ್ಲ, ಅದರೊಂದಿಗೆ ಸಾಮಾನ್ಯ ಜ್ಞಾನ ಹೆಚ್ಚಿಸುವ ಮತ್ತು ಮಹನೀಯರ ಜೀವನ ಚರಿತ್ರೆಯ ಪುಸ್ತಕಗಳನ್ನು ಓದಬೇಕು. ಇಂತಹ ಉತ್ತಮ ಹವ್ಯಾಸಗಳನ್ನು ರೂಢಿಸಿಕೊಳ್ಳಲು ಎಸ್‌ಎಸ್‌ಎಲ್‌ಸಿ ಒಳಗಿನ ವಯಸ್ಸು ಅತ್ಯಂತ ಸೂಕ್ತವಾದ ಸಮಯವಾಗಿದೆ. ಈ ವಯಸ್ಸಿನಲ್ಲಿ ಓದುವ ಹವ್ಯಾಸ ಬೆಳೆಸಿಕೊಳ್ಳದಿದ್ದರೆ, ವಯಸ್ಸಾದ ಮೇಲೆ ಓದಲು ಪ್ರಯತ್ನಿಸಿದರೂ ಸಾಧ್ಯವಾಗದು ಎಂದರು.

ಕೆಜಿಎಫ್ ನಂತಹ ಸಿನಿಮಾಗಳಲ್ಲಿ ಧೂಮಪಾನ ಮಾಡುವುದರಿಂದ ಶಕ್ತಿ ಬರುತ್ತದೆ ಎಂಬಂತೆ ತಪ್ಪು ಕಲ್ಪನೆಗಳನ್ನು ಬಿಂಬಿಸಲಾಗುತ್ತದೆ. ಆದರೆ ವಾಸ್ತವದಲ್ಲಿ ಧೂಮಪಾನ ಹಾಗೂ ಮದ್ಯಪಾನ ಮಾಡುವವರು ಸಂಪೂರ್ಣವಾಗಿ ಶಕ್ತಿಹೀನರಾಗಿ ಒಣಗಿ ಹೋಗಿರುತ್ತಾರೆ.

### ವಿದ್ಯಾರ್ಥಿಗಳಿಗೆ ಸಲಹೆ

**ಚಿತ್ರರಂಗದಲ್ಲಿ ತೋರಿಸುವ ಇಂತಹ ತಪ್ಪು ದೃಶ್ಯಗಳನ್ನು ನೋಡಿ ವಿದ್ಯಾರ್ಥಿಗಳು ದಾರಿ ತಪ್ಪಬಾರದು. ಕೆಟ್ಟ ಚಟಗಳು ನಿಮ್ಮ ಮೆದುಳನ್ನು ಆವರಿಸದಂತೆ ತಡೆಯಲು, ಇಂದಿನಿಂದಲೇ ಯೋಗ, ಕ್ರೀಡೆ ಮತ್ತು ಓದಿನಂತಹ ಸತ್ಪ್ರವೃತ್ತಿಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.**

## ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಎಸ್‌ಐಆರ್ ಪ್ರಗತಿ ಪರಿಶೀಲಿಸಿದರು

• ಉದಯವಾಹಿನಿ, ಕೋಲಾರ

ಸುಭದ್ರ ಪ್ರಜಾಪ್ರಭುತ್ವದ ಬುನಾದಿಯಾಗಿರುವ ಮತದಾರರ ಪಟ್ಟಿ ಸಮಗ್ರ ವಿಶೇಷ ಪರಿಷ್ಕರಣೆಯನ್ನು (ಎಸ್‌ಐಆರ್) ಸಂಪೂರ್ಣ ದೋಷರಹಿತವಾಗಿ ಸಿದ್ದಪಡಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಅತ್ಯಂತ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ತುಳಸಿ ಮದ್ದಿನೇನಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಡಳಿತ ಭವನದಲ್ಲಿ ಎಸ್‌ಐಆರ್ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆಗೆ ಹೆಚ್ಚಿನ ಒತ್ತು ನೀಡಬೇಕು. ಮುಖ್ಯವಾಗಿ ಮರಣ ಹೊಂದಿದ ಹಾಗೂ ಬೇರೆಡೆಗೆ ಸ್ಥಳಾಂತರಗೊಂಡಿರುವ ಮತದಾರರನ್ನು ಅತ್ಯಂತ ನಿಖರವಾಗಿ ಗುರುತಿಸಿ, ಪಟ್ಟಿಯಿಂದ ಕೈಬಿಡುವ ಪ್ರಕ್ರಿಯೆಯಲ್ಲಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಬೇಕು ಎಂದರು. ಅಂಕಿ-ಅಂಶಗಳನ್ನು ಮಂಡಿಸಿದ ಜಿಲ್ಲಾಧಿಕಾ ಎಂ.ಆರ್.ರವಿ, 'ಕರಡು ಮತದಾರರ ಪಟ್ಟಿಯಲ್ಲಿ ಪ್ರತಿಯೊಬ್ಬ ಅರ್ಹ ಮತದಾರರ ಹೆಸರು ಇರುವುದನ್ನು ಖಾತರಿಪಡಿಸಿಕೊಳ್ಳಲು, ಮನೆ ಬಾಗಿಲಿಗೆ ಬರುವ ಬಿಎಲ್‌ಒಗಳಿಗೆ ನಿಖರ ಮಾಹಿತಿ ನೀಡಿ, ಗಣತಿ ನಮೂನೆಯನ್ನು ಭರ್ತಿ ಮಾಡಿ ಸಹಿ ಮಾಡಬೇಕು.

# ಜಿಲ್ಲೆಯಲ್ಲಿ ಎಸ್‌ಐಆರ್ ಶೇ.83.90 ರಷ್ಟು ಸಾಧನೆ

• ಉದಯವಾಹಿನಿ, ಮೈಸೂರು

ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿರುವ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಚುರುಕಿನಿಂದ ಸಾಗಿದ್ದು, ಜು.8ರವರೆಗೆ ಶೇ.83.90 ಪ್ರಗತಿಯಾಗಿದೆ.

ಜಿಲ್ಲೆಯಲ್ಲಿ ಒಟ್ಟು 27,99,693 ಮತದಾರರಿದ್ದು, ಈ ಪೈಕಿ ಇದುವರೆಗೆ 23,49,006 ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸಲಾಗಿದೆ. ಜಿಲ್ಲೆಯ ಒಟ್ಟು 2,915 ಮತಗಟ್ಟೆಗಳ ಪೈಕಿ 927 (ಶೇ.31.80) ಮತಗಟ್ಟೆಗಳಲ್ಲಿ ಈಗಾಗಲೇ ಶೇ.100ರಷ್ಟು ಫಾರ್ಮ್‌ಗಳನ್ನು ವಿತರಣೆ ಮಾಡಲಾಗಿದೆ. ಇನ್ನುಳಿದಂತೆ 726 (ಶೇ.24.90) ಮತಗಟ್ಟೆಗಳಲ್ಲಿ ಶೇ.90ಕ್ಕಿಂತ ಹೆಚ್ಚು ಫಾರ್ಮ್‌ಗಳ ವಿತರಣೆಯಾಗಿದ್ದು, ಪ್ರಕ್ರಿಯೆ ಅಂತಿಮ ಹಂತ ತಲುಪಿದೆ. ತಂತ್ರಜ್ಞಾನದ ಬಳಕೆಗೆ ಒತ್ತು ನೀಡಲಾಗಿದ್ದು, ಜಿಲ್ಲೆಯ 11,419 ಮತದಾರರು ಸ್ವತಃ ತಾವಾಗಿಯೇ ಆನ್‌ಲೈನ್


ಉದಯವಾಹಿನಿ ಚಿತ್ರ

ಮೂಲಕ ಫಾರ್ಮ್‌ಗಳನ್ನು ಸಲ್ಲಿಸಿದ್ದಾರೆ. ವಿತರಿಸಲಾದ ಫಾರ್ಮ್‌ಗಳ ಪೈಕಿ ಇದುವರೆಗೆ ಒಟ್ಟು 1,13,643 ನಮೂನೆಗಳನ್ನು ಗಣಕೀಕರಣಗೊಳಿಸಲಾಗಿದೆ.

**ಕ್ಷೇತ್ರವಾರು ವಿವರ:** ಚಾಮುಂಡೇಶ್ವರಿ ಕ್ಷೇತ್ರದ ಒಟ್ಟು 3,57,327 ಮತದಾರರ ಪೈಕಿ 2,95,876 ನಮೂನೆಗಳ ವಿತರಣೆಯಾಗಿದ್ದು, 8,864 ಗಣಕೀಕರಣವಾಗಿದೆ. ನರಸಿಂಹರಾಜದ ಒಟ್ಟು 3,27,898 ಮತದಾರರ ಪೈಕಿ 2,14,468 ನಮೂನೆಗಳನ್ನು ವಿತರಿಸಿದ್ದು, 7,424 ಗಣಕೀಕರಣ ಪೂರ್ಣವಾಗಿದೆ. ಚಾಮರಾಜ ಕ್ಷೇತ್ರದ ಒಟ್ಟು 2,64,045 ಮತದಾರರ ಪೈಕಿ 1,76,266 ನಮೂನೆಗಳ ವಿತರಣೆಯಾಗಿದ್ದು, 2,514 ಗಣಕೀಕರಣವಾಗಿದೆ.

ಕೃಷ್ಣರಾಜ ಕ್ಷೇತ್ರದಲ್ಲಿ ಒಟ್ಟು 2,63,632 ಮತದಾರರ ಪೈಕಿ 1,73,510 ನಮೂನೆಗಳ ವಿತರಣರ ಮಾಡಲಾಗಿದ್ದು, 2,300 ಗಣಕೀಕರಣಗೊಂಡಿದೆ. ಹುಣಸೂರಿನ ಒಟ್ಟು 2,53,248 ಮತದಾರರ ಪೈಕಿ 2,46,013 ನಮೂನೆ ವಿತರಣೆಯಾಗಿ, 16,288 ಗಣಕೀಕರಣ ಪೂರ್ಣವಾಗಿದೆ. ವರುಣಾದ ಒಟ್ಟು 2,42,363 ಮತದಾರರ ಪೈಕಿ 2,26,474 ನಮೂನೆ ವಿತರಿಸಿ, 13,964 ಗಣಕೀಕರಣಗೊಂಡಿದೆ. ಹೆಚ್.ಡಿ.ಕೋಟೆಯ ಒಟ್ಟು 2,34,521 ಮತದಾರರ ಪೈಕಿ 2,21,159 ನಮೂನೆಗಳ ವಿತರಣೆಯಾಗಿ 16,258 ಗಣಕೀಕರಣ ಮಾಡಲಾಗಿದೆ.

## ನಾಮಫಲಕ ಅಳವಡಿಸುವಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಸೂಚನೆ

• ಉದಯವಾಹಿನಿ, ಚಾಮರಾಜನಗರ

ಕನ್ನಡ ಭಾಷೆಯ ಸಮರ್ಪಕ ಅನುಷ್ಠಾನಕ್ಕಾಗಿ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಗಳು, ಬ್ಯಾಂಕ್‌ಗಳು ಹಾಗೂ ಸ್ಥಳೀಯ ಸಂಸ್ಥೆಗಳು ಆಡಳಿತದಲ್ಲಿ ಕನ್ನಡ ಕುರಿತ ನಾಮಫಲಕವನ್ನು ಕಡ್ಡಾಯವಾಗಿ ಅಳವಡಿಸುವಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪುರುಷೋತ್ತಮ ಬಿಳಿಮಲೆ ಅವರು ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ನಡೆದ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಮ್ಮ ಮಾತೃಭಾಷೆ ಕನ್ನಡ. ಆಡಳಿತ ಭಾಷೆಯೂ ಆಗಿರುವ ಕನ್ನಡವನ್ನು ಆಡಳಿತ ವ್ಯವಹಾರ ನಡೆಸಲು ಮಾತ್ರವಲ್ಲ, ನಮ್ಮ ಹೃದಯಭಾಷೆಯಾಗಬೇಕು. ಆಗಮಾತ್ರ ಪ್ರತಿಯೊಬ್ಬ ಕನ್ನಡಿಗರು ಕನ್ನಡ ಭಾಷೆಯನ್ನು ಉಳಿಸಿ ಬೆಳೆಸಲು ಸಾಧ್ಯವಾಗಲಿದೆ.

ಆಡಳಿತದಲ್ಲಿ ಕನ್ನಡ ಅನುಷ್ಠಾನಗೊಳಿಸಲು ಇರುವ ದೋಷಗಳಿಗೆ ಪರಿಹಾರ ಕಂಡುಕೊಳ್ಳಬೇಕಿದೆ. ನಿರೀಕ್ಷಿತ ಮಟ್ಟದಲ್ಲಿ ಕನ್ನಡವನ್ನು ನಾವು


ಉದಯವಾಹಿನಿ ಚಿತ್ರ

ಬಳಸಬೇಕು. ಈ ನಿಟ್ಟಿನಲ್ಲಿ ಜಿಲ್ಲಾ, ತಾಲ್ಲೂಕು ಮಟ್ಟದ ಇಲಾಖೆಗಳು ಆಡಳಿತದಲ್ಲಿ ಕನ್ನಡ ಕುರಿತ 6040 ಅಳತೆ ನಾಮಫಲಕವನ್ನು ಕಡ್ಡಾಯವಾಗಿ ಹಾಕುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಆಡಳಿತದಲ್ಲಿ ಕನ್ನಡ ಅನುಷ್ಠಾನ ಸಮರ್ಪಕವಾಗಿರುವ ಬಗ್ಗೆ ಪರಿಶೀಲಿಸುವುದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಪ್ರಮುಖ ಉದ್ದೇಶವಾಗಿದೆ. 1994ರಲ್ಲಿ ಅಸ್ತಿತ್ವಕ್ಕೆ ಬಂದ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಆಡಳಿತದಲ್ಲಿ ಕನ್ನಡ ಅನುಷ್ಠಾನದ ಸಮಸ್ಯೆಗಳ ಕುರಿತು ಜಿಲ್ಲಾಡಳಿತದ ಮೂಲಕ ವರದಿ ಸಂಗ್ರಹಿಸಿ ಸರ್ಕಾರಕ್ಕೆ ಸಲ್ಲಿಸುವ ಕೆಲಸ ಮಾಡುತ್ತಿದೆ. 2015ರ ಸಮಗ್ರ ಕನ್ನಡ ಅನುಷ್ಠಾನದ ಪ್ರಕಾರ ಕನ್ನಡವನ್ನು ಮೊದಲ ಭಾಷೆಯಾಗಿ ಕಲಿಯಬೇಕಿದೆ.

## ಹಿಂದುಳಿದವರಿಗೆ ನ್ಯಾಯ ಒದಗಿಸಿ: ಸಂಸದ ಪಿ.ಸಿ.ಮೋಹನ್

• ಉದಯವಾಹಿನಿ, ಮೈಸೂರು,

ಹಿಂದುಳಿದ ವರ್ಗಗಳಿಗೆ ರಾಜ್ಯ ಕಾಂಗ್ರೆಸ್ ಸರ್ಕಾರದಿಂದ ತೀರ ಅನ್ಯಾಯ ಆಗುತ್ತಿದ್ದು, ಕೂಡಲೇ ಸಾಮಾಜಿಕ ಮತ್ತು ಶೈಕ್ಷಣಿಕ ವರದಿಯನ್ನು ಅಧಿವೇಶನದಲ್ಲಿ ಮಂಡಿಸಿ ನ್ಯಾಯ ಒದಗಿಸುವಂತೆ ಸಂಸದ ಪಿ.ಸಿ.ಮೋಹನ್ ಆಗ್ರಹಿಸಿದರು. ನಗರದ ಬಿಜೆಪಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಹತ್ತು-ಹನ್ನೆರಡು ವರ್ಷಗಳಿಂದ ಕಾಂಗ್ರೆಸ್ ಸರ್ಕಾರ ಹಾಗೂ ಸಿದ್ದರಾಮಯ್ಯ ಹಿಂದುಳಿದ ವರ್ಗಗಳಿಗೆ ನಿರಂತರ ಅನ್ಯಾಯ ಮಾಡುತ್ತಾ ಬಂದಿದ್ದಾರೆ.

ಹಿಂದುಳಿದ ವರ್ಗಗಳ ಚಾಂಪಿಯನ್ ಎಂದು ಹೇಳಿಕೊಳ್ಳುವ ಸಿದ್ದರಾಮಯ್ಯ 2013ರಲ್ಲಿ ಹಿಂದುಳಿದ ವರ್ಗಗಳ ಹೆಸರಿನಲ್ಲಿ ಹುಸಿ ಆಶ್ವಾಸನೆಗಳನ್ನು ನೀಡಿ, ಮೂಲ ಕಾಂಗ್ರೆಸ್ಸಿಗರನ್ನು ಮೂಲೆಗುಂಪು ಮಾಡಿ ಅಧಿಕಾರಕ್ಕೆ ಬಂದರು. ಸುಮಾರು 600 ಕೋಟಿ ಸಾರ್ವಜನಿಕ ಹಣವನ್ನು ವಿವಿಧ ಆಯೋಗಗಳ ಹೆಸರಿನಲ್ಲಿ ಖರ್ಚು ಮಾಡಿದ್ದರೂ, ಹಿಂದುಳಿದ ಸಮುದಾಯಕ್ಕೆ ಯಾವುದೇ ನೈಜ ಪ್ರಯೋಜನ ಸಿಕ್ಕಿಲ್ಲ ಎಂದು ಆರೋಪಿಸಿದರು. 2014ರಲ್ಲಿ ಸಿದ್ದರಾಮಯ್ಯನವರ ಆಪ್ತರಾದ ಕಾಂತರಾಜು ಅವರ ನೇತೃತ್ವದಲ್ಲಿ ಆಯೋಗ ರಚಿಸಿ, 189 ಕೋಟಿ ರೂ. ಖರ್ಚು ಮಾಡಿದ ನಂತರವೂ ವರದಿಗೆ ಸಹಿ ಮಾಡದೆ ವಿಳಂಬ ಧೋರಣೆ ಅನುಸರಿಸಿದರು. ತದನಂತರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಜವಾಬ್ದಾರಿಯನ್ನು ಜಯಪ್ರಕಾಶ್ ಹೆಗ್ಡೆ ಅವರಿಗೆ ವಹಿಸಿದರೂ, ಹತ್ತು ವರ್ಷ ಕಳೆದರೂ ಯಾವುದೇ ಅಂತಿಮ ವರದಿ ಬಿಡುಗಡೆಯಾಗಲಿಲ್ಲ. ಬಿಹಾರದಲ್ಲಿ ನಿತೀಶ್‌ಕುಮಾರ್ ಹಾಗೂ ತೆಲಂಗಾಣ ಸರ್ಕಾರ ಕೇವಲ ಒಂದೇ ವರ್ಷದಲ್ಲಿ ಸಾಮಾಜಿಕ-ಆರ್ಥಿಕ ಸಮೀಕ್ಷೆ ನಡೆಸಿ ಹಿಂದುಳಿದ ವರ್ಗಗಳಿಗೆ ನ್ಯಾಯ ಒದಗಿಸಿವೆ. ಆದರೆ ಕರ್ನಾಟಕದಲ್ಲಿ ಹತ್ತು ವರ್ಷಗಳಾದರೂ ಕಾಂಗ್ರೆಸ್ ಕೇವಲ ಕಾಲಹರಣ ಮಾಡಿದೆ ಎಂದರು ದೂರಿದರು.


ಉದಯವಾಹಿನಿ ಚಿತ್ರ

# ಬೆಳೆಗಳ ಸಂರಕ್ಷಣೆಗೆ ನೀರು ಹರಿಸುವಂತೆ ರೈತಸಂಘ ಒತ್ತಾಯ

## ನದಿ ಒಡ್ಡು ಅಣೆಕಟ್ಟೆ ನಾಲೆಗಳ ಮೂಲಕ ನೀರು ಹರಿಸುವುದಕ್ಕೂ ಯಾವುದೇ ಸಂಬಂಧವಿಲ್ಲ

• ಉದಯವಾಹಿನಿ, ಕೆ.ಆರ್.ಪೇಟೆ

ತಾಲ್ಲೂಕಿನ ಮಂದಗೆರೆ ಎಡ ಮತ್ತು ಬಲದಂಡೆ ನಾಲಾ ವ್ಯಾಪ್ತಿಯಲ್ಲಿ ಬೆಳೆದು ನಿಂತಿರುವ ಕಬ್ಬು ಮತ್ತಿತರ ಬೆಳೆಗಳ ಸಂರಕ್ಷಣೆಗೆ ಹೇಮಾವತಿ ನದಿಯಿಂದ ಒಂದು ಕಂತು ನೀರು ಹರಿಸಲು ನೀರಾವರಿ ಇಲಾಖೆಯ ಜೊತೆ ವ್ಯವಹರಿಸಿ ಕ್ರಮ ಕೈಗೊಳ್ಳುವಂತೆ ತಾಲ್ಲೂಕು ರೈತಸಂಘದ ಮುಖಂಡರು ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರನ್ನು ಆಗ್ರಹಿಸಿದರು. ತಾಲ್ಲೂಕು ರೈತಸಂಘದ ಅಧ್ಯಕ್ಷ ಕಾರಿಗನಹಳ್ಳಿ ಪುಟ್ಟೇಗೌಡ ನೇತೃತ್ವದಲ್ಲಿ ತಾಲೂಕಿನ ಕೃಷಿ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಬಿ.ಎಸ್ ದೀಪಕ್ ಅವರನ್ನು ಭೇಟಿ ಮಾಡಿದ ರೈತ ಮುಖಂಡರು ಕೇವಲ ಬಿತ್ತನೆ ಬೀಜ, ಕಳೆ ನಾಶಕ, ರಸಗೊಬ್ಬರ ಹಂಚಿಕೆ ಮಾಡುವುದಷ್ಟೇ ಕೃಷಿ ಇಲಾಖೆಯ ಕೆಲಸವಲ್ಲ, ಬದಲಾಗಿ ಅಳಿದುಳಿದ ಬೆಳೆ ಸಂರಕ್ಷಣೆಗೂ ಮುಂದಾಗಬೇಕೆಂದು ಆಗ್ರಹಿಸಿದರು.

ತಾಲ್ಲೂಕಿನ ಮಂದಗೆರೆ ಮತ್ತು ಹೇಮಗಿರಿ ಬಳಿ ಮೈಸೂರು ಅರಸರು ಒಂದು ಶತಮಾನದ ಹಿಂದೆಯೇ ಹೇಮಾವತಿ ನದಿಗೆ ಅಡ್ಡಲಾಗಿ ಒಡ್ಡು ಅಣೆಕಟ್ಟೆಗಳನ್ನು ನಿರ್ಮಿಸಿ ರೈತರ ಕೃಷಿ ಚಟುವಟಿಕೆಗಳಿಗೆ ಉತ್ತೇಜನ ನೀಡಿದ್ದಾರೆ. ಮಳೆಗಾಲದಲ್ಲಿ ಹರಿಯುವ ನದಿ ನೀರನ್ನು ಸದ್ಬಳಕೆ ಮಾಡಿಕೊಂಡು ಈ ಅಣೆಕಟ್ಟೆ ನಾಲಾ ವ್ಯಾಪ್ತಿಯ ರೈತರು ಭತ್ತ, ಕಬ್ಬು ಮತ್ತಿತರ ಬೆಳೆಗಳನ್ನು ಬೆಳೆಯುತ್ತಿದ್ದಾರೆ.

ಮೆಟ್ಟೂರು ಅಣೆಕಟ್ಟೆ ನಿರ್ಮಾಣಕ್ಕೂ ಮುನ್ನವೇ ಹೇಮಗಿರಿ, ಮಂದಗೆರೆ ಅಣೆಕಟ್ಟೆಗಳನ್ನು ನಿರ್ಮಿಸಿದ್ದು ಕಾವೇರಿ ಜಲ ವಿವಾದಕ್ಕೂ ನದಿ ಒಡ್ಡು ಅಣೆಕಟ್ಟೆ ನಾಲೆಗಳ ಮೂಲಕ ನೀರು ಹರಿಸುವುದಕ್ಕೂ ಯಾವುದೇ ಸಂಬಂಧವಿಲ್ಲ.


ಉದಯವಾಹಿನಿ ಚಿತ್ರ

### ಬೆಳೆಗಳ ಸಂರಕ್ಷಣೆ

ಕೃಷಿ ಇಲಾಖೆ ಬೆಳೆದು ನಿಂತಿರುವ ಬೆಳೆಗಳ ಮಾಹಿತಿ ನೀಡಿ ತಾಲ್ಲೂಕು ಆಡಳಿತದೊಂದಿಗೆ ಚರ್ಚಿಸಿ ನೀರಾವರಿ ಇಲಾಖೆಯ ಜೊತೆ ವ್ಯವಹರಿಸಿ ಬೆಳೆಗಳ ಸಂರಕ್ಷಣೆಗೆ ಅಗತ್ಯ ನೀರು ಹರಿಸಲು ಕ್ರಮ ವಹಿಸುವಂತೆ ಪುಟ್ಟೇಗೌಡ ಒತ್ತಾಯಿಸಿದರು.

> ರೈತರ ಬೆಳೆ ಸಂರಕ್ಷಣೆಗೆ ಅಗತ್ಯವಾದ ಒಂದು ಕಂತು ನೀರು ಬಿಡುಗಡೆಯ ಸಂಬಂಧ ತಹಸೀಲ್ದಾರ್ ಮತ್ತು ನೀರಾವರಿ ಇಲಾಖೆಯೊಂದಿಗೆ ವ್ಯಹಹರಿಸುವುದಾಗಿ ತಿಳಿಸಿದರು. -ಬಿ.ಎಸ್.ದೀಪಕ್

ಆದರೆ ನೀರಾವರಿ ಇಲಾಖೆಯ ಅಧಿಕಾರಿಗಳು ಕಾವೇರಿ ಜಲ ವಿವಾದದ ಜೊತೆಗೆ ತಮ್ಮಷ್ಟಕ್ಕೆ ತಾವೇ ಸಂಬಂಧ ಕಲ್ಪಿಸಿಕೊಂಡು ನದಿ ಅಣೆಕಟ್ಟೆ ನಾಲೆಗಳಿಗೆ ಸಕಾಲದಲ್ಲಿ ನೀರು ಹರಿಸದೆ ರೈತ ಸಮುದಾಯಕ್ಕೆ ಅನಗತ್ಯ ತೊಂದರೆ ಕೊಡುತ್ತಲೇ ಬಂದಿದ್ದಾರೆ.

# ಮಿನಿ ನ್ಯೂಸ್

## ಕನ್ನಡ ಸಾಹಿತ್ಯ ಓದುಗರ ಸಂಖ್ಯೆ ವಿರಳ: ಸ್ವಾಮೀಜಿ ಕಳವಳ


ಉದಯವಾಹಿನಿ ಚಿತ್ರ

• ಉದಯವಾಹಿನಿ, ತಿಪಟೂರು

ಆಧುನಿಕ ತಂತ್ರಜ್ಞಾನದ ಹಾವಳಿಯಲ್ಲಿ ಕನ್ನಡ ಸಾಹಿತ್ಯ ಓದುಗರ ಸಂಖ್ಯೆ ವಿರಳವಾಗುತ್ತಿದ್ದು, ಗುಣಮಟ್ಟದ ಬರಹಗಾರರೂ ಕಡಿಮೆಯಾಗುತ್ತಿದ್ದಾರೆ ಎಂದು ಗುರುಕುಲಾನಂದಾಶ್ರಮದ ಇಮ್ಮಡಿ ಕರಿಬಸವ ದೇಶೀಕೇಂದ್ರ ಸ್ವಾಮೀಜಿ ಆತಂಕ ವ್ಯಕ್ತಪಡಿಸಿದರು.

ನಗರದ ಕಲ್ಪತರು ಆಡಿಟೋರಿಯಂ ಇತ್ತೀಚೆಗೆ ನಡೆದ ಡಾ.ಎಸ್.ಎಲ್.ರಾಜಶೇಖರಯ್ಯ ರಚಿತ 'ಜಾನುವಾರು ಆರೋಗ್ಯ ಮತ್ತು ಯಶಸ್ವಿ ಹೈನುಗಾರಿಕೆ ಹಾಗೂ 'ಕಣ್ಣಾ ಮುಚ್ಚೆ ಕಾಡೇಗೂಡೆ' ಎಂಬ ಎರಡು ಕೃತಿಗಳನ್ನು ಜನಾರ್ಪಣೆ ಮಾಡಿ ಮಾತನಾಡಿದರು. ಕನ್ನಡ ಭಾಷಾ ಬೆಳವಣಿಗೆ ಸಾಹಿತ್ಯವು ಬಹಳ ಪ್ರಮುಖ ಅಂಶವಾಗಿದೆ. ಕೃತಿ ಕಾದಂಬರಿಗಳು ಪುಸ್ತಕಗಳು ಹೊರಬರದಿದ್ದರೆ ಭಾಷಾ ಬೆಳವಣಿಗೆಯು ಆತಂಕಕಾರಿಯಾಗುತ್ತದೆ. ಪಶು ವೈದ್ಯರಾಗಿರುವ ಡಾ. ಎಸ್.ಎಲ್. ರಾಜಶೇಖರಯ್ಯ ಕೃತಿಗಳು ರೈತರಿಗೆ, ಸಾಹಿತ್ಯಾಸಕ್ತರಿಗೆ ಮಹತ್ವದ್ದಾಗಿದ್ದು, ಪಶು ವೈದ್ಯಕೀಯ ಉನ್ನತ ವ್ಯಾಸಂಗಕ್ಕೆ ಅತ್ಯಗತ್ಯವಾದ ಪಠ್ಯಪುಸ್ತಕಗಳು ಕನ್ನಡ ಮಾಧ್ಯಮದಲ್ಲಿ ಲಭ್ಯವಿಲ್ಲದ ಕೊರತೆಯನ್ನು ನೀಗಿಸುವ ಪ್ರಯತ್ನ ಶ್ಲಾಘನೀಯ ಎಂದರು.

ಸಮಾರಂಭದ ಅಧ್ಯಕ್ಷತೆವಹಿಸಿದ್ದ ಕರ್ನಾಟಕ ಪಶು ವೈದ್ಯಕೀಯ ಸಂಘ ಅಧ್ಯಕ್ಷ ಡಾ.ಶಿವಶರಣಪ್ಪ ಯಲಗೋಡ್ ಮಾತನಾಡಿ, ಡಾ. ರಾಜಶೇಖರಯ್ಯ ನವರು ನಮ್ಮ ಇಲಾಖೆಗೇ ಅನರ್ಘ್ಯ ರತ್ನದಂತೆ ಇದ್ದವರು. ನಿವೃತ್ತಿಯ ನಂತರವೂ ತಮ್ಮ ಆಸಕ್ತಿಯ ಬರವಣಿಗೆಯಲ್ಲಿ ತೊಡಗಿಸಿಕೊಂಡು ಅತ್ಯುತ್ತಮ ಕೃತಿಗಳನ್ನು ನೀಡಿದ್ದಾರೆ.

## ಸಮೀಕ್ಷೆಗೆ ನಾಗರಿಕರ ಸಹಕಾರ ಅಗತ್ಯ: ಎಇಇ ರಾಜಶೇಖರ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ತುರುವೇಕೆರೆ

ಗೃಹಜ್ಯೋತಿ ಯೋಜನೆಯ ನಿಜವಾದ ಫಲಾನುಭವಿಗಳನ್ನು ಗುರುತಿಸಲು ರಾಜ್ಯ ಸರ್ಕಾರ ಮನೆ ಮನೆಗೆ ತೆರಳಿ ಮರು ಪರಿಶೀಲನಾ ಸರ್ವೆ ನಡೆಸುತ್ತಿದ್ದು, ತಾಲ್ಲೂಕಿನ ಎಲ್ಲಾ ಗೃಹ ಜ್ಯೋತಿ ಯೋಜನೆಯ ಫಲಾನುಭವಿಗಳು ನಮ್ಮ ಬೆಸ್ಕಾಂ ಸಿಬ್ಬಂದಿ ತಮ್ಮ ಮನೆಗೆ ಬಂದು ಮಾಹಿತಿ ಕೇಳಿದಾಗ ಮಾಹಿತಿ ನೀಡಿ ಸಹಕಾರ ನೀಡಬೇಕು ಎಂದು ಬೆಸ್ಕಾಂ ಎಇಇ ರಾಜಶೇಖರ್ ತಿಳಿಸಿದರು.

ಪಟ್ಟಣದಲ್ಲಿ ತಮ್ಮ ಸಿಬ್ಬಂದಿಯೊಂದಿಗೆ ಮನೆ ಮನೆಗೆ ತೆರಳಿ ಗೃಹ ಜ್ಯೋತಿ ಯೋಜನೆ ಸರ್ವೆ ಕಾರ್ಯದಲ್ಲಿ ಪಾಲ್ಗೊಂಡ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾಲ್ಲೂಕಿನಲ್ಲಿ 40,096 ಗೃಹಜ್ಯೋತಿ ನೋಂದಣಿದಾರರಿದ್ದಾರೆ. ಈ ಎಲ್ಲಾ ಫಲಾನುಭವಿಗಳ ಮನೆಗೆ ನಮ್ಮ ಬೆಸ್ಕಾಂ ಸಿಬ್ಬಂದಿ ತೆರಳಿ ಸರ್ಕಾರದ ನಿರ್ದೇಶನದಂತೆ ಗೃಹಜ್ಯೋತಿ ಯೋಜನೆಯ ಅರ್ಹ ಫಲಾನುಭವಿಗಳನ್ನು ಗುರುತಿಸಲು ಪರಿಶೀಲನಾ ಸರ್ವೆ ನಡೆಸುತ್ತಿದೆ. ಈ ಸಮೀಕ್ಷೆಯ ಮೂಲಕ ಅನರ್ಹರನ್ನು ಕೈಬಿಟ್ಟು ಅರ್ಹರಿಗೆ ಸೌಲಭ್ಯ ಒದಗಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದರು. ರಾಜ್ಯದಲ್ಲಿ 2023ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ 2023 ಆಗಸ್ಟ್ 01 ರಿಂದ ಉಚಿತವಾಗಿ ರಾಜ್ಯದ ಪ್ರತಿ ಮನೆಗೆ ಗರಿಷ್ಠ 200 ಯೂನಿಟ್ ವಿದ್ಯುತ್ ನೀಡುವ ಗೃಹಜ್ಯೋತಿ ಯೋಜನೆ ಜಾರಿಗೊಂಡಿದೆ. ಸರ್ಕಾರ ಉತ್ತಮ ಯೋಜನೆ ಜಾರಿಗೊಳಿಸಿದ್ದು ಅರ್ಹ ಫಲಾನುಭವಿಗಳಿಗೆ ತಲುಪಬೇಕೆನ್ನುವ ಉದ್ದೇಶವನ್ನು ಸರ್ಕಾರ ಹೊಂದಿದೆ.

## ನಗರದ ಮೂಲಸೌಕರ್ಯ ಅಭಿವೃದ್ದಿಗೆ ಬದ್ದ - ಕೆ.ಶೇಷಾದ್ರಿ



• ಉದಯವಾಹಿನಿ, ರಾಮನಗರ

ನಗರದಲ್ಲಿ ಒಳಚರಂಡಿ ರಸ್ತೆ ಅಭಿವೃದ್ಧಿಗೆ ನಗರಸಭೆಯು ಬದ್ಧವಾಗಿದ್ದು ಮೂಲ ಸೌಕರ್ಯಗಳಿಗೆ ಹೆಚ್ಚು ಒತ್ತು ನೀಡಲಾಗುತ್ತಿದೆ ಎಂದು ನಗರಸಭೆ ಅಧ್ಯಕ್ಷ ಕೇಶೇಷಾದ್ರಿ ಹೇಳಿದರು. ನಗರದ 27ನೇ ವಾರ್ಡಿನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಹಲವು ವರ್ಷಗಳಿಂದ ರಸ್ತೆ ಕಾಮಗಾರಿಗಳು ನೆನೆಗುದಿಗೆ ಬಿದ್ದಿದ್ದು, ಸಾರ್ವಜನಿಕರಿಂದ ಮನವಿಗಳು ಬಂದಿದ್ದವು ಈ ಹಿನ್ನಲೆಯಲ್ಲಿ ಇಂದು ರಾಯರದೊಡ್ಡಿಯಿಂದ ಮಾಗಡಿ ರಸ್ತೆಗೆ ಲಿಂಕ್ ಕಲ್ಪಿಸುವ ರಸ್ತೆ, ಗ್ಯಾಸ್ ಗೋಡನ್ ನಿಂದ ಆಂಜನೇಯ ಸ್ವಾಮಿ ದೇವಾಲಯಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿಗೆ ಭೂಮಿ ಪೂಜೆ ನೆರವೇರಿಸಲಾಗಿದೆ ಎಂದು ಹೇಳಿದರು. ನಗರಸಭೆಯಲ್ಲಿನ ಹಣಕಾಸಿನ ಕೊರತೆ ಇದ್ದರು, ಜನರಿಗೆ ಮೂಲ ಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ನಮ್ಮವರೆ ಮುಖ್ಯಮಂತ್ರಿಗಳಾಗಿದ್ದು ನಗರದ ಅಭಿವೃದ್ಧಿಗೆ ಅನುದಾನ ನೀಡುವ ಭರವಸೆ ಇದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಗುಣಮಟ್ಟದ ಕಾಮಗಾರಿ ಮಾಡಲು ಇಂಜಿನಿಯರುಗಳಿಗೆ ಸೂಚನೆ ನೀಡಲಾಗಿದೆ. ವಿವೇಕಾನಂದ ನಗರ ಬಡಾವಣೆ ವೇಗವಾಗಿ ಬೆಳೆಯುತ್ತಿದೆ.

ಈ ಭಾಗದಲ್ಲಿನ ಹೊಸ ಬಡಾವಣೆಗಳಲ್ಲಿ ಮೂಲ ಸೌಕರ್ಯಗಳ ಕೊರತೆ ಇದ್ದು ಜನಹಿತಕ್ಕಾಗಿ ಅಗತ್ಯ ಮೂಲ ಸೌಕರ್ಯ ಕಲ್ಪಿಸಲಾಗುವುದು ಎಂದರು. ನಗರಸಭೆ ಉಪಾಧ್ಯಕ್ಷೆ ಗಿರಿಜಮ್ಮ, ಮಾಜಿ ಅಧ್ಯಕ್ಷೆ ಪಾರ್ವತಮ್ಮ, ನಗರಸಭೆ ಸದಸ್ಯೆ ಪವಿತ್ರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಕೊಂಗರಹಳ್ಳಿ ಗ್ರಾಮ ಪಂ. ಸಾಮಾಜಿಕ ಲೆಕ್ಕ ಪರಿಶೋಧನಾ ಸಭೆ

• ಉದಯವಾಹಿನಿ, ಕೊಳ್ಳೇಗಾಲ

ತಾಲ್ಲೂಕಿನ ಕೊಂಗರಹಳ್ಳಿ ಗ್ರಾಮ ಪಂಚಾಯತ್ 2025/26ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಸಾಮಾಜಿಕ ಲೆಕ್ಕ ಪರಿಶೋಧನಾ ಸಭೆ ಮತ್ತು 15ನೇ ಹಣಕಾಸು ಯೋಜನೆಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಲೆಕ್ಕ ಪರಿಶೋಧನಾ ಗ್ರಾಮ ಸಭೆ ನಡೆಯಿತು. ಸಭೆಯಲ್ಲಿ ತಾಲ್ಲೂಕು ನರೇಗಾ ಸಂಯೋಜಕ ಸಿದ್ದಪ್ಪಾಜಿ ಮಾತನಾಡುತ್ತಾ ಕೊಂಗರಹಳ್ಳಿ ಗ್ರಾಮ ಪಂಚಾಯತಿ ಸೇರಿದಂತೆ ಕಾಮಗೆರೆ ಗ್ರಾಮದಲ್ಲಿ ನರೇಗಾ ಯೋಜನೆ ಅಡಿ ವಸತಿ ನಿರ್ಮಾಣ ಸಮುದಾಯ ಶೌಚಾಲಯ ನಿರ್ಮಾಣ ಸೇರಿದಂತೆ ವಿವಿಧ ಅಭಿವೃದ್ಧಿಯ 36 ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು ಒಟ್ಟು 1,68,1200/- ರೂ.ಗಳನ್ನು ಖರ್ಚು ಮಾಡಲಾಗಿದೆ ಎಂದು ಸವಿವರವಾಗಿ ತಿಳಿಸಿದರು.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 15ನೇ ಹಣಕಾಸು ಹಾಗೂ ರಾಜ್ಯ ಹಣಕಾಸು ಯೋಜನೆಯಡಿ ಗಣತಾಜ್ಯ ಇಲವಾರಿ ತುರ್ತುಮಲ್ಯ ಕೆಲಸಗಳಿಗೆ ಮೀಸಲು ಅನುದಾನ ಚರಂಡಿ ಊಳೆತ್ತುವುದು ವಿದ್ಯುತ್ ದೀಪ ಕುಡಿಯುವ ನೀರಿನ ನಿರ್ವಹಣೆ ನೌಕರರ ವೇತನದ ಖಾತೆಗೆ ಜಮಾ. ಸೇರಿದಂತೆ 4,62,1091 /- ರೂಗಳನ್ನ ಖರ್ಚು ಮಾಡಲಾಗಿದೆ.

# ಸಚಿವ ಸ್ಥಾನಕ್ಕಾಗಿ ಮುಖ್ಯಮಂತ್ರಿಯ ಹಿಂದೆ ಬೀಳಲ್ಲ. ನಮಗೂ ಗೌರವ, ಸ್ವಾಭಿಮಾನವಿದೆ: ಶಾಸಕ ಅಶೋಕ ಪಟ್ಟಣ

• **ಉದಯವಾಹಿನಿ ಬೆಳಗಾವಿ:**

ನಾನು ಪದೇ ಪದೇ ಚಿಕ್ಕ ಮಕ್ಕಳಂತೆ ಮಂತ್ರಿ ಮಾಡುವಂತೆ ಕೇಳುವುದಿಲ್ಲ. ಸಚಿವ ಸ್ಥಾನಕ್ಕಾಗಿ ಮುಖ್ಯಮಂತ್ರಿಯ ಹಿಂದೆ ಬೀಳಲ್ಲ. ನಮಗೂ ಗೌರವ ಮತ್ತು ಸ್ವಾಭಿಮಾನವಿದೆ. ಸಚಿವ ಸ್ಥಾನಕ್ಕಿಂತಲೂ ಸ್ವಾಭಿಮಾನ ದೊಡ್ಡದು ಎಂದು ಕಾಂಗ್ರೆಸ್ ಹಿರಿಯ ಶಾಸಕ ಅಶೋಕ ಪಟ್ಟಣ ಬೇಸರ ಹೊರ ಹಾಕಿದ್ದಾರೆ. ಬೆಳಗಾವಿಯ ಪ್ರವಾಸಿ ಮಂದಿರದಲ್ಲಿಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ನಾವು ಎಷ್ಟು ಕೆಲಸ ಮಾಡಿದ್ದೇವೆ?, ಎಷ್ಟು ನಿಷ್ಠಾವಂತರು ಎಂಬುದು ಮುಖ್ಯಮಂತ್ರಿಗಳಿಗೆ ಗೊತ್ತಿದೆ ಎಂದರು.

ಸಂದರ್ಭಕ್ಕೆ ಅನುಸಾರವಾಗಿ ಮಂತ್ರಿ ಮಂಡಲ ರಚಿಸುತ್ತಾರೆ. ಬೆಳಗಾವಿ ಜಿಲ್ಲೆಗೆ 3 ಸಚಿವ ಸ್ಥಾನ ಕೇಳಿದ್ದೇವೆ. ಬಿಜೆಪಿ ಸರ್ಕಾರ ಇದ್ದಾಗ 4 ಮಂತ್ರಿ ಸ್ಥಾನ ಕೊಟ್ಟಿದ್ದರು. ನಾನು ಅಶೋಕ ಪಟ್ಟಣ ಅಂತಾ ಪ್ರಮಾಣ ವಚನ ಸ್ವೀಕರಿಸಿದ ಮೇಲೆಯೇ ಮಂತ್ರಿ ಸ್ಥಾನ ಕನ್ಫರ್ಮ್ ಅಂದುಕೊಳ್ಳಬೇಕು ಎಂದು ಹಾಸ್ಯಚಟಾಕಿ ಹಾರಿಸಿದರು.

ನನ್ನನ್ನು ಮಂತ್ರಿ ಮಾಡುವ ಆಸೆಯಿದೆ ಅಂತಾ ಸಿದ್ದರಾಮಯ್ಯ ಅವರು ಆಗ ಹೇಳಿದ್ದರು. ಆದರೆ, ಯೋಗ್ಯತೆ ಇರುವ ಚೀಫ್ ವಿಪ್ ಅಗತ್ಯವಿದೆ ಅಂತಾ ಹೇಳುತ್ತಿದ್ದರು.



ಉದಯವಾಹಿನಿ ಚಿತ್ರ

ಸಮಯ ಬಂದಾಗ ಮಂತ್ರಿ ಮಾಡ್ತೀನಿ ಅಂತಾ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಹೇಳಿದ್ದಾರೆ ಎಂದರು.ಸಿದ್ದರಾಮಯ್ಯ, ಸತೀಶ್ ಜಾರಕಿಹೊಳಿ ಸಂಬಂಧ ಹಳಸಿದೆಯೇ ಎಂಬ ಪ್ರಶ್ನೆಗೆ, ನೀವೇ ಅದನ್ನು ಸೃಷ್ಟಿ ಮಾಡುತ್ತಿದ್ದೀರಿ, ಅವರಿಬ್ಬರೂ ಚೆನ್ನಾಗಿಯೇ ಇದ್ದಾರೆ. ನೀವೇ ಕೇಳಿ ಕೇಳಿ ಜಗಳ ಹಚ್ಚಿಸುತ್ತೀರಿ ಅನ್ನಿಸ್ತೆ ಎಂದು ಹೇಳಿದರು.

ಅವರವರ ಸಂಬಂಧ ನನಗೇನೂ ಗೊತ್ತಿಲ್ಲ. ಒಮ್ಮೊಮ್ಮೆ ನನ್ನ ಪಕ್ಕದಲ್ಲಿ ಇದ್ದರೂ ಸಿದ್ದರಾಮಯ್ಯ ಅವರು ಮಾತನಾಡುವುದಿಲ್ಲ. ಕೆಲವೊಮ್ಮೆ ದೇಹ ಇಲ್ಲೇ ಇರುತ್ತದೆ, ತಲೆ ಎಲ್ಲಿಯೋ ಇರುತ್ತದೆ. ಸಿದ್ದರಾಮಯ್ಯ ಸಕ್ರಿಯ ರಾಜಕಾರಣದಲ್ಲಿ ಇದ್ದಾರೆ. ಮನೆಯಲ್ಲಿ ಆರಾಮವಾಗಿದ್ದಾರೆ. ಮುಂದಿನ ಚುನಾವಣೆಗೆ ತಯಾರಿ ಮಾಡುತ್ತಾರೆ ಎಂದು ತಿಳಿಸಿದರು.

ನನ್ನ ರಾಜಕೀಯ ನಿವೃತ್ತಿ ಎಲ್ಲವೂ ಊಹಾಪೋಹಗಳು. ನಾನು ಮುಂದಿನ ಚುನಾವಣೆಗೆ ಸಿದ್ಧವಾಗಿದ್ದೇನೆ. ಈ ಬಾರಿ 12 ಸಾವಿರ ಲೀಡ್ ಬಂದಿತ್ತು. ಮುಂದಿನ ಬಾರಿ 25 ಸಾವಿರ ಲೀಡ್‌ನಲ್ಲಿ ಗೆಲ್ಲುತ್ತೇನೆ. ರಾಜಕೀಯದಲ್ಲಿ ಎಲ್ಲರೂ ಕೊನೆ ಚುನಾವಣೆ ಅಂತ ಹೇಳುತ್ತಾರೆ. ಆದರೆ, ಸಾಯುವವರೆಗೂ ನಾವೇ ಇರಬೇಕು ಅಂತಾರೆ. ನಾನು ಏನೇ ಇದ್ದರೂ ನೇರವಾಗಿ ಹೇಳುತ್ತೇನೆ. ನಾನು ನನ್ನ ಕೊನೆಯ ಚುನಾವಣೆ ಅಂತಾ ಹೇಳಿಯೇ ಇಲ್ಲ. ಇದು ನನ್ನ ಕೊನೆ ಚುನಾವಣೆ ಅಂತಾ ವಿರೋಧಿಗಳು ಅಪಪ್ರಚಾರ ಮಾಡುತ್ತಿದ್ದಾರೆ. ನಾನು ವೀಕ್ ಅಂತೂ ಆಗುವುದಿಲ್ಲ. ಸುಳ್ಳು ಸುದ್ದಿ ಹಬ್ಬಿಸಿ, ಅಪಪ್ರಚಾರ ಮಾಡಿ ನನ್ನ ಇಮೇಜ್ ಡೌನ್ ಮಾಡಲು ಯತ್ನಿಸುತ್ತಿದ್ದಾರೆ ಎಂದು ಕಿಡಿಕಾರಿದರು. ನನ್ನ ಉಸಿರಿರುವವರೆಗೂ ರಾಜಕಾರಣ ಮಾಡುತ್ತೇನೆ. ನನ್ನ ಆರೋಗ್ಯ ಕೈ ಕೊಟ್ಟರೆ, ಮುಂದಿನ ಪೀಳಿಗೆಗೆ ನನ್ನ ತಮ್ಮನ ಮಗ ಅನಿಕೇತ್ ಇದ್ದಾನೆ ಎಂದು ತಿಳಿಸಿದರು.

# ತುಂಗಾ ಏತ ನೀರಾವರಿ ಯೋಜನೆಯ ಕೋಟಿ ಕೋಟಿ ವಿದ್ಯುತ್ ಬಿಲ್ ನಿರ್ಲಕ್ಷ್ಯ

## ಹೋರಾಟದ ಫಲವಾಗಿ ಕಳೆದ 8 ವರ್ಷದ ಹಿಂದೆ ತುಂಗಾ ಏತ ನೀರಾವರಿ ಯೋಜನೆ ಜಾರಿಗೆ ಬಂತು

• **ಉದಯವಾಹಿನಿ ಶಿವಮೊಗ್ಗ:**

ಈ ಬಾರಿ ಮಳೆ ಒಂದು ತಿಂಗಳು ತಡವಾಗಿ ಪ್ರಾರಂಭವಾಗಿದೆ. ಈ ವೇಳೆಗಾಗಲೇ ತುಂಗಾ ಏತ ನೀರಾವರಿ ಯೋಜನೆಯ ಮೂಲಕ ಶಿವಮೊಗ್ಗ ತಾಲ್ಲೂಕಿನ ಬಾರೆಹಳ್ಳ, ಪುರದಾಳು ಹಾಗೂ ಗೌಡನ ಕೆರೆಗಳಿಗೆ

- **ಮಳೆ ಶೇ.45 ರಷ್ಟು ಕೊರತೆಯಾಗಲಿದೆ**
- **ಸುಮಾರು 10 ಸಾವಿರ ಎಕರೆಗೆ ನೀರು**
- **ವಿದ್ಯುತ್ಬಿಲ್ ಕಟ್ಟಿ ನೀರು ಎತ್ತುವ ಕೆಲಸ**

ನೀರು ಪಂಪ್ ಮಾಡುವ ಕೆಲಸ ನಡೆಯುತ್ತಿತ್ತು. ಆದರೆ, ಈ ಬಾರಿ ಮಳೆ ತಡವಾಗಿ ಪ್ರಾರಂಭವಾಗಿದ್ದರೂ ತುಂಗಾ ಅಣೆಕಟ್ಟೆಯಿಂದ ನೀರನ್ನು ನದಿಗೆ ಬಿಡಲು ಪ್ರಾರಂಭಿಸಿದ್ದರೂ ಸಹ ಏತ ನೀರಾವರಿ ಯೋಜನೆಯ ನೀರು ಕೆರೆಗಳಿಗೆ ಹರಿಸದೇ ಸರ್ಕಾರ ಕೈ ಕಟ್ಟಿ ಕುಳಿತುಕೊಂಡಿದೆ. ಯಾಕೆ ಕೈ ಕಟ್ಟಿ ಕುಳಿತುಕೊಂಡಿದೆ ಎಂದರೆ, ಏತ ನೀರಾವರಿಗೆ ಬಳಕೆಯಾಗುವ ಸುಮಾರು 25.22 ಕೋಟಿ ರೂಪಾಯಿ ಪಾವತಿಸದ ಕಾರಣ ಏತ ನೀರಾವರಿ ಯೋಜನೆಯ ವಿದ್ಯುತ್ ಸಂಪರ್ಕ ಕಟ್ ಮಾಡಲಾಗಿದೆ. ಇದರಿಂದ ಸುಮಾರು 1,500 ಎಕರೆ ರೈತರು ತಲೆ ಮೇಲೆ ಕೈ ಹೊತ್ತು ಕುಳಿತುಕೊಂಡಿದ್ದಾರೆ. ತುಂಗಾ ಏತ ನೀರಾವರಿ ಯೋಜನೆಯಿಂದ ಶಿವಮೊಗ್ಗ ತಾಲ್ಲೂಕಿನ ಮೂರು ದೊಡ್ಡ ಕೆರೆಗಳ ಮೂಲಕ ಸಣ್ಣ ಸಣ್ಣ ಕೆರೆಗಳಿಗೆ ನೀರು ತುಂಬಿಸಲಾಗುತ್ತದೆ.









ಉದಯವಾಹಿನಿ ಚಿತ್ರ

ಇದರಿಂದ ಈ ಭಾಗದ 20 ಸಾವಿರ ಎಕರೆಗೆ ನೀರು ತಲುಪಿದರೆ, ರೈತರ ಕೃಷಿಗೆ ತುಂಬಾ ಅನುಕೂಲಕರವಾಗಿರುತ್ತದೆ.

ಶಿವಮೊಗ್ಗದ ಹರಕೆರೆ ಬಳಿಯ ತುಂಗಾ ಏತ ನೀರಾವರಿ ಯೋಜನೆಯ ಜಾಕ್‌ವೆಲ್‌ನಿಂದ ಎತ್ತಿದ ನೀರು ಮೊದಲು ಬಾರೆಹಳ್ಳಕ್ಕೆ ಸೇರುತ್ತದೆ. ನಂತರ ಅದು ಪುರದಾಳು ಕೆರೆಗೆ ಹೋಗುತ್ತದೆ.

ಕೊನೆಯದಾಗಿ ಆಯನೂರು ಸಮೀಪದ ಗೌಡನ ಕೆರೆಗೆ ಹೋಗುತ್ತದೆ. ಗೌಡನ ಕೆರೆಯಿಂದ ಸುತ್ತಮುತ್ತಲ ಕೆರೆಗಳಿಗೆ ನೀರು ತಲುಪುತ್ತದೆ. ಅಲ್ಲದೇ, ಕುಂಸಿ, ಹಾರನಹಳ್ಳಿ ಭಾಗದ ರೈತರಿಗೆ ಈಗ ಈ ನೀರೇ ಜೀವನಾಧಾರವಾಗಿದೆ. ಏತ ನೀರಾವರಿ ಯೋಜನೆ ಸರ್ಕಾರದ ನಿರ್ಧಾರದಿಂದ ಇದ್ದರೂ ಇಲ್ಲದಂತಾಗಿದೆ.

ಅಣೆಕಟ್ಟೆಯಿಂದ ಬಿಟ್ಟ ನೀರು ವ್ಯರ್ಥವಾಗಿ ನದಿಯಲ್ಲಿ ಹರಿದು ಮುಂದೆ ಸಾಗುತ್ತಿದೆ. ಈಗಲಾದರೂ ಸರ್ಕಾರ ರೈತರ ಪರಿಸ್ಥಿತಿ ಗಮನದಲ್ಲಿಟ್ಟುಕೊಂಡು ವಿದ್ಯುತ್ ಬಿಲ್ ಬಾಕಿ ಕಟ್ಟಬೇಕು ಎಂಬುದು ಸ್ಥಳೀಯ ರೈತರ ಆಗ್ರಹವಾಗಿದೆ.

> ಕಳೆದ 20 ವರ್ಷದ ಹೋರಾಟದ ಫಲವಾಗಿ ಕಳೆದ 8 ವರ್ಷದ ಹಿಂದೆ ತುಂಗಾ ಏತ ನೀರಾವರಿ ಯೋಜನೆ ಜಾರಿಗೆ ಬಂತು. ಇದರಿಂದ ಹಾರನಹಳ್ಳಿ ಭಾಗಕ್ಕೆ ಕೆರೆಗಳ ಮೂಲಕ ನೀರು ಬಂದಿದೆ. ಇಷ್ಟು ದಿನ ಯಾವುದೇ ವಿದ್ಯುತ್ ಬಿಲ್ ಸಮಸ್ಯೆ ಎದುರಾಗಿರಲಿಲ್ಲ. ಆದರೆ, ಈಗ ಬರಗಾಲದ ಸಂದರ್ಭದಲ್ಲಿ ನದಿಯಲ್ಲಿ ಈಗಾಗಲೇ ನೀರು ಹೋಗುತ್ತಿದೆ.
>
> -ರಾಜು ಹಿಟ್ಟೂರು

ಈ ವರ್ಷ ಎಲ್ ನಿನೋ ಪರಿಣಾಮದಿಂದಾಗಿ ಮಳೆ ಶೇ.45 ರಷ್ಟು ಕೊರತೆಯಾಗಲಿದೆ ಎಂದು ಹೇಳಿದ್ದಾರೆ. ಇದರ ಪರಿಣಾಮ ಬರಗಾಲ ಖಚಿತ ಅಂತ ಆಗಿದೆ. ಬರಗಾಲಕ್ಕೆ ಏತ ನೀರಾವರಿಗಳು ಬಹಳ ಬಲ ನೀಡುತ್ತವೆ. ತುಂಗಾ ಏತ ನೀರಾವರಿ ಯೋಜನೆಯಿಂದ ಬಾರೆಹಳ್ಳ, ಪುರದಾಳು ಹಾಗೂ ಗೌಡನಕೆರೆಗಳನ್ನು ತುಂಬಿಸಿದರೆ, ಸುಮಾರು 10 ಸಾವಿರ ಎಕರೆಗೆ ನೀರು ಲಭ್ಯವಾಗುತ್ತದೆ.

ಆದರೆ, ಈ ವೇಳೆ ಕೆರೆಗಳಿಗೆ ನೀರು ತುಂಬಿಸಿದರೆ ಬರಗಾಲ ಕಡಿಮೆ ಆಗುತ್ತದೆ. ಬರಗಾಲದಿಂದ ಅನುಕೂಲವಾಗಲು ಏತ ನೀರಾವರಿ ಸಹಾಯಕವಾಗುತ್ತದೆ. ಸರ್ಕಾರ ಈಗಲೇ ವಿದ್ಯುತ್ ಬಿಲ್ ಕಟ್ಟಿ ನೀರು ಎತ್ತುವ ಕೆಲಸ ಮಾಡಬೇಕು.

### ರೈತರ ಬಗ್ಗೆ ಚಿಂತೆಯೇ ಇಲ್ಲ

ಈ ಹಿಂದೆ ಮನವಿ ಮಾಡಿದರೂ ಯಾವುದೇ ಕ್ರಮ ತೆಗೆದುಕೊಂಡಿಲ್ಲ, ಸರ್ಕಾರ ಯಾರನ್ನು ಮಂತ್ರಿ ಮಾಡಬೇಕು, ಮಾಡಬಾರದು ಎಂಬ ಚಿಂತೆಯಲ್ಲಿದೆ. ಇವರಿಗೆ ರೈತರ ಬಗ್ಗೆ ಚಿಂತೆಯೇ ಇಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

> ಸಚಿವ ಕೆ. ಜೆ. ಜಾರ್ಜ್ ಅವರು ಜಿಲ್ಲಾ ಕೆಡಿಪಿಗೆ ಬಂದಾಗ ಅವರು ಜಿಲ್ಲಾ ಉಸ್ತುವಾರಿ ಸಚಿವರಾಗಿ ಮಾತನಾಡದೇ, ವಿದ್ಯುತ್ ಮಂತ್ರಿ ಆಗಿ ಮಾತನಾಡಿದ್ದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.
>
> - ಹೆಚ್. ಆರ್. ಬಸವರಾಜಪ್ಪ

# ಸಮರ್ಪಕ ವಿದ್ಯುತ್ ಸರಬರಾಜು ಆಗದೆ ರೈತರು ಕಂಗಾಲು

• **ಉದಯವಾಹಿನಿ,ಚಿಂಚೋಳಿ**

ತಾಲ್ಲೂಕಿನ ಅಣವಾರ ಗ್ರಾಮ ಸೇರಿ ಹೊಲಗದ್ದೆಗಳಿಗೆ ವಿದ್ಯುತ್ ಸಂಪರ್ಕವು ಜೇಸ್ಕಾಂ ಇಲಾಖೆಯು ಸಮರ್ಪಕವಾಗಿ ಕಲ್ಪಿಸದೆ ಇರುವುದರಿಂದ ರೈತರು ಗ್ರಾಮಸ್ಥರು ಕಂಗಾಲಾಗಿದ್ದಾರೆ ಎಂದು ರೈತ ಮುಖಂಡ ವಿಶ್ವನಾಥ ರೆಡ್ಡಿ ಬೋರಾಳ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಜೇಸ್ಕಾಂ ಇಲಾಖೆ ಕಛೇರಿಗೆ ಅಣವಾರ ಗ್ರಾಮಸ್ಥರು,ರೈತರು ಆಗಮಿಸಿ ವಿದ್ಯುತ್ ಸರಬರಾಜು ವ್ಯತ್ಯಯ ಸಮಸ್ಯೆ ಪರಿಹರಿಸುವಂತೆ ಹಾಗೂ ನೂತನ ವಿದ್ಯುತ್ ಪರಿವರ್ತಕಗಳು ಅಳವಡಿಸುವಂತೆ ಒತ್ತಾಯಿಸಿ ಮನವಿಪತ್ರ ಸಲ್ಲಿಸಿ ಮಾತನಾಡಿದರು.

ರೈತರಿಗೆ ಕೊಡುವ 07ಗಂಟೆ ವಿದ್ಯುತ್ ಸಂಪರ್ಕದಲ್ಲಿ ಹತ್ತಾರು ಬಾರಿ ವಿದ್ಯುತ್ ಸಂಪರ್ಕ ಕಡಿತಗೊಳಿಸುತ್ತಿರುವುದರಿಂದ ರೈತರು ಬೆಳೆಗಳಿಗೆ ನೀರುಣಿಸಲು ಆಗದೆ ಬೆಳೆಗಳು ಒಣಗುತ್ತಿವೆ ಇದರಿಂದ ರೈತರು ಕಂಗಾಲಾಗಿದ್ದಾರೆ,ಕೆಲವೊಂದು ವಿದ್ಯುತ್ ಪರಿವರ್ತಕಗಳಿಗೆ ವಿದ್ಯುತ್ ಹೆಚ್ಚಿನ ಬಾರದಿಂದ ಸಮರ್ಪಕವಾಗಿ ವಿದ್ಯುತ್ ಸಂಪರ್ಕಯಾಗದೆ ವಿದ್ಯುತ್ ಪರಿವರ್ತಕದಿಂದ ಸಮಸ್ಯೆಯಾಗುತ್ತಿದ್ದು ಅಂಥಹ ವಿದ್ಯುತ್ ಪರಿವರ್ತಕಗಳು ಸಮೀಕ್ಷೆ ನಡೆಸಿ ನೂತನವಾಗಿ ವಿದ್ಯುತ್ ಪರಿವರ್ತಕಗಳು ಅಳವಡಿಸಬೇಕು.

ಅಣವಾರ ಮತ್ತು ಯಾಕಾಪೂರ ಗ್ರಾಮದಲ್ಲಿಯೂ ಕೂಡ ಅನೇಕ ಬಾರಿ ವಿದ್ಯುತ್ ಸಂಪರ್ಕ ಕಡಿತಗೊಳ್ಳುತ್ತಿರುವುದರಿಂದ ಕುಡಿಯುವ ನೀರಿನ ಸಮಸ್ಯೆ,ಶಾಲಾಮಕ್ಕಳಿಗೆ ವಿಧ್ಯಾಭ್ಯಾಸ ಮಾಡಲು ತೊಂದರೆ ಆಗುತ್ತಿದೆ,ಲೈನ್ ಮೇನ್ ಸಂಪರ್ಕಿಸಿದರೆ ಸ್ಥಳದಲ್ಲಿ ಇರದೆ ಹರಕೆ ಉತ್ತರ ನೀಡುತ್ತಿದ್ದಾರೆ,ಹಾಗಾಗಿ ಈಗಾಗಲೇ ಮುಂಗಾರು ಮಳೆ ಬಾರದೆ ರೈತರು ಬಹಳಷ್ಟು ಕಷ್ಟದಲ್ಲಿದ್ದು ಜೇಸ್ಕಾಂ ಇಲಾಖೆಯು ರೈತರಿಗೆ ಸಮರ್ಪಕವಾಗಿ ಸರ್ಕಾರ ನಿಗಧಿಪಡಿಸಿದ 07ಗಂಟೆ ವಿದ್ಯುತ್ ಸರಬರಾಜು ಮಾಡಲೇಬೇಕು ಮದ್ಯೆದಲ್ಲಿ ವಿದ್ಯುತ್ ಕಡಿತಗೊಳಿಸಿದರೆ ಅದರ ಬದಲು ವಿದ್ಯುತ್ ಸಂಪರ್ಕ ಕಲ್ಪಿಸಬೇಕು ಮತ್ತು ಗ್ರಾಮದಲ್ಲಿ ಕೂಡ ನಿರಂತರ ವಿದ್ಯುತ್ ಸಂಪರ್ಕ ಕಲ್ಪಿಸಬೇಕು ಇವೆಲ್ಲವೂ ಬೇಡಿಕೆಗಳನ್ನು ಈಡೇರಿಸದೆ ಇದ್ದಲ್ಲಿ ಬರುವ ದಿನಗಳಲ್ಲಿ ಜೇಸ್ಕಾಂ ಇಲಾಖೆಗೆ ರೈತರು ಮುತ್ತಿಗೆ ಹಾಕಲಾಗುವುದು ಎಂದು ನಾಗೇಂದ್ರಪ್ಪ ಬಿರಾದಾರ ಹೇಳಿದರು.



ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ವಿಶ್ವನಾಥ ರೆಡ್ಡಿ ಬೋರಾಳ,ನಾಗೇಂದ್ರಪ್ಪ ಬಿರಾದಾರ,ಸಂಗಯ್ಯಸ್ವಾಮಿ,ರವೀಂದ್ರ ಹೂವಿನಭಾವಿ,ಸುರೇಶ ಬಟಗೇರಿ,ಜಾವೀದ್ ಪಟೇಲ್,ವೀರಶೇಟ್ಟಿ ಪರಮಶೇಟ್ಟಿ, ಬಸಯ್ಯಸ್ವಾಮಿ,ರಫೀಕ್,ಚೇತನ,ಅನೇಕರಿದ್ದರು.

# ಮೊಬೈಲ್ ಪತ್ತೆ, ಗಂಗಾವತಿ ಗ್ರಾಮೀಣ ಪೊಲೀಸರಿಂದ ವಾರಸುದಾರರಿಗೆ ಹಸ್ತಾಂತರ

• **ಉದಯವಾಹಿನಿ ಕಾರಟಗಿ :**

ಗಂಗಾವತಿ, ಕೇಂದ್ರ ಸರ್ಕಾರದ CEIR ಮೂಲಕ ಕಳೆದುಹೋದ ಮೊಬೈಲ್ ಪತ್ತೆ, ಗಂಗಾವತಿ ಗ್ರಾಮೀಣ ಪೊಲೀಸರಿಂದ ವಾರಸುದಾರರಿಗೆ ಹಸ್ತಾಂತರ. ಪೋರ್ಟಲ್‌ನ ತಾಂತ್ರಿಕ ನೆರವಿನೊಂದಿಗೆ ಗಂಗಾವತಿ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಳೆದುಹೋಗಿದ್ದ ಮೊಬೈಲ್ ಫೋನ್‌ಗಳನ್ನು ಪತ್ತೆಹಚ್ಚಿ, ಅವುಗಳನ್ನು ನಿಜವಾದ ವಾರಸುದಾರರಿಗೆ ಹಸ್ತಾಂತರಿಸಲಾಗಿದೆ. ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಯ ಸಿಪಿಐ ರಂಗಪ್ಪ ಹೆಚ್. ದೊಡ್ಡಮನಿ ಅವರ ಮಾರ್ಗದರ್ಶನದಲ್ಲಿ ಸಿಬ್ಬಂದಿ ಕಾರ್ಯಾಚರಣೆ ನಡೆಸಿದರು. ಸಾರ್ವಜನಿಕರು ನೀಡಿದ ದೂರುಗಳ ಆಧಾರದ ಮೇಲೆ CEIR ಪೋರ್ಟಲ್‌ನಲ್ಲಿ ದಾಖಲಾದ ಮಾಹಿತಿಯನ್ನು ಬಳಸಿಕೊಂಡು ಕಳೆದುಹೋದ ಮೊಬೈಲ್‌ಗಳನ್ನು ಪತ್ತೆ ಮಾಡಲಾಯಿತು.

ಪತ್ತೆಯಾದ ಮೊಬೈಲ್‌ಗಳನ್ನು ಅಗತ್ಯ ದಾಖಲೆ ಪರಿಶೀಲನೆ ನಡೆಸಿದ ಬಳಿಕ ಅವುಗಳ ಮೂಲ ಮಾಲೀಕರಿಗೆ ಹಸ್ತಾಂತರಿಸಲಾಯಿತು. ವರ್ಷಗಳಿಂದ ಮೊಬೈಲ್ ಕಳೆದುಕೊಂಡು ಪರದಾಡುತ್ತಿದ್ದ ಸಂತ್ರಸ್ತರು ಮೊಬೈಲ್ ಮರಳಿ ಸಿಕ್ಕ ಸಂತಸವನ್ನು ಹಂಚಿಕೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಸಿಪಿಐ ರಂಗಪ್ಪ ಹೆಚ್. ದೊಡ್ಡಮನಿ ಅವರು, ಮೊಬೈಲ್ ಕಳೆದುಹೋದ ಕೂಡಲೇ ಸಮೀಪದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸುವುದರ ಜೊತೆಗೆ CEIR ಪೋರ್ಟಲ್‌ನಲ್ಲಿ ನೋಂದಣಿ ಮಾಡಿಸಬೇಕು.

ಇದರಿಂದ ಕಳುವಾದ ಅಥವಾ ಕಳೆದುಹೋದ ಮೊಬೈಲ್‌ಗಳನ್ನು ತ್ವರಿತವಾಗಿ ಪತ್ತೆಹಚ್ಚಲು ಅನುಕೂಲವಾಗುತ್ತದೆ ಎಂದು ಸಾರ್ವಜನಿಕರಿಗೆ ಮನವಿ ಮಾಡಿದರು. ಮೊಬೈಲ್‌ಗಳನ್ನು ಮರಳಿ ಪಡೆದ ವಾರಸುದಾರರು ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಪ್ರಾಮಾಣಿಕ ಕಾರ್ಯಕ್ಕೆ ಕೃತಜ್ಞತೆ ಸಲ್ಲಿಸಿದರು.



ಉದಯವಾಹಿನಿ ಚಿತ್ರ

CEIRಎಂದರೇನು ಎನ್ನುವ ಮಾಹಿತಿ ನೀಡಿದರು

CEIRಎನ್ನುವುದು ಕೇಂದ್ರ ಸರ್ಕಾರದ ಪೋರ್ಟಲ್. ಇದರಲ್ಲಿ ಕಳೆದುಹೋದ ಮೊಬೈಲ್‌ನ IMEI ಸಂಖ್ಯೆಯನ್ನು ದಾಖಲಿಸಿದರೆ, ಆ ಮೊಬೈಲ್ ದೇಶದ ಯಾವುದೇ ನೆಟ್‌ವರ್ಕ್‌ನಲ್ಲಿ ಬಳಸಿದರೂ ಪತ್ತೆಹಚ್ಚಲು ಸಹಕಾರಿಯಾಗುತ್ತದೆ.ಎಂದರು.





# ಗೃಹ ಜ್ಯೋತಿ ಪರಿಷ್ಕಣೆಗೆ ಫಲಾನುಭವಿಗಳು ಸಹಕರಿಸಿ

• **ಉದಯವಾಹಿನಿ, ಯಲಬುರ್ಗಾ:**

ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳಿಂದ ಎಲ್ಲಾ ವರ್ಗದ ಬಡವರಿಗೆ ಹೆಚ್ಚು ಲಾಭವಾಗಿದ್ದು ಯಾವುದೇ ಕಾರಣಕ್ಕೂ ಈ ಯೋಜನೆ ನಿಲ್ಲುವುದಿಲ್ಲ ಎಂದು ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆ ಸಮಿತಿಯ ಅಧ್ಯಕ್ಷ ರೆಡ್ಡಿ ಶ್ರೀನಿವಾಸ ಹೇಳಿದರು.

ಪಟ್ಟಣದ 7ನೇ ವಾರ್ಡಿನಲ್ಲಿ ಜೆಸ್ಕಾಂ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಗೃಹ ಜ್ಯೋತಿ ಫಲಾನುಭವಿಗಳ ಪರಿಶೀಲನಾ ಅರ್ಜಿ ಸಲ್ಲಿಕೆ ಕುರಿತು ವೀಕ್ಷಣೆ ನಡೆಸಿ ಮಾತನಾಡಿದರು.

ಗೃಹಜೋತಿ ಯೋಜನೆಯಿಂದ ಬಡ ಕುಟುಂಬಗಳಿಗೆ ಉಚಿತ ವಿದ್ಯುತ್ ಸೌಲಭ್ಯ ದೊರಕುತ್ತಿರುವುದು ಆರ್ಥಿಕ ವರೆಯನ್ನು ಇಳಿಸುತ್ತಿದೆ. ಇಲಾಖೆಯ ನೌಕರರ ಮನೆ ಮನೆಗೆ ಬಂದಾಗ ಅಗತ್ಯ ದಾಖಲೆಯನ್ನು ನೀಡಬೇಕು, ಒಂದಕ್ಕಿಂತ ಹೆಚ್ಚು ಹೊಂದಿದವರಿಗೆ ಅವಕಾಶ ಇಲ್ಲ, ಅನ್ಯ ರಾಜ್ಯದವರಿಗೂ ಈ ಯೋಜನೆ ಬರುವುದಿಲ್ಲ ಎಂದರು.



ಉದಯವಾಹಿನಿ ಚಿತ್ರ

ಉಭಯ ತಾಲ್ಲೂಕು ಗ್ಯಾರಂಟಿ ಯೋಜನೆ ಸಮಿತಿಯ ಅಧ್ಯಕ್ಷರಾದ ಸುಧೀರ್ ಕೊರ್ಲಳ್ಳಿ, ಸಂಗಮೇಶ ಗುತ್ತಿ ಮಾತನಾಡಿ, ಅವಳಿ ತಾಲ್ಲೂಕಿನಲ್ಲಿ ಗ್ಯಾರಂಟಿ ಕಾರ್ಯಕ್ರಮಗಳಿಂದ ಬಡವರ ಬದುಕು ಗಟ್ಟಿಯಾಗಿದೆ. ರಾಜ್ಯ ಸರ್ಕಾರ ಈ ಯೋಜನೆ ಕೈ ಬಿಡುವುದಿಲ್ಲ, ಪರಿಷ್ಕರಣೆ ಮಾಡುತ್ತಿದೆ ಅದಕ್ಕೆ ಎಲ್ಲರೂ ಸಹಕಾರ ಕೊಡಬೇಕು ಎಂದು ತಿಳಿಸಿದರು.

**ಮನೆಗೆ ಭೇಟಿ:** ಪಟ್ಟಣದ 75ನೇ ಬೂತ್ ನಲ್ಲಿ ಎಸ್ ಐಆರ್ ಕುರಿತು ಗ್ಯಾರಂಟಿ ಯೋಜನೆ ಸಮಿತಿಯ ಜಿಲ್ಲಾಧ್ಯಕ್ಷ ರೆಡ್ಡಿ ಶ್ರೀನಿವಾಸ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿ, ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ವೇಳೆ ಜಿಲ್ಲಾ ಗ್ಯಾರಂಟಿ ಯೋಜನೆ ಸಮಿತಿಯ ಸದಸ್ಯ ಮಲ್ಲಿಕಾರ್ಜುನ, ಜೆಸ್ಕಾಂ ಎಇಇ ಮಹ್ಮದ್ ಖಲೀಮುದ್ದೀನ್, ಕೆಎಂಎಫ್ ನಿರ್ದೇಶಕ ಹಂಪಯ್ಯಸ್ವಾಮಿ ಹಿರೇಮಠ, ನೌಕರರಾದ ಅಮರೇಶ್ವರ ರಡ್ಡಿ, ಮಹೇಶ ಹುಬ್ಬಳ್ಳಿ, ಧನಿಯಪ್ಪ ಬಣಕಾರ, ವೀರೇಶ ಬಣಕಾರ,ಹಾಗೂ ಇಲಾಖೆಯ ಸಿಬ್ಬಂದಿಗಳು ಇನ್ನೂ ಹಲವಾರು ಉಪಸ್ಥಿತರಿದ್ದರು.

# ಅನಧಿಕೃತ ಪಡಿತರ ಅಕ್ಕಿ ವಶಕ್ಕೆ

• **ಉದಯವಾಹಿನಿ ತೇರದಾಳ:**

ಅನಧಿಕೃತವಾಗಿ ಸಂಗ್ರಹಿಸುತ್ತಿದ್ದ ಪಡಿತರ ಅಕ್ಕಿಯನ್ನು ಆಹಾರ ನಿರೀಕ್ಷಕರು ವಶಪಡಿಸಿಕೊಂಡಿರುವ ಘಟನೆ ನಡೆದಿದೆ.

ಸಿದ್ದೇಶ್ವರ ಗಲ್ಲಿಯ ಬಳಿ ಬಯಲಿನಲ್ಲಿ ಅಕ್ಕಿ ಸಂಗ್ರಹಿಸಿದ್ದಾರೆಂಬ ಖಚಿತ ಮಾಹಿತಿಯನ್ನಾಧರಿಸಿ ತೇರದಾಳ ಆಹಾರ ನಿರೀಕ್ಷಕ ಎಸ್.ಐ.ಸೂಡಿ ಸ್ಥಳಕ್ಕೆ ಆಗಮಿಸಿದರು.



ಉದಯವಾಹಿನಿ ಚಿತ್ರ

ಬಯಲಿನಲ್ಲಿ 13 ಚೀಲಗಳಲ್ಲಿ ಸಂಗ್ರಹಿಸಲಾಗಿದ್ದ ಅಕ್ಕಿಯನ್ನು ಅಧಿಕಾರಿಗಳು ಹಿಡಿದಿದ್ದಾರೆ ಎಂಬ ಸುದ್ದಿ ತಿಳಿಯುತ್ತಿದ್ದಂತೆ ಅನಧಿಕೃತವಾಗಿ ಅಕ್ಕಿಯನ್ನು ಸಂಗ್ರಹಿಸಿಟ್ಟವರು ಅತ್ತ ಸುಳಿಯಲೇ ಇಲ್ಲ. ಬಹಳ ಹೊತ್ತು ಕಾಯ್ದು ಬಳಿಕ ಅವನ್ನು ಸಾಗಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಆಹಾರ ನಿರೀಕ್ಷಕ 'ತೇರದಾಳ ತಾಲ್ಲೂಕಿನಲ್ಲಿ ಅನಧಿಕೃತವಾಗಿ ಅಕ್ಕಿ ಸಂಗ್ರಹಿಸಲು ಮನೆಮನೆಗೆ ಬರುತ್ತಿದ್ದಾರೆ ಎಂದು ತಿಳಿದು ಬಂದಿದ್ದು. ಕೆಲವೇ ದಿನಗಳ ಹಿಂದೆ ಇಲ್ಲಿಗೆ ನಾನು ಬಂದಿರುವುದರಿಂದ ಮುಂದೆ ಅಂತಹ ಘಟನೆಗಳ ಬಗ್ಗೆ ನಿಗಾ ಇಡಲಾಗುವುದು ಹಾಗೂ ಇದು ಮೊದಲ ದಾಳಿಯಾಗಿದೆ' ಎಂದರು.

# ಎಸ್ಐಆರ್ ಸಂಬಂಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ ಟಿ.ವೆಂಕಟೇಶ್

## ನೇಮಕ ಮಾಡಿರುವ ಬೂತ್ ಮಟ್ಟದ ಏಜೆಂಟರುಗಳು ನಮಗೆ ಸಂಪೂರ್ಣ ಮಾಹಿತಿ ನೀಡಿ ಸಹಕರಿಸಬೇಕಿದೆ

• **ಉದಯವಾಹಿನಿ, ಚಿತ್ರದುರ್ಗ:**

ಚಿತ್ರದುರ್ಗಮತದಾರರ ಪಟ್ಟಿಯ ನಿಖರತೆ ಮತ್ತು ಪಾರದರ್ಶಕತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಸಕಾರಾತ್ಮಕವಾಗಿ ಸಹಕರಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ(ಎಸ್ಐಆರ್) ಸಂಬಂಧ ಮತದಾರರ

**1 : ಶೇ.98 ರಷ್ಟು ಪ್ರಗತಿ ಸಾಧಿಸಲಾಗಿದೆ**

**2 : ಜಿಲ್ಲೆಯ 14,40,534 ಮತದಾರರ**

**3 : ಬಿಎಲ್ಎಗಳಿಗೆ ವಿಶೇಷ ತರಬೇತಿ**

ಗಣತಿ ನಮೂನೆಗಳ ವಿತರಿಸಿರುವ ಕುರಿತು ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ಗಣತಿ ನಮೂನೆಗಳ ವಿತರಣೆಯ ಕಾರ್ಯವು ಪ್ರಗತಿಯಲ್ಲಿದ್ದು, ಈಗಾಗಲೇ ಶೇ.98 ರಷ್ಟು ಪ್ರಗತಿ ಸಾಧಿಸಲಾಗಿದೆ. ಬಾಕಿ ಉಳಿದಿರುವ ಶೇ.2ರಷ್ಟು ಪ್ರಕರಣಗಳಲ್ಲಿ ಮರಣ ಹೊಂದಿದವರು, ಸ್ಥಳಾಂತರಗೊಂಡವರು ಹಾಗೂ ಮನೆಗೆ ಬೀಗ ಹಾಕಿ ಬೇರೆಡೆ ವಾಸಿಸುತ್ತಿರುವವರ ವಿವರಗಳಿದ್ದು,

**ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಅತ್ಯಂತ ಯಶಸ್ವಿ**



ಉದಯವಾಹಿನಿ ಚಿತ್ರ

ಇವುಗಳನ್ನು ಸರಿಪಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ತಿಳಿಸಿದರು.ಜುಲೈ 08ರ ಅಂಕಿ-ಅಂಶಗಳ ಪ್ರಕಾರ ಜಿಲ್ಲೆಯ 14,40,534 ಮತದಾರರ ಪೈಕಿ ಈಗಾಗಲೇ 14,04,219 ಮತದಾರರರನ್ನು (ಶೇ.97.48) ಮ್ಯಾಪಿಂಗ್ ಮಾಡಲಾಗಿದೆ.

36,315 ಮತದಾರರ ಮ್ಯಾಪಿಂಗ್ ಬಾಕಿ ಉಳಿದಿದ್ದು, ಈ ಮತದಾರರ ವಿಳಾಸ ಪತ್ತೆಯಾಗುತ್ತಿಲ್ಲ. ಇವರು ಯಾರು ಮತ್ತು ಎಲ್ಲಿದ್ದಾರೆ ಎಂಬುದನ್ನು ಪತ್ತೆ ಹಚ್ಚಿ ಪಟ್ಟಿಯಿಂದ ತೆಗೆದುಹಾಕಲು ಅಥವಾ ಸರಿಪಡಿಸಲು ರಾಜಕೀಯ ಪಕ್ಷಗಳು ನೇಮಕ ಮಾಡಿರುವ ಬೂತ್ ಮಟ್ಟದ ಏಜೆಂಟರುಗಳು ನಮಗೆ ಸಂಪೂರ್ಣ ಮಾಹಿತಿ ನೀಡಿ ಸಹಕರಿಸಬೇಕಿದೆ.

ಮರಣ ಹೊಂದಿದವರ ಡೆತ್ ಸರ್ಟಿಫಿಕೇಟ್ ಲಭ್ಯವಿದ್ದರೆ ಅಂಥವರ ಹೆಸರನ್ನು ಪಟ್ಟಿಯಿಂದ ತೆಗೆಯಲು ಸುಲಭವಾಗುತ್ತದೆ ಎಂದು ಹೇಳಿದರು.

ವಿಶೇಷವಾಗಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಮತದಾರರನ್ನು ಗುರುತಿಸುವಲ್ಲಿ ಸ್ಥಳೀಯ ವಾರ್ಡ್ ಸದಸ್ಯರು, ಮಾಜಿ ಕೌನ್ಸಿಲರ್‌ಗಳು ಹಾಗೂ ಗ್ರಾಮ ಪಂಚಾಯಿತಿ ಮಾಜಿ ಸದಸ್ಯರ ಪಾತ್ರ ದೊಡ್ಡದಾಗಿದೆ. ಪಕ್ಷಾತೀತವಾಗಿ ಇವರೆಲ್ಲರಿಗೂ ಸ್ಥಳೀಯ ಮತದಾರರ ಬಗ್ಗೆ ನಿಖರವಾದ ಮಾಹಿತಿ ಇರುತ್ತದೆ.

ಗಣತಿ ನಮೂನೆಗಳನ್ನು ಭರ್ತಿ ಮಾಡುವಾಗ ಸಾರ್ವಜನಿಕರಲ್ಲಿ ಉಂಟಾಗುವ ಗೊಂದಲಗಳ ತಪ್ಪಿಸಲು ವ್ಯಾಪಕ ಜಾಗೃತಿ ಮೂಡಿಸಲಾಗುತ್ತಿದೆ. ಫಾರ್ಮ್‌ಗಳಲ್ಲಿನ ಮೊದಲ ಭಾಗ ಹಾಗೂ ಎರಡನೇ ಭಾಗಗಳನ್ನು ಭರ್ತಿ ಮಾಡುವಾಗ ಆಗುವ ಸಾಮಾನ್ಯ ತಪ್ಪುಗಳನ್ನು ತಪ್ಪಿಸಲು ಬಿಎಲ್ಒ ಮತ್ತು ಬಿಎಲ್ಎಗಳಿಗೆ ವಿಶೇಷ ತರಬೇತಿ ನೀಡಲಾಗಿದೆ ಎಂದು ತಿಳಿಸಿದ ಅವರು, ಎಸ್ಐಆರ್ ಪ್ರಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಲಾಗಿದ್ದು, ಪ್ರತಿ ದಿನ ಸಂಜೆ ಎಲ್ಲಾ ತಾಲ್ಲೂಕುಗಳ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಗತಿ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಹೇಳಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಚುನಾವಣಾ ತಹಶೀಲ್ದಾರ್ ಬೀಬೀ ಫಾತಿಮಾ, ಕಾಂಗ್ರೆಸ್ ಪಕ್ಷದ ಎಂ.ಕೆ.ತಾಜ್‌ಪೀರ್, ಡಿ.ಎನ್.ಮೈಲಾರಪ್ಪ, ಸಂಪತ್ ಕುಮಾರ್, ಬಿಜೆಪಿ ಪಕ್ಷದ ಟಿ.ಯಶವಂತ ಕುಮಾರ್, ಬಿಎಸ್‌ಪಿ ಪಕ್ಷದ ಪ್ರಕಾಶ್, ನಿಂಗರಾಜ್ ಇದ್ದರು.

### ಪಾರದರ್ಶಕ ,ದೋಷಮುಕ್ತ ಮತದಾರರ ಪಟ್ಟಿ

ತಕ್ಷಣವೇ ತಹಶೀಲ್ದಾರರ, ಇಒ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಅಧಿಕಾರಿಗಳ ನೇತೃತ್ವದಲ್ಲಿ ಸಭೆಗಳನ್ನು ಕರೆದು, ಮಹಜರು ಪ್ರಕ್ರಿಯೆಯ ಮೂಲಕ ನಿಖರ ಮಾಹಿತಿ ಪಡೆಯುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು, ಜಿಲ್ಲೆಯಲ್ಲಿ ಅತ್ಯಂತ ಪಾರದರ್ಶಕ ಹಾಗೂ ದೋಷಮುಕ್ತ ಮತದಾರರ ಪಟ್ಟಿ ಸಿದ್ಧಪಡಿಸಲು ಎಲ್ಲಾ ರಾಜಕೀಯ ಪಕ್ಷಗಳು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

> ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯು ಅತ್ಯಂತ ಯಶಸ್ವಿಯಾಗಿ ಸಾಗುತ್ತಿದ್ದು, ಗಣತಿ ನಮೂನೆಗಳ ವಿತರಣೆಯಲ್ಲಿ ಇಡೀ ರಾಜ್ಯದಲ್ಲೇ ನಮ್ಮ ಜಿಲ್ಲೆ ಮುಂಚೂಣಿಯಲ್ಲಿದೆ. ಯಾವುದೇ ಗೊಂದಲ, ವಿವಾದಗಳಿಗೆ ಆಸ್ಪದ ನೀಡದಂತೆ ಪಾರದರ್ಶಕವಾಗಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದು ತಿಳಿಸಿದರು.
>
> ಜಿಲ್ಲಾಧಿಕಾರಿ ಟಿ. ವೆಂಕಟೇಶ್



## ಮಿನಿ ನ್ಯೂಸ್

### ಗುಡಿಹಾಳದಲ್ಲಿ ನರಿ ಬೇಟೆ: ಓರ್ವನ ಬಂಧನ



• **ಉದಯವಾಹಿನಿ ಮುದ್ದೇಬಿಹಾಳ:**

ತಾಲ್ಲೂಕಿನ ಗುಡಿಹಾಳ ಗ್ರಾಮದಲ್ಲಿ ಜುಲೈ 7 ರಂದು ನಡೆದಿದ್ದ ನರಿ ಬೇಟೆಯಾಡಿ ಹತ್ಯೆ ಮಾಡಿದ ಪ್ರಕರಣವನ್ನು ಭೇದಿಸುವಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಯಶಸ್ವಿಯಾಗಿದ್ದು, ಓರ್ವ ಆರೋಪಿಯನ್ನು ಬಂಧಿಸಿದ್ದಾರೆ. ಮುದ್ದೇಬಿಹಾಳ ಪಟ್ಟಣದ ನಿವಾಸಿಯಾದ ಯಲ್ಲಪ್ಪ ಗೂಲ್ಲರ ಬಂಧಿತ ಆರೋಪಿಯಾಗಿದ್ದಾನೆ. ಬಂಧಿತನ ವಿರುದ್ಧ ವನ್ಯಜೀವಿ ಸಂರಕ್ಷಣಾ ಕಾಯ್ದೆ 1972 ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಇನ್ನು ಈ ನರಿ ಹತ್ಯೆ ಪ್ರಕರಣದಲ್ಲಿ ಭಾಗಿಯಾಗಿದ್ದ ಇತರ ಎಂಟು ಜನ ಆರೋಪಿಗಳು ಸದ್ಯ ನಾಪತ್ತೆಯಾಗಿದ್ದು, ಅವರಿಗಾಗಿ ಶೋಧ ಕಾರ್ಯ ಮುಂದುವರಿದಿದೆ. ಪ್ರಾದೇಶಿಕ ವಲಯ ಅರಣ್ಯಾಧಿಕಾರಿ ಬಸನಗೌಡ ಬಿರಾದಾರ ನೇತೃತ್ವದ ತಂಡವು ಈ ಯಶಸ್ವಿ ಕಾರ್ಯಾಚರಣೆ ನಡೆಸಿದೆ. ಕಾರ್ಯಾಚರಣೆಯಲ್ಲಿ ಉಪ ವಲಯ ಅರಣ್ಯಾಧಿಕಾರಿ ರಮೇಶ ಹಿಟ್ನಳ್ಳಿ, ಗಸ್ತುಪಾಲಕರುಗಳಾದ ಯಲಗೂರದಪ್ಪ, ವಿನಾಯಕ ಬಾಂಬೆಲೇಕರ್, ರವಿ ತಾಂಬ ಹಾಗೂ ಶಿವಾನಂದ ಮೈತ್ರಿ ಅವರು ಭಾಗವಹಿಸಿದ್ದರು.

### ಅಸಾಧಾರಣ ಪ್ರತಿಭೆಯುಳ್ಳ ಮಕ್ಕಳಿಗೆ ಜಿಲ್ಲಾಮಟ್ಟದ ಪ್ರಶಸ್ತಿಗೆ ಅರ್ಜಿ

• **ಉದಯವಾಹಿನಿ ಚಿತ್ರದುರ್ಗ**

ಹೊಯ್ಸಳ ಮತ್ತು ಕೆಳದಿ ಚನ್ನಮ್ಮ ಪ್ರಶಸ್ತಿ ಯೋಜನೆಯಡಿ ಅಸಾಧಾರಣ ಪ್ರತಿಭೆಯುಳ್ಳ ಮಕ್ಕಳಿಗೆ ಜಿಲ್ಲಾಮಟ್ಟದ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ನಾವೀನ್ಯತೆ, ತಾರ್ಕಿಕ ಸಾಧನೆಗಳು, ಕ್ರೀಡೆ, ಕಲೆ, ಸಾಂಸ್ಕೃತಿಕ ಹಾಗೂ ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿದ 5 ರಿಂದ 18 ವರ್ಷದೊಳಗಿನ ಪ್ರತಿ ಕ್ಷೇತ್ರದಲ್ಲಿ ಇಬ್ಬರಂತೆ ಒಟ್ಟು 8 ಮಕ್ಕಳಿಗೆ ಜಿಲ್ಲಾ ಮಟ್ಟದ ಪ್ರಶಸ್ತಿಗೆ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

**ಪ್ರಶಸ್ತಿಗೆ ಆಯ್ಕೆ ಮಾಡಲು ಮಾನದಂಡಗಳು:** 5 ರಿಂದ 18 (ಜುಲೈ 31ರಂತೆ) ವರ್ಷದೊಳಗಿರಬೇಕು. ನಾವೀನ್ಯತೆ, ತಾರ್ಕಿಕ ಸಾಧನೆಗಳು, ಕ್ರೀಡೆ ಮತ್ತು ಕಲೆ, ಸಾಂಸ್ಕೃತಿಕ, ಸಂಗೀತ ಈ ಕ್ಷೇತ್ರಗಳಲ್ಲಿ ಅಸಾಧಾರಣ ಪ್ರತಿಭೆ ಹೊಂದಿರಬೇಕು. ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿದ ವಯಸ್ಸಿನ ಬಗ್ಗೆ ಜನನ ಪ್ರಮಾಣ ಪತ್ರದ ಪ್ರತಿ ಲಗತ್ತಿಸಬೇಕು. ಪ್ರತಿಭೆಯನ್ನು ಹೊಂದಿರುವ ಬಗ್ಗೆ ಪ್ರಮುಖ ದಿನಪತ್ರಿಕೆಗಳಲ್ಲಿ ಪ್ರಕಟಗೊಂಡಿರುವ ಪತ್ರಿಕೆ ತುಣುಕು ಅಥವಾ ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು.

ಅಂತರಾಷ್ಟ್ರೀಯ, ರಾಷ್ಟ್ರೀಯ, ರಾಜ್ಯ ಮಟ್ಟದಲ್ಲಿ ಭಾಗವಹಿಸಿ ಪ್ರಶಸ್ತಿ ಪಡೆದಿರುವ ಮಾಹಿತಿ, ಸಾಧಿಸಿರುವ ಪ್ರತಿಭೆಯನ್ನು ಸಮರ್ಥಿಸಲು ಪೂರಕ ದಾಖಲಾತಿಗಳನ್ನು ಸಲ್ಲಿಸಬೇಕು. ಅರ್ಜಿದಾರರು ಕರ್ನಾಟಕ ರಾಜ್ಯದಲ್ಲಿ ನೆಲಸಿರಬೇಕು.

ಆಸಕ್ತರು ನಿಗಧಿತ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಯೊಂದಿಗೆ, ಅಗತ್ಯ ದಾಖಲೆಗಳನ್ನು ಲಗತ್ತಿಸಿ ಸಲ್ಲಿಸಬೇಕು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದ ಸಮಿತಿಯಲ್ಲಿ ಪ್ರಶಸ್ತಿಗಾಗಿ ಮಕ್ಕಳನ್ನು ಆಯ್ಕೆ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಾಲಭವನ ಆವರಣ, ಚಿತ್ರದುರ್ಗ ಇಲ್ಲಿ ಸಂಪರ್ಕಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಮಾತಂಗೆಮ್ಮ ದೇವಸ್ಥಾನ ನಿರ್ಮಾಣಕ್ಕೆ 2.99 ಲಕ್ಷ ಅನುದಾನ ಘೋಷಣೆ

• **ಉದಯವಾಹಿನಿ ಹೊನ್ನಾಳಿ:**

ಪಟ್ಟಣದ ಹೊರ ವಲಯದಲ್ಲಿರುವ ಮಾತಂಗೆಮ್ಮ ದೇವಸ್ಥಾನ ಕಟ್ಟಡ ನಿರ್ಮಾಣಕ್ಕೆ ಪುರಸಭೆಯ ಸಾಮಾನ್ಯ ನಿಧಿ ಯೋಜನೆಯಡಿ ಉಳಿಕೆಯಾಗಿರುವ ಮೊತ್ತದಲ್ಲಿ 2.99 ಲಕ್ಷ ಅನುದಾನವನ್ನು ಕೊಡಲಾಗುತ್ತಿದೆ ಎಂದು ರಾಜ್ಯ ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಚ್.ಬಿ. ಮಂಜಪ್ಪ ಹೇಳಿದರು.

ಕೆ-ಶಿಪ್ ನವರು ಹೊನ್ನಾಳಿ ರಾಣೆಬೆನ್ನೂರು ರಸ್ತೆ ಅಗಲೀಕರಣ ಮಾಡುವ ಸಂದರ್ಭದಲ್ಲಿ ದೇವಸ್ಥಾನವನ್ನು ತೆರವುಗೊಳಿಸಿದ್ದರು.

ಈ ಸಂದರ್ಭದಲ್ಲಿ ದೇವಸ್ಥಾನ ನಿರ್ಮಾಣಕ್ಕೆ ಮಾತಂಗೆಮ್ಮ ದೇವಿ ದೇವಸ್ಥಾನದ ಸಮಿತಿಯವರು ಸಹಾಯಧನವನ್ನು ಕೇಳಿದ್ದರು. ಹಾಗಾಗಿ ಈ ಅನುದಾನವನ್ನು ನೀಡಲಾಗುತ್ತಿದೆ. ಇದರಿಂದ ಮಾತಂಗೆಮ್ಮ ದೇವಿಯ ಭಕ್ತರು ಆತಂಕಪಡುವ ಅಗತ್ಯವಿಲ್ಲ ಎಂದು ತಿಳಿಸಿದರು.

ಪುರಸಭೆಯ ಆಡಳಿತಾಧಿಕಾರಿ ಎಚ್.ಬಿ. ಚನ್ನಪ್ಪ, ಮುಖ್ಯಾಧಿಕಾರಿ ಟಿ. ಲೀಲಾವತಿ, ಎಂಜಿನಿಯರ್ ದೇವರಾಜ್, ದೇವಸ್ಥಾನದ ಮುಖ್ಯಸ್ಥರಾದ ನಾಗರಾಜ್ ಇತರರು ಹಾಜರಿದ್ದರು.

### ದೇವಸ್ಥಾನದ ಕೊನೆಯ ಸೆಲ್ಫಿ

• **ಉದಯವಾಹಿನಿ ಕಾರವಾರ :**

ನಗುಮುಖದ ಸೆಲ್ಫಿ, ಕೈಯಲ್ಲಿ ದೇವರ ಪ್ರಸಾದ. ಕೆಲಸದ ಒತ್ತಡದ ನಡುವೆ ಗೆಳೆಯರೊಂದಿಗೆ ಸಮಯ ಕಳೆಯಬೇಕೆಂಬ ಹಂಬಲ. ಆದರೆ ವಿಧಿಯಾಟವೇ ಬೇರೆಯಾಗಿತ್ತು. ದೇವರ ದರ್ಶನ ಪಡೆದು ಸುರಕ್ಷಿತವಾಗಿ ಮರಳಬೇಕಿದ್ದ ಆ ಮನೆಮಕ್ಕಳು ಶವವಾಗಿ ಮರಳಿದ್ದಾರೆ.

ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನ ಅರಬೈಲ್ ಘಾಟ್‌ನಲ್ಲಿ ನಸುಕಿನ ಜಾವ ಸಂಭವಿಸಿದ ಭೀಕರ ರಸ್ತೆ ಅಪಘಾತ ಧಾರವಾಡದ 7 ಮಧ್ಯಮ ವರ್ಗದ ಕುಟುಂಬಗಳ ಆಧಾರ ಸ್ತಂಭಗಳನ್ನೇ ಕಿತ್ತುಕೊಂಡಿದೆ.

ಧಾರವಾಡದಿಂದ ಅಂಕೋಲಾ ಮಾರ್ಗವಾಗಿ ಗೋಕರ್ಣ, ಮುರುಡೇಶ್ವರ ಮತ್ತು ಧರ್ಮಸ್ಥಳಕ್ಕೆ ಪ್ರವಾಸಕ್ಕೆ ಹೊರಟಿದ್ದ ಒಂಬತ್ತು ಜನ ಸ್ನೇಹಿತರ ಕ್ರೂಸರ್ ವಾಹನ ಹಾಗೂ ಲಾರಿ ನಡುವೆ ಮುಖಾಮುಖಿ ಡಿಕ್ಕಿಯಾಗಿ ಏಳು ಮಂದಿ ಸ್ಥಳದಲ್ಲೇ ಕೊನೆಯುಸಿರೆಳೆದ ಘಟನೆ ಇಡೀ ಅವಳಿ ನಗರವನ್ನು ಶೋಕಸಾಗರದಲ್ಲಿ ಮುಳುಗಿಸಿದೆ.

ಮೃತಪಟ್ಟವರೆಲ್ಲರೂ ಧಾರವಾಡದ ವಿವಿಧ ಕಂಪನಿಗಳಲ್ಲಿ ಹಾಗೂ 'ಸ್ವಿಗ್ಗಿ'ಯಲ್ಲಿ ಡೆಲಿವರಿ ಬಾಯ್ಸ್ ಆಗಿ ಕೆಲಸ ಮಾಡುತ್ತಿದ್ದ ಬಡ ಮತ್ತು ಮಧ್ಯಮ ವರ್ಗದ ಯುವಕರು. ಹಗಲು-ರಾತ್ರಿ ಎನ್ನದೆ ದುಡಿದು ಸುಸ್ತಾಗಿದ್ದ ಸ್ನೇಹಿತರು, ಸ್ವಲ್ಪ ವಿರಾಮ ಪಡೆಯಲು ಗೋಕರ್ಣ, ಧರ್ಮಸ್ಥಳ ಪ್ರವಾಸಕ್ಕೆ ಯೋಜಿಸಿದ್ದರು.

ದರ್ಶನ ಪಡೆದ ಖುಷಿಯಲ್ಲೇ ಎಲ್ಲರೂ ಒಟ್ಟಾಗಿ ನಿಂತು ಒಂದು ಗ್ರೂಪ್ ಸೆಲ್ಫಿ ತೆಗೆದುಕೊಂಡಿದ್ದರು. ಆದರೆ, ಆ ಫೋಟೋವೇ ಅವರ ಜೀವನದ ಕೊನೆಯ ಸೆಲ್ಫಿಯಾಗುತ್ತದೆ ಎಂದು ಯಾರೂ ಊಹಿಸಿರಲಿಲ್ಲ.

# ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು.

**ವೃಷಭ** ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಅನಿರೀಕ್ಷಿತ ಪ್ರಣಯ ಪ್ರಸಂಗಗಳು ನಿಮ್ಮ ಚೈತನ್ಯವನ್ನು ವೃದ್ಧಿಸುತ್ತದೆ. ಪ್ರಮುಖ ಜನರೊಡನೆ ವ್ಯವಹರಿಸುವಾಗ ಎಚ್ಚರಿಕೆಯಿಂದ ಮಾತನಾಡಿ. ನೀವು ವೈವಾಹಿಕ ಜೀವನದ ಭಾವಪರವಶತೆಯನ್ನು ಅನುಭವಿಸಲು ಸಾಕಷ್ಟು ಅವಕಾಶಗಳನ್ನು ಹೊಂದುತ್ತೀರಿ.

**ಮಿಥುನ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ರಿಯಲ್ ಎಸ್ಟೇಟ್ ನಲ್ಲಿ ಹೂಡಿಕೆ ಲಾಭದಾಯಕವಾಗಬಹುದು.

**ಕರ್ಕಾಟಕ** ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ಕಳೆದ ದಿನಗಳನ್ನು ಹೋಲಿಸಿದರೆ ಇಂದು ಆರ್ಥಿಕ ಉತ್ತಮವಾಗಲಿದೆ ಮತ್ತು ನೀವು ಹೆಚ್ಚಿನ ಹಣವನ್ನು ಪಡೆಯುತ್ತೀರಿ . ಭೇಟಿ ನೀಡುವ ಅತಿಥಿಗಳು ನಿಮ್ಮ ಸಂಜೆಯನ್ನು ಆಕ್ರಮಿಸಿಕೊಳ್ಳಬಹುದು.

**ಸಿಂಹ** ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ ಮತ್ತು ನಿಮ್ಮ ಸ್ನೇಹಿತರ ಜೊತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ. ನಿಮ್ಮ ಜ್ಞಾನದಾಹ ನಿಮಗೆ ಹೊಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ.

**ಕನ್ಯಾ** ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ. ನಿಮ್ಮ ಪೋಷಕರನ್ನು ಸಂತುಷ್ಟಪಡಿಸುವುದು ನಿಮಗೆ ಕಷ್ಟವೆನಿಸಬಹುದು.

**ತುಲಾ** ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಇಂದು ಹಣದ ಪ್ರಯೋಜನವನ್ನು ಪಡೆಯುವ ಸಾಧ್ಯತೆ ಇದೆ ಆದರೆ ನಿಮ್ಮ ಕೋಪದ ಸ್ವಭಾವದಿಂದ ಇಂದು ಹಣವನ್ನು ಗಳಿಸುವಲ್ಲಿ ಸಾಧ್ಯವಾಗದಿರಬಹುದು. ಕುಟುಂಬದ ಸದಸ್ಯರೊಂದಿಗೆ ಕಾಲ ಕಳೆಯುವುದು ಆನಂದಮಯವಾಗಿರುತ್ತದೆ.

**ವೃಶ್ಚಿಕ** ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ. ಹಣದ ಚಲನೆ ದಿನವಿಡೀ ಮುಂದುವರಿಯುತ್ತದೆ ಮತ್ತು ದಿನದ ಅಂತ್ಯದ ನಂತರ ನೀವು ಉಳಿಸಲು ಸಾಧ್ಯವಾಗುತ್ತದೆ.

**ಧನಸ್ಸು** ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ. ಇದು ಜೀವನದ ಸುಗಂಧವನ್ನು ಹಾಳುಮಾಡುವ ಒಂದು ಸಮೃದ್ಧ ಜೀವನವನ್ನು ನಡೆಸುವ ಬಯಕೆಯನ್ನು ಸಾಯಿಸುವ ನೀಚ ಚಿಂತನೆಯಾಗಿದೆ.

**ಮಕರ** ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ದುರ್ಬಲವಾಗುತ್ತದೆ.

**ಕುಂಭ** ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ಇಂದು ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಡಿಯುವ ಸಧ್ಯತೆ ಇದೆ. ವಿಶೇಷವಾಗಿ ನಿಮ್ಮ ಹಣದಚೀಲವನ್ನು ಎಚ್ಚರಿಕೆಯಿಂದಿಡಿ.

**ಮೀನ** ಸಂಬಂಧಿಗಳು ನಿಮಗೆ ಸಹಾಯ ಹಸ್ತ ನೀಡಲು ಒಪ್ಪಿಕೊಳ್ಳುತ್ತಾರೆ. ಸ್ವಲ್ಪ ಸಂಘರ್ಷದ ಹೊರತಾಗಿಯೂ, ನಿಮ್ಮ ಪ್ರೀತಿಯ ಜೀವನವು ಇಂದು ಉತ್ತಮವಾಗಿರುತ್ತದೆ ಮತ್ತು ನೀವು ನಿಮ್ಮ ಸಂಗಾತಿಯನ್ನು ಸಂತೋಷವಾಗಿಡಲು ಯಶಸ್ವಿಯಾಗುತ್ತೀರಿ ಇಂದಿನ ದಿನದಲ್ಲಿ ನೀವು ತುಂಬಾ ಕಾರ್ಯನಿರತರಾಗಿರುತ್ತೀರಿ .

# ‘ಪ್ರಜಾಸೇವೆ’ ಹೊಸ ಇಲಾಖೆ ಸ್ಥಾಪನೆಗೆ ಚಿಂತನೆ: ಶಾಸಕ ಲಕ್ಷ್ಮಣ್ ಸವದಿ

## ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಸಿಎಂ ಹೊಸ ಹೆಜ್ಜೆ ಇಟ್ಟಿದ್ದಾರೆ

• **ಉದಯವಾಹಿನಿ ಚಿಕ್ಕೋಡಿ:**

ಮುಖ್ಯಮಂತ್ರಿಯಾದ ಬಳಿಕ ಡಿ.ಕೆ. ಶಿವಕುಮಾರ್ ಅವರು ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡುತ್ತಿದ್ದು, ಬೆಳಗಾವಿಯಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸುವ ಹಲವು ಮಹತ್ವದ ನಿರ್ಧಾರಗಳನ್ನು

**1 : ಜನರ ಬಾಗಿಲಿಗೆ ಸರ್ಕಾರ**
**2 : ಆಶಯದೊಂದಿಗೆ ‘ಪ್ರಜಾಸೇವೆ’**
**3 : ದುರುಪಯೋಗ ತಡೆಗೆ ಕ್ರಮ**

ಕೈಗೊಂಡಿದ್ದಾರೆ ಎಂದು ಅಥಣಿ ಶಾಸಕ ಲಕ್ಷ್ಮಣ ಸವದಿ ತಿಳಿಸಿದರು.

ಅಥಣಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ಮುಖ್ಯಮಂತ್ರಿಗಳ ಕಾರ್ಯ ಆಶಯದೊಂದಿಗೆ 'ಪ್ರಜಾಸೇವೆ' ವೈಖರಿಯನ್ನು ಮುಕ್ತಕಂಠದಿಂದ ಶ್ಲಾಘಿಸಿದರು. ಹಿಂದೆಂದೂ ನೋಡದಂತಹ ಮುಖ್ಯಮಂತ್ರಿಗಳು ನಮಗೆ ಸಿಕ್ಕಿದ್ದಾರೆ. ಅವರ ಚಿಂತನೆಗಳು ಹೊಸದಾಗಿದ್ದು, ಜನಪರವಾಗಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಜನರ ಬಾಗಿಲಿಗೆ ಸರ್ಕಾರದ ಸೌಲಭ್ಯಗಳು ಮತ್ತು ಸೇವೆಗಳು ಸುಲಭವಾಗಿ ದೊರಕಬೇಕು ಎಂಬ ಆಶಯದೊಂದಿಗೆ ಪ್ರಜಾಸೇವೆ' ಎಂಬ ಹೊಸ ಇಲಾಖೆಯನ್ನು ಸ್ಥಾಪಿಸಲು ಮುಖ್ಯಮಂತ್ರಿಗಳು ಚಿಂತನೆ ನಡೆಸಿದ್ದಾರೆ. ಈ ನೂತನ ಇಲಾಖೆಗೆ ಪ್ರತ್ಯೇಕ ಸಚಿವರನ್ನು ನಿಯೋಜಿಸುವ ಸಾಧ್ಯತೆಯೂ ಇದೆ. ಅಧಿಕಾರಿಗಳು ಪ್ರತಿನಿತ್ಯ ಜನರಿಗೆ ಲಭ್ಯವಾಗಬೇಕು ಹಾಗೂ ಗ್ರಾಮ ಪಂಚಾಯಿತಿ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ತಮ್ಮ ಕೇಂದ್ರಸ್ಥಾನದಲ್ಲಿಯೇ (ಹೆಡ್ ಕ್ವಾರ್ಟರ್ಸ್) ವಾಸ್ತವ್ಯ ಹೂಡಬೇಕು ಎಂಬ ಕಟ್ಟುನಿಟ್ಟಿನ ಸೂಚನೆಯನ್ನು ಸಿಎಂ ನೀಡಿದ್ದಾರೆ ಎಂದು ಅವರು ವಿವರಿಸಿದರು.

ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಸಿಎಂ ಹೊಸ ಹೆಜ್ಜೆ ಇಟ್ಟಿದ್ದಾರೆ. ಕೆಪಿಎಸ್ಸಿ ಮಾದರಿಯಲ್ಲಿ ಸಿಎಸ್ ಆರ್ ಫಂಡ್ ಸಂಗ್ರಹಿಸಿ, ಪ್ರತಿ ಶಾಲೆಗಳ ಅಭಿವೃದ್ಧಿಗೆ 6 ರಿಂದ 8 ಕೋಟಿ ರೂಪಾಯಿಗಳವರೆಗೆ ಅನುದಾನ ಒದಗಿಸುವ ಯೋಜನೆ ರೂಪಿಸಲಾಗಿದೆ. ಅಥಣಿ ಮತಕ್ಷೇತ್ರಕ್ಕೆ ಈಗಾಗಲೇ 10 ಕೆಪಿಎಸ್ಸಿ ಶಾಲೆಗಳನ್ನು ಮಂಜೂರು ಮಾಡಲಾಗಿದೆ ಎಂದು ಸವದಿ ಹರ್ಷ ವ್ಯಕ್ತಪಡಿಸಿದರು. ಇದೇ ವೇಳೆ, ಬರಗಾಲ, ಕುಡಿಯುವ ನೀರಿನ ಸಮಸ್ಯೆ ಹಾಗೂ ಅತಿವೃಷ್ಟಿ ಪೀಡಿತ ಸ್ಥಳಗಳಿಗೆ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಬೇಕು ಮತ್ತು ಸರ್ಕಾರಕ್ಕೆ ನೈಜ ವರದಿ ಸಲ್ಲಿಸಬೇಕು ಎಂದು ಪ್ರಗತಿ ಪರಿಶೀಲನಾ ಸಭೆಯಲ್ಲಿ ಎಲ್ಲಾ ಶಾಸಕರು ಹಾಗೂ ಅಧಿಕಾರಿಗಳ ಅಭಿಪ್ರಾಯಗಳನ್ನು ಸಂಗ್ರಹಿಸಿ ಸಿಎಂ ಸೂಚನೆ ನೀಡಿದ್ದಾರೆ ಎಂದರು.

ಗೃಹಲಕ್ಷ್ಮಿ ಯೋಜನೆಯು ಈಗ ಚುನಾವಣೆ ಲಕ್ಷ್ಮಿಯಾಗಿದೆ ಎಂಬ ಪ್ರತಿಪಕ್ಷ ನಾಯಕರ ಟೀಕೆಗೆ ಶಾಸಕ ಲಕ್ಷ್ಮಣ ಸವದಿ ನಯವಾಗಿ ತಿರುಗೇಟು ನೀಡಿದರು. ಗೃಹಲಕ್ಷ್ಮಿ ಯೋಜನೆಯ ಹಣ ಬರುತ್ತಿಲ್ಲ ಎಂಬ ಆರೋಪಗಳ ಕುರಿತು ಸ್ಪಷ್ಟನೆ ನೀಡಿದ ಅವರು, ಕೆಲವು ಕಡೆ ಮೃತಪಟ್ಟವರ ಹೆಸರಿನಲ್ಲಿ ಹಣ ಪಡೆಯಲಾಗುತ್ತಿದೆ ಮತ್ತು ಕೆಲವರು ಎರಡು ಬಾರಿ ಹಣವನ್ನು ಡ್ರಾ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.



ಉದಯವಾಹಿನಿ ಚಿತ್ರ

> ಬೆಳಗಾವಿಯಲ್ಲಿ ನಡೆದ ಡಿನ್ನರ್ ಮೀಟಿಂಗ್ ಕುರಿತು ಎದ್ದಿರುವ ಊಹಾಪೋಹಗಳಿಗೆ ತೆರೆ ಎಳೆದ ಶಾಸಕರು, ಆ ಸಭೆಯಲ್ಲಿ ಯಾವುದೇ ರೀತಿಯ ರಾಜಕೀಯ ಚರ್ಚೆಗಳು ನಡೆದಿಲ್ಲ. ಎಂದು ಸ್ಪಷ್ಟಪಡಿಸಿದರು. ಅಲ್ಲದೆ, ಇನ್ನು ಒಂದು ವಾರದೊಳಗೆ ರಾಜ್ಯ ಸಚಿವ ಸಂಪುಟ ವಿಸ್ತರಣೆಯಾಗುವ ನಿರೀಕ್ಷೆಯಿದೆ ಎಂಬ ಮಹತ್ವದ ಸುಳಿವನ್ನು ಇದೇ ಸಂದರ್ಭದಲ್ಲಿ ನೀಡಿದರು.
> -ಲಕ್ಷ್ಮಣ ಸವದಿ

> ಯೋಜನೆಯ ಹಣ ದುರುಪಯೋಗ ಆಗುತ್ತಿರುವುದನ್ನು ಪತ್ತೆ ಹಚ್ಚುವ ಕಾರ್ಯ ಭರದಿಂದ ಸಾಗುತ್ತಿದೆ. ಫಲಾನುಭವಿಗಳ ಸಂಪೂರ್ಣ ಪರಿಶೀಲನಾ ಕಾರ್ಯ ಮುಗಿದ ತಕ್ಷಣವೇ, ಎಲ್ಲಾ ಅರ್ಹರಿಗೂ ಬಾಕಿ ಉಳಿದಿರುವ ಕಂತಿನ ಹಣ ಒಟ್ಟಿಗೆ ಜಮೆಯಾಗಲಿದೆ. ಈ ಬಗ್ಗೆ ಯಾರೂ ಆತಂಕ ಪಡುವ ಅಗತ್ಯವಿಲ್ಲ ಎಂದು ಅವರು ಭರವಸೆ ನೀಡಿದರು.
> -ಲಕ್ಷ್ಮಣ ಸವದಿ

# ಮತದಾರರ ಪಟ್ಟಿ ಪರಿಷ್ಕರಣೆ ಜಾಗೃತಿ ಅಭಿಯಾನ

• **ಉದಯವಾಹಿನಿ ಬೀದರ್,**

ತಾಲ್ಲೂಕು ಪಂಚಾಯತ್ ಬೀದರ್ ಹಾಗೂ ಮಹಾತ್ಮ ಗಾಂಧಿ ಗ್ರಾಮ ಪಂಚಾಯತ್ ಮಾಳೆಗಾಂವ ಸಂಯುಕ್ತ ಆಶ್ರಯದಲ್ಲಿ ಪ್ಲಾಸ್ಟಿಕ್ ಮುಕ್ತ ಗ್ರಾಮ ಪಂಚಾಯತ್ ಹಾಗೂ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಜಾಗೃತಿ ಅಭಿಯಾನವನ್ನು ಮಾಳೆಗಾಂವ ಡಿಜಿಟಲ್ ಗ್ರಂಥಾಲಯ ಆವರಣದಲ್ಲಿ ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮವನ್ನು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕ್‌ರಾವ್ ಪಾಟೀಲ್ ಹಾಗೂ ನರೇಗಾ ಸಹಾಯಕ ನಿರ್ದೇಶಕಿ ಲಕ್ಷ್ಮಿ ಬಿರಾದರ್ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾಣಿಕ್‌ರಾವ್ ಪಾಟೀಲ್, ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್ ಐಆರ್) ಅತ್ಯಂತ ಮಹತ್ವದ ಪ್ರಕ್ರಿಯೆಯಾಗಿದ್ದು, 18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ತಿಳಿಸಿದರು. ಶಾಲಾ ವಿದ್ಯಾರ್ಥಿಗಳು ತಮ್ಮ ಪೋಷಕರು ಹಾಗೂ ನೆರೆಹೊರೆಯವರಿಗೆ ಎಸ್‌ಐಆರ್ ನೋಂದಣಿ ಕುರಿತು ಜಾಗೃತಿ ಮೂಡಿಸಬೇಕು ಎಂದು ಕರೆ ನೀಡಿದರು.ನರೇಗಾ ಸಹಾಯಕ ನಿರ್ದೇಶಕಿ ಲಕ್ಷ್ಮಿ ಬಿರಾದರ್ ಅವರು ವಿಬಿ ರಾಮ್‌ಜಿ ಕಾಯ್ದೆಯ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಮಾಳೆಗಾಂವ ವತಿಯಿಂದ ಸ್ಥಳೀಯ ಸರ್ಕಾರದ ಆಡಳಿತ, ಪ್ಲಾಸ್ಟಿಕ್ ಮುಕ್ತ ಗ್ರಾಮ ನಿರ್ಮಾಣ, ಗ್ರಾಮ ಪಂಚಾಯಿತಿ ಆಡಳಿತ ವ್ಯವಸ್ಥೆ ಹಾಗೂ ಗ್ರಾಮೀಣ ಅಭಿವೃದ್ಧಿ ಯೋಜನೆಗಳ ಕುರಿತು ಗುರುನಾನಕ್ ಶಾಲೆಯ 10ನೇ ತರಗತಿ ವಿದ್ಯಾರ್ಥಿಗಳಿಗೆ ಒಂದು ದಿನದ ಶೈಕ್ಷಣಿಕ ಕ್ಷೇತ್ರ ಭೇಟಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.



ಉದಯವಾಹಿನಿ ಚಿತ್ರ

> ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಅನಿಲ್ ಕುಮಾರ್ ಹಾಗೂ ಚಳ್ಕಾಪುರ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ದೇವೇಂದ್ರ ಅವರು ಪಂಚಾಯತ್ ರಾಜ್ ವ್ಯವಸ್ಥೆ, ಗ್ರಾಮ ಪಂಚಾಯಿತಿ ಆಡಳಿತ, ವಿಬಿ ರಾಮ್‌ಜಿ, ಜಲ್ ಜೀವನ್ ಮಿಷನ್ , ವಸತಿ ಯೋಜನೆ, ಎಸ್‌ಐಆರ್ ನೋಂದಣಿ ಸೇರಿದಂತೆ ವಿವಿಧ ಸರ್ಕಾರಿ ಯೋಜನೆಗಳು ಹಾಗೂ ಗ್ರಾಮ ಆಡಳಿತ ವ್ಯವಸ್ಥೆಯ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

# ಮೂರ್ಛೆ ಹೋದ ಮಗುವಿಗೆ ಚಿಕಿತ್ಸೆ ಸಿಗದೇ ಸಾವು; ಪೋಷಕರಿಂದ ಪ್ರತಿಭಟನೆ


• **ಉದಯವಾಹಿನಿ ಹಾವೇರಿ:**

ಮನೆಯಲ್ಲಿ ಆಟವಾಡುತ್ತಿದ್ದ ವೇಳೆ ಏಕಾಏಕಿ ಮೂರ್ಛೆ ಬಿದ್ದಿದ್ದ 1 ವರ್ಷದ ಮಗು ಸೂಕ್ತ ಚಿಕಿತ್ಸೆ ಸಿಗದೇ ಸಾವನ್ನಪ್ಪಿದ ಘಟನೆ ತಾಲ್ಲೂಕಿನ ಹಾವನೂರು ಗ್ರಾಮದಲ್ಲಿ ನಡೆದಿದೆ. ಒಂದು ವರ್ಷದ ಭವಾನಿ ಮಹೇಶ ಕಿಳ್ಳಿಕ್ಯಾತರ್ ಚಿಕಿತ್ಸೆ ಸಿಗದೇ ಮೃತಪಟ್ಟ ಮಗು. ಮಗು ಮೂರ್ಛೆ ಹೋಗುತ್ತಿದ್ದಂತೆ ಪೋಷಕರು ಹಾವನೂರಿನ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕರೆದುಕೊಂಡು ಹೋಗಿದ್ದಾರೆ.

ಆದರೆ, ಅಲ್ಲಿ ವೈದ್ಯರಿಲ್ಲದೇ ಸೂಕ್ತ ಚಿಕಿತ್ಸೆ ಸಿಗದ ಕಾರಣ ಗುತ್ತಲ ಪ್ರಾಥಮಿಕ ಆಸ್ಪತ್ರೆಗೆ ಕರೆತರುವ ವೇಳೆ ಮಗು ಸಾವನ್ನಪ್ಪಿದೆ. ಇದರಿಂದ ಆಕ್ರೋಶಗೊಂಡ ಪೋಷಕರು ಹಾಗೂ ಕುಟುಂಬದ ಸದಸ್ಯರು ಹಾವನೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಮುಂದೆ ಶವವಿಟ್ಟು ಪ್ರತಿಭಟನೆ ನಡೆಸಿದರು.

ಹಾವನೂರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯರು ಇಲ್ಲದೇ ಇರುವುದೇ ಮಗುವಿನ ಸಾವಿಗೆ ಕಾರಣ ಎಂದು ಪೋಷಕರು ಆರೋಪಿಸಿದ್ದಾರೆ. ಸ್ಥಳಕ್ಕೆ ತಾಲ್ಲೂಕು ವೈದ್ಯಾಧಿಕಾರಿ ಡಾ. ಪ್ರಭಾಕರ ಕುಂದಾಪುರ ಭೇಟಿ ನೀಡಿ ಕುಟುಂಬ ಸದಸ್ಯರ ಜೊತೆಗೆ ಮಾತುಕತೆ ನಡೆಸಿದರು. ಗುತ್ತಲ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

ಹಾವನೂರು ಪ್ರಾಥಮಿಕ ಆರೋಗ್ಯ ಕೇಂದ್ರ ಮುಂದೆ ಪ್ರತಿಭಟನೆ ಮಾಡುತ್ತಿರೋ ಮಗುವಿನ ಕುಟುಂಬದ ಸದಸ್ಯರು ಸ್ಥಳಕ್ಕೆ ಶಾಸಕ ರುದ್ರಪ್ಪ ಲಮಾಣಿ ಬರುವಂತೆ ಆಗ್ರಹಿಸಿದ್ದಾರೆ. ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ವೈದ್ಯರನ್ನ ನೇಮಕ ಮಾಡುವಂತೆ ಸ್ಥಳೀಯರು ಆಗ್ರಹಿಸಿದ್ದಾರೆ. ಸ್ಥಳಕ್ಕೆ ಗುತ್ತಲ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.



ಉದಯವಾಹಿನಿ ಚಿತ್ರ

ಈ ಕುರಿತು ತಾಲ್ಲೂಕು ವೈದ್ಯಾಧಿಕಾರಿ ಡಾ. ಪ್ರಭಾಕರ ಕುಂದಾಪುರ ಅವರು ಮಾತನಾಡಿದ್ದು, 'ಇಲ್ಲಿ ರೆಗ್ಯುಲರ್ ಆಗಿ ಮೂರು ಜನ ಸ್ಟಾಫ್ ಬೇಕು ಅಂತಾ ಕೇಳಿದ್ರು. ಈಗಾಗಲೇ ಇಬ್ಬರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇನ್ನೊಬ್ಬರನ್ನು ಇಲ್ಲಿ ಹಾಕುತ್ತೇವೆ. ಇಲ್ಲಿ ಒಬ್ಬರು ಆಯುರ್ವೇದಿಕ್ ವೈದ್ಯರು ಕೆಲಸ ಮಾಡುತ್ತಿದ್ದಾರೆ' ಎಂದಿದ್ದಾರೆ. 'ಬೆಳಗ್ಗೆ ಮಗು ಆರಾಮ ಇತ್ತು ಎಂದು ಪೋಷಕರು ಹೇಳುತ್ತಿದ್ದಾರೆ.

ಹಾಲು ಕೊಡದಿದ್ದಾಗ ಉಸಿರಾಟಕ್ಕೆ ತೊಂದರೆಯಾಗಿ ಡೆತ್ ಆಗಿರಬಹುದು. ಏಕೆಂದರೆ, ಆಸ್ಪತ್ರೆಗೆ ಬರುವ ಮುಂಚೆಯೇ ಮಗು ತೀರಿಕೊಂಡಿದೆ ಎಂದು ಹೇಳಿದರು. ಆಸ್ಪತ್ರೆಯಲ್ಲಿ ವೈದ್ಯರು ಇದ್ದಾರೆ. ಅವರು 9 ಗಂಟೆಗೆ ಡ್ಯುಟಿಗೆ ಬರುತ್ತಾರೆ. ಹೀಗಾಗಿ, ಸಾವು ಸಂಭವಿಸಿದೆ. ನೈಟ್ ಡ್ಯೂಟಿ ಸಿಸ್ಟರ್ ಇರಲಿಲ್ಲ. ಹಾಗಾಗಿ, ಅವರನ್ನು ಇನ್ನು ಮುಂದೆ ಇಲ್ಲಿಯೇ ಇರುವಂತೆ ವ್ಯವಸ್ಥೆ ಮಾಡುತ್ತೇವೆ' ಎಂದು ತಿಳಿಸಿದ್ದಾರೆ.

# ಟಿಬಿ ಡ್ಯಾಂ ಒಳಹರಿವಿನಲ್ಲಿ ಭಾರಿ ಏರಿಕೆ: ಕಾಲುವೆಗಳಿಗೆ 140 ಕ್ಯೂಸೆಕ್ ನೀರು ಬಿಡುಗಡೆ

• **ಉದಯವಾಹಿನಿ ವಿಜಯನಗರ:**

ಕಲ್ಯಾಣ ಕರ್ನಾಟಕ ಭಾಗದ ರೈತರ ಜೀವನಾಡಿ ತುಂಗಭದ್ರಾ ಜಲಾಶಯದಿಂದ ಸಂತಸದ ಸುದ್ದಿ ಹೊರಬಿದ್ದಿದೆ. ಮಲೆನಾಡು ಹಾಗೂ ಜಲಾನಯನ ಪ್ರದೇಶಗಳಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ತುಂಗಭದ್ರಾ ಜಲಾಶಯದ ಒಳಹರಿವಿನಲ್ಲಿ ಭಾರಿ ಪ್ರಮಾಣದ ಏರಿಕೆಯಾಗಿದೆ.

ಕೇವಲ ಒಂದೇ ದಿನದಲ್ಲಿ ಜಲಾಶಯಕ್ಕೆ ಮೂರೂವರೆ ಟಿಎಂಸಿಯಷ್ಟು ಒಳಹರಿವು ಹೆಚ್ಚಳವಾಗಿದೆ. ಕಳೆದ 24 ಗಂಟೆಗಳಲ್ಲಿ ಸರಾಸರಿ 44,782 ಕ್ಯೂಸೆಕ್ ಒಳಹರಿವು ದಾಖಲಾಗಿದ್ದರೆ, ಪ್ರಸ್ತುತ ಜಲಾಶಯಕ್ಕೆ ಭಾರಿ ಪ್ರಮಾಣದಲ್ಲಿ ಅಂದರೆ 49,728 ಕ್ಯೂಸೆಕ್‌ನಷ್ಟು ನೀರು ಹರಿದು ಬರುತ್ತಿದೆ.

**ಜಲಾಶಯದ ಸದ್ಯದ ನೀರಿನ ಮಟ್ಟದ ಅಂಕಿ-ಅಂಶ:** ಒಟ್ಟು 1633 ಅಡಿಗಳ ಗರಿಷ್ಠ ಸಂಗ್ರಹ ಸಾಮರ್ಥ್ಯ ಹೊಂದಿರುವ ಈ ಜಲಾಶಯದಲ್ಲಿ, ಸದ್ಯಕ್ಕೆ 1596 ಅಡಿಗಳಷ್ಟು ನೀರು ಸಂಗ್ರಹವಾಗಿದೆ. ಒಟ್ಟು 105.788 ಟಿಎಂಸಿ ಸಂಗ್ರಹ ಸಾಮರ್ಥ್ಯವಿರುವ ಜಲಾಶಯದಲ್ಲಿ ಸದ್ಯಕ್ಕೆ 17.511 ಟಿಎಂಸಿಯಷ್ಟು ನೀರು ಲಭ್ಯವಿದೆ. ಆದರೆ, ಕಳೆದ ವರ್ಷ ಇದೇ ದಿನಕ್ಕೆ ಹೋಲಿಸಿದರೆ ಈ ಬಾರಿ ನೀರಿನ ಸಂಗ್ರಹ ಕೊಂಚ ಕಡಿಮೆಯಿದೆ. ಏಕೆಂದರೆ ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 77.343 ಟಿಎಂಸಿ ನೀರಿನ ಸಂಗ್ರಹವಿತ್ತು. ಸದ್ಯದ ಪರಿಸ್ಥಿತಿಯಲ್ಲಿ ಕಾಲುವೆಗಳಿಗೆ ಮಾತ್ರ 140 ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗುತ್ತಿದ್ದು, ನದಿಗೆ ನೀರು ಹರಿಸುತ್ತಿಲ್ಲ.



ಉದಯವಾಹಿನಿ ಚಿತ್ರ

ಕಳೆದ ಕೆಲವು ದಿನಗಳಿಂದ ಒಳಹರಿವು ಹೆಚ್ಚುತ್ತಿರುವುದು ರೈತರ ಮುಖದಲ್ಲಿ ಮಂದಹಾಸ ಮೂಡಿಸಿದೆ. ಇದೇ ರೀತಿ ಮಳೆ ಮುಂದುವರಿದರೆ ಜಲಾಶಯದ ನೀರಿನ ಮಟ್ಟ ಸದ್ಯದಲ್ಲೇ ಗಣನೀಯವಾಗಿ ಏರಿಕೆಯಾಗುವ ನಿರೀಕ್ಷೆ ಇದೆ. ಈ ತಿಂಗಳ ಆರಂಭದಲ್ಲಿ ತುಂಗಭದ್ರಾ ಜಲಾಶಯದಲ್ಲಿ ಸಮರ್ಪಕ ಪ್ರಮಾಣದ ನೀರಿನ ಸಂಗ್ರಹ ಇಲ್ಲದಿರುವ ಕಾರಣ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಬೆಳೆಗಳಿಗೆ ಜಲಾಶಯದ ಬಲದಂಡೆ ಹಾಗೂ ಎಡದಂಡೆ ಕಾಲುವೆಗಳ ಮೂಲಕ ನೀರು ಹರಿಸಲು ಸಾಧ್ಯವಾಗುವುದಿಲ್ಲ ಎಂದು ತುಂಗಭದ್ರಾ ಯೋಜನೆ ಹಾಗೂ ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿ ಪ್ರಕಟಿಸಿತ್ತು.

# ದೋಷಮುಕ್ತ ಮತದಾರರ ಪಟ್ಟಿ ಸಿದ್ಧಪಡಿಸುವುದು ಪ್ರಮುಖ ಉದ್ದೇಶ.

• **ಉದಯವಾಹಿನಿ ಬಳ್ಳಾರಿ:**



ಉದಯವಾಹಿನಿ ಚಿತ್ರ

ಚುನಾವಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ತರಲು ಯಾವುದೇ ಲೋಪದೋಷಗಳಿಲ್ಲದ ಮತದಾರರ ಪಟ್ಟಿ ಸಿದ್ಧಪಡಿಸುವುದು 'ವಿಶೇಷ ಸಮಗ್ರ ಪರಿಷ್ಕರಣೆ' ಅಭಿಯಾನದ ಮುಖ್ಯ ಉದ್ದೇಶವಾಗಿದೆ' ಎಂದು ಬಳ್ಳಾರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ತಿಳಿಸಿದರು.

ನಗರದ ಖಾಸಗಿ ಪಿಯು ಕಾಲೇಜಿನಲ್ಲಿ ಆಯೋಜಿಸಿದ್ದ ಜಾಗೃತಿ ಅಭಿಯಾನದಲ್ಲಿ ಮಾತನಾಡಿದ ಅವರು, 'ಯುವ ಮತದಾರರನ್ನು ಗುರುತಿಸುವುದು ಹಾಗೂ ಮೃತಪಟ್ಟವರ ಹೆಸರಿನಲ್ಲಿ ನಕಲಿ ಮತದಾನವಾಗುವುದನ್ನು ತಡೆಯುವುದು ಈ ಅಭಿಯಾನದ ಗುರಿಯಾಗಿದೆ' ಎಂದರು.ಕಾಲೇಜುಗಳಲ್ಲಿ ಸ್ಥಾಪಿಸಲಾಗಿರುವ 'ಮತದಾರರ ಸಾಕ್ಷರತಾ ಕ್ಲಬ್' ಮೂಲಕ ವಿದ್ಯಾರ್ಥಿಗಳಲ್ಲಿ ರಾಜಕೀಯ ವಿದ್ಯಮಾನಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಅರ್ಹ ಕುಟುಂಬಸ್ಥರ ವಿವರಗಳನ್ನು ಒಳಗೊಂಡ ಎಸ್‌ಐಆರ್ ಗಣತಿ ನಮೂನೆಯನ್ನು ಭರ್ತಿ ಮಾಡಲು ಜುಲೈ 29 ಕೊನೆಯ ದಿನವಾಗಿದೆ. ವಿವರ ಸಲ್ಲಿಸದಿದ್ದರೆ ಮತದಾರರ ಪಟ್ಟಿಯಿಂದ ಹೆಸರು ಕೈಬಿಡುವ ಸಾಧ್ಯತೆ ಇರುತ್ತದೆ. ಬಿಎಲ್‌ಒಗಳು ಭೇಟಿ ನೀಡದಿದ್ದರೆ ಸಾರ್ವಜನಿಕರು 'ಇಸಿಐ ನೆಟ್' ಆ್ಯಪ್ ಮೂಲಕ ಆನ್‌ಲೈನ್‌ನಲ್ಲೇ ಅರ್ಜಿ ಸಲ್ಲಿಸಬಹುದು ಎಂದು ಅವರು ವಿವರಿಸಿದರು. ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ, 'ಜುಲೈ 29ರಿಂದ ಫಾರ್ಮ್ ನಂಬರ್ 6 ವಿತರಣೆ ಆರಂಭವಾಗಲಿದ್ದು, ಹೊಸ ಮತದಾರರು ನೋಂದಾಯಿಸಿಕೊಳ್ಳಲು ಕೋರಿದರು. ಶಿಕ್ಷಣ ಇಲಾಖೆಯ ಉಪನಿರ್ದೇಶಕ ಹನುಮಂತರಾವ್, ಕಾಲೇಜಿನ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು. ದೋಷಮುಕ್ತ ಮತದಾರರ ಪಟ್ಟಿ ಸಿದ್ಧಪಡಿಸುವುದು ಪ್ರಮುಖ ಉದ್ದೇಶ.

# ಕಂಪ್ಲಿ ಮುದ್ದಾಪುರದಲ್ಲಿ ಬಸ್ ಸಮಯ ಬದಲಾವಣೆ ವಿರೋಧಿಸಿ ಪ್ರತಿಭಟನೆ

• **ಉದಯವಾಹಿನಿ ಕಂಪ್ಲಿ:**

ಏಕಾಏಕಿ ಬಸ್ ಸಮಯ ಬದಲಾವಣೆ ಮಾಡಿರುವುದನ್ನು ವಿರೋಧಿಸಿ ತಾಲ್ಲೂಕಿನ ನಂ.10 ಮುದ್ದಾಪುರ ಗ್ರಾಮದ ವಿದ್ಯಾರ್ಥಿಗಳು ಮತ್ತು ವಿಜಯ ಕರುನಾಡ ರಕ್ಷಣಾ ವೇದಿಕೆಯವರು ಗ್ರಾಮದಲ್ಲಿ ಬಸ್ ತಡೆದು ಪ್ರತಿಭಟಿಸಿದರು.

ವೇದಿಕೆ ಗ್ರಾಮ ಘಟಕದ ಕಾರ್ಯದರ್ಶಿ ಅವಲಕ್ಕಿ ರಾಘವೇಂದ್ರ, ಮಾತನಾಡಿ, 'ನಿತ್ಯ ಬೆಳಿಗ್ಗೆ 7ಕ್ಕೆ ಕಂಪ್ಲಿಯಿಂದ ಮುದ್ದಾಪುರ ಮಾರ್ಗವಾಗಿ ಹೊಸಪೇಟೆಗೆ ತೆರಳುವ ಪ್ರಸ್ತುತ ಬಸ್ ಸೇವೆಯಿಂದ ಶಾಲೆ, ಕಾಲೇಜು ವಿದ್ಯಾರ್ಥಿಗಳಿಗೆ, ನೌಕರ, ಕಾರ್ಮಿಕರಿಗೆ, ರೈತರಿಗೆ, ಆಸ್ಪತ್ರೆಗಳಿಗೆ ಹೋಗುವವರಿಗೆ ತುಂಬಾ ಅನುಕೂಲವಿತ್ತು. ಆದರೆ, ಕಳೆದ ಒಂದು ವಾರದಿಂದ ಬೆಳಿಗ್ಗೆ 7ಕ್ಕೆ ಬದಲಾಗಿ 7.45ಕ್ಕೆ ನಂ.10 ಮುದ್ದಾಪುರ ಗ್ರಾಮದ ಮೂಲಕ ಹೊಸಪೇಟೆಗೆ ಸಂಚರಿಸುತ್ತಿರುವುದರಿಂದ ಎಲ್ಲರಿಗೂ ತುಂಬಾ ತೊಂದರೆಯಾಗಿದೆ. ಈ ಹಿಂದೆ ಇದ್ದಂತೆ ಪ್ರತಿದಿನ ಬೆಳಿಗ್ಗೆ 7ಕ್ಕೆ ಕಂಪ್ಲಿ ಸಾರಿಗೆ ಸಂಸ್ಥೆ ನಿಲ್ದಾಣದಿಂದ ಬಸ್ ಹೊರಡುವಂತೆ ಸಂಬಂಧಿಸಿದ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು' ಎಂದು ಆಗ್ರಹಿಸಿದರು. ವಿದ್ಯಾರ್ಥಿಗಳ ಮನವಿಗೆ ಸಂಬಂಧಿಸಿದ ಅಧಿಕಾರಿಗಳು ಈ ಹಿಂದಿನಂತೆ ಬೆಳಿಗ್ಗೆ 7ಕ್ಕೆ ಕಂಪ್ಲಿ ಬಸ್ ನಿಲ್ದಾಣದಿಂದ ಬಸ್ ಬಿಡಲಾಗುವುದು ಎಂದು ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆ ಹಿಂದಕ್ಕೆ ಪಡೆಯಲಾಯಿತು. ತುರ್ತು ಸೇವೆಗಳ 112 ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದರು. ವಿದ್ಯಾರ್ಥಿಗಳಾದ ತ್ರಿವೇಣಿ, ಹೊನ್ನೂರಸ್ವಾಮಿ ಇದ್ದರು.

ಉದಯವಾಹಿನಿ ಚಿತ್ರ



# ಹಲವು ಕಳ್ಳತನ ಪ್ರಕರಣಗಳನ್ನು ಭೇದಿಸಿದ ವಿಜಯನಗರ ಪೊಲೀಸರು

• **ಉದಯವಾಹಿನಿ ವಿಜಯನಗರ:**

ಜಿಲ್ಲೆಯಲ್ಲಿ ನಡೆದ ವಿವಿಧ ಕಳ್ಳತನ ಪ್ರಕರಣಗಳನ್ನು ವಿಜಯನಗರ ಪೊಲೀಸರು ಭೇದಿಸಿ, ಒಟ್ಟು 27.75 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ ಮೋಟಾರ್ ಸೈಕಲ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಜಿಲ್ಲೆಯ ಹೊಸಪೇಟೆ ಹಾಗೂ ಹರಪನಹಳ್ಳಿ ಉಪ ವಿಭಾಗದ ಪೊಲೀಸರು ನಡೆಸಿದ ಪ್ರತ್ಯೇಕ ಕಾರ್ಯಾಚರಣೆಗಳಲ್ಲಿ ಒಟ್ಟು ಏಳು ಆರೋಪಿಗಳನ್ನು ಬಂಧಿಸಲಾಗಿದೆ. ಅವರಿಂದ 13.60 ಲಕ್ಷ ಮೌಲ್ಯದ ಚಿನ್ನಾಭರಣ ಮತ್ತು 11.15 ಲಕ್ಷ ಮೌಲ್ಯದ 15 ಮೋಟಾರ್ ಸೈಕಲ್‌ಗಳನ್ನು ಜಪ್ತಿ ಮಾಡಲಾಗಿದೆ.

ಹೊಸಪೇಟೆ ಪಟ್ಟಣ ಪೊಲೀಸ್ ಠಾಣೆಯಲ್ಲಿ ಏಪ್ರಿಲ್ 20ರಂದು ದಾಖಲಾಗಿದ್ದ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್. ಶ್ರೀನಿವಾಸ ಹಾಗೂ ಓರ್ವ ಬಾಲಕನನ್ನು ಬಂಧಿಸಲಾಗಿದೆ. ಅವರಿಂದ ಸುಮಾರು 11 ಲಕ್ಷ ಮೌಲ್ಯದ ಆರು ಮೋಟಾರ್ ಸೈಕಲ್‌ಗಳು ಹಾಗೂ 33 ಗ್ರಾಂ ಚಿನ್ನಾಭರಣವನ್ನು ವಶಪಡಿಸಿಕೊಳ್ಳಲಾಗಿದೆ.

ಹರಪನಹಳ್ಳಿ ಪೊಲೀಸ್ ಠಾಣೆಯಲ್ಲಿ ಫೆಬ್ರವರಿ 7ರಂದು ತರಳಬಾಳು ಕಲ್ಯಾಣ ಮಂಟಪದಲ್ಲಿ ನಡೆದ ಕಳ್ಳತನ ಪ್ರಕರಣದಲ್ಲಿ ಮಧ್ಯಪ್ರದೇಶದ ವಾಖಿರ್ ಅಹಮ್ಮದ್ ಶೇಖ್ ಮತ್ತು ದಾವಣಗೆರೆಯ ಬಾಷಾ ಅಲಿಯಾಸ್ ಮುಜಾವರ್ ಜಾಫರ್ ಅವರನ್ನು ಬಂಧಿಸಲಾಗಿದೆ. ಆರೋಪಿಗಳಿಂದ 3.50 ಲಕ್ಷ ಮೌಲ್ಯದ ಚಿನ್ನಾಭರಣವನ್ನು ಜಪ್ತಿ ಮಾಡಲಾಗಿದೆ.

# ಅಣಬೆ ಸೇವಿಸಿ ಒಂದೇ ಕುಟುಂಬದ 9 ಮಂದಿ ಅಸ್ವಸ್ಥ

• **ಉದಯವಾಹಿನಿ ಚಿಕ್ಕೋಡಿ:**

ಕೆಲಸ ಮುಗಿಸಿಕೊಂಡು ಬರುವಾಗ ಹೊಲದಲ್ಲಿ ಸಿಕ್ಕ ಅಣಬೆ ತಂದು ಅಡುಗೆ ಮಾಡಿ ತಿಂದ ಒಂದೇ ಕುಟುಂಬದ 9 ಮಂದಿ ಅಸ್ವಸ್ಥಗೊಂಡಿರುವ ಘಟನೆ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಉಮರಾಣಿ ಗ್ರಾಮದಲ್ಲಿ ನಡೆದಿದೆ. ಸದ್ಯ ಎಲ್ಲರನ್ನೂ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಗ್ರಾಮದ ಜಿದ್ದಿಮನಿ ಹಾಗೂ ಕೋಳಿ ಕುಟುಂಬದ ಸದಸ್ಯರು ಎಂದಿನಂತೆ ಕೆಲಸ ಮುಗಿಸಿಕೊಂಡು ಮನೆಗೆ ಹಿಂದಿರುಗುತ್ತಿದ್ದರು. ಈ ವೇಳೆ ಹೊಲವೊಂದರಲ್ಲಿ ಬೆಳೆದಿದ್ದ ಅಣಬೆಯನ್ನು ಕಂಡು, ಅದನ್ನು ಮನೆಗೆ ತಂದು ಅಡುಗೆ ಮಾಡಿದ್ದಾರೆ. ಒಬ್ಬರು ತಂದಿದ್ದನ್ನು ಕಂಡು ಮತ್ತೊಂದು ಕುಟುಂಬದವರೂ ಅದೇ ಅಣಬೆಯನ್ನು ತಂದು ಅಡುಗೆ ಮಾಡಿ ಸೇವಿಸಿದ್ದಾರೆ. ಆದರೆ, ಆ ಹೊಲದ ಮಾಲೀಕರು ಬೆಳೆಗೆ ಔಷಧ (ಕೀಟನಾಶಕ) ಸಿಂಪಡಿಸಿದ್ದರು. ಈ ವಿಚಾರ ತಿಳಿಯದ ಕುಟುಂಬಸ್ಥರು ಅಣಬೆ ಊಟ ಮಾಡಿದ ಬಳಿಕ ತೀವ್ರ ವಾಂತಿ ಮತ್ತು ಭೇದಿಯಿಂದ ನರಳಾಡಿದ್ದಾರೆ.

ಕೂಡಲೇ ಅಸ್ವಸ್ಥರಾದ ಎಲ್ಲರನ್ನೂ ಚಿಕ್ಕೋಡಿ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಇವರಲ್ಲಿ ಓರ್ವ ಗರ್ಭಿಣಿಗೆ ಹೆಚ್ಚಿನ ಚಿಕಿತ್ಸೆ ಅವಶ್ಯವಿದ್ದದ್ದರಿಂದ ಬೆಳಗಾವಿ ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಗಿದೆ. 8 ಮಂದಿ ಚಿಕ್ಕೋಡಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಎಲ್ಲರ ಆರೋಗ್ಯ ಸ್ಥಿರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ.

# ಗಮನಸೆಳೆದ 72 ಕೆ.ಜಿಯ ಹಲಸಿನಹಣ್ಣು!

• **ಉದಯವಾಹಿನಿ ಹಾಸನ**

ಮೂರು ಹಲಸಿನ ಹಣ್ಣುಗಳನ್ನು ಹಲಸು ಹಾಗೂ ಮಾವು ಮೇಳದಲ್ಲಿ ಪ್ರದರ್ಶನಕ್ಕಿಟ್ಟಿದ್ದು, ಎಲ್ಲರ ಗಮನ ಸೆಳೆಯಿತು. ಸಕಲೇಶಪುರದಲ್ಲಿ ನಡೆದ ಹಲಸು ಹಾಗೂ ಮಾವು ಮೇಳದಲ್ಲಿ 72 ಕೆ.ಜಿಯ ಗಜ ಗಾತ್ರದ ಹಲಸು ಎಲ್ಲರ ಕುತೂಹಲ ಕೆರಳಿಸಿತು. ಹೆಬ್ಬನಹಳ್ಳಿಯ ಹೆಚ್.ಬಿ.ಪ್ರತಾಪ್ ಕುಮಾರ್ ಎಂಬವರು ತಮ್ಮ ತೋಟದ ಮರದಲ್ಲಿದ್ದ ಮೂರು ಹಲಸಿನ ಹಣ್ಣುಗಳನ್ನು ಇಲ್ಲಿನ ಶ್ರೀನಿವಾಸ ಕನ್ವೆನ್ಷನ್ ಹಾಲ್‌ನಲ್ಲಿ ಆಯೋಜಿಸಲಾದ ಹಲಸು ಹಾಗೂ ಮಾವು ಮೇಳದಲ್ಲಿ ಪ್ರದರ್ಶನಕ್ಕೆ ಇಟ್ಟಿದ್ದರು.

ಈ ಬೃಹತ್ ಗಾತ್ರದ ಹಲಸಿನ ಹಣ್ಣುಗಳು ಎಲ್ಲರ ಗಮನ ಸೆಳೆದವು. ಮೇಳಕ್ಕೆ ಬಂದವರು ದೈತ್ಯ ಹಲಸಿನ ಹಣ್ಣುಗಳನ್ನು ನೋಡಿ ಬೆರಗಾದರು. ಒಂದು ಹಣ್ಣನ್ನು ಒಬ್ಬರ ಕೈಯಿಂದ ಎತ್ತಲು ಸಾಧ್ಯವಾಗದೆ ಇಬ್ಬರು ಎತ್ತಿ ತೂಕ ಮಾಡಬೇಕಾಯಿತು. ವಿಶೇಷವಾಗಿತ್ತು. 54.43 ಕೆ.ಜಿ ತೂಕದ ಹಲಸಿನ ಹಣ್ಣು ಇದುವರೆಗಿನ ಜಗತ್ತಿನ ಅತಿ ಹೆಚ್ಚು ತೂಕದ ಹಲಸಿನ ಹಣ್ಣು ಎಂದು ಗೂಗಲ್‌ನಲ್ಲಿ ಮಾಹಿತಿ ಸಿಗುತ್ತದೆ.

# ಮಂಗಳೂರಿನ 2 ವಾರ್ಡ್‌ಗಳಲ್ಲಿ ಅರಿಶಿನ ಕಾಮಾಲೆ ರೋಗ: ಮುನ್ನೆಚ್ಚರಿಕಾ ಕ್ರಮ

## ಅರಿಶಿನ ಕಾಮಾಲೆ ಕಂಡುಬಂದರೆ ನಾಟಿ ಔಷಧಿ/ಸ್ವಯಂ ಔಷಧಿ ಮಾಡಿಕೊಳ್ಳಬೇಡಿ.

• **ಉದಯವಾಹಿನಿ ಮಂಗಳೂರು:**

ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಎರಡು ಪ್ರಮುಖ ವಾರ್ಡ್‌ಗಳಲ್ಲಿ ಇತ್ತೀಚಿನ ದಿನಗಳಲ್ಲಿ ಅರಿಶಿನ ಕಾಮಾಲೆ ಜಾಂಡೀಸ್ (ಹೆಪಟೈಟಿಸ್) ಪ್ರಕರಣಗಳು ಗಣನೀಯವಾಗಿ ಪತ್ತೆಯಾಗುತ್ತಿವೆ. ಜೂನ್ 23ರಿಂದ ಜುಲೈ 9ರವರೆಗಿನ ಕೇವಲ ಎರಡು ವಾರಗಳ ಅವಧಿಯಲ್ಲಿಯೇ 19 ಹೊಸ ಪ್ರಕರಣಗಳು ಪತ್ತೆಯಾಗಿರುವುದು

**• ಅಳಕೆ ಮತ್ತು ಕುದ್ರೋಳಿ**
**• ‘ಕ್ಲಸ್ಟರ್ ಸೋಂಕು’ ಅಲ್ಲ**
**• ಮನೆ ಮನೆಗೆ ಭೇಟಿ ನೀಡಿ**

ಜಿಲ್ಲಾ ಆರೋಗ್ಯ ಇಲಾಖೆಯನ್ನು ಎಚ್ಚೆತ್ತುಕೊಳ್ಳುವಂತೆ ಮಾಡಿದೆ.

ಮಂಗಳೂರಿನ ಡೋಂಗರಕೇರಿ, ಅಳಕೆ ಮತ್ತು ಕುದ್ರೋಳಿ ಸುತ್ತಮುತ್ತಲಿನ ಎರಡು ವಾರ್ಡ್‌ಗಳಲ್ಲಿ ಈ ಸೋಂಕು ಪ್ರಮುಖವಾಗಿ ಕಾಣಿಸಿಕೊಂಡಿದ್ದು, ಇಲಾಖೆ ಯುದ್ಧೋಪಾದಿಯಲ್ಲಿ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳುತ್ತಿದೆ.

ಈ ಬಗ್ಗೆ ಸಾರ್ವಜನಿಕರಿಗೆ ಧೈರ್ಯ ತುಂಬಿರುವ ಜಿಲ್ಲಾ ಆರೋಗ್ಯ ಅಧಿಕಾರಿಗಳು, ಸೋಂಕು ಪತ್ತೆಯಾಗಿರುವ ಎರಡು ವಾರ್ಡ್‌ಗಳ ನಿವಾಸಿಗಳಲ್ಲಿ ಪ್ರಕರಣಗಳು ವರದಿಯಾಗಿದ್ದರೂ, ಇವೆಲ್ಲವೂ ಒಂದೇ ಮೂಲದಿಂದ ಹರಡಿರುವ 'ಕ್ಲಸ್ಟರ್ ಸೋಂಕು' ಖಂಡಿತಾ ಅಲ್ಲ.

ಅಂದರೆ, ಎಲ್ಲಾ ರೋಗಿಗಳಿಗೆ ಒಂದೇ ಕಡೆಯಿಂದ ಸೋಂಕು ತಗುಲಿದೆ ಎಂದು ಹೇಳಲು ಬರುವುದಿಲ್ಲ. ನಗರದ ಬೇರೆ ಬೇರೆ ಭಾಗಗಳಲ್ಲಿ ಬಿಡಿಬಿಡಿಯಾಗಿ ಪ್ರಕರಣಗಳು ಕಂಡುಬಂದಿವೆ. ಯಾವುದೆ ಆತಂಕ ಬೇಡ ಎಂದು ತಿಳಿಸಿದ್ದಾರೆ.

ರೋಗ ಹರಡುವಿಕೆಯ ಮೂಲವನ್ನು ಪತ್ತೆಹಚ್ಚುವುದು ಏಕೆ ಕಷ್ಟ ಎಂಬುದಕ್ಕೆ ಜಿಲ್ಲಾ ಆರೋಗ್ಯ ಅಧಿಕಾರಿಗಳು ವಿವರಣೆ ನೀಡಿದ್ದಾರೆ.

ಹೆಪಟೈಟಿಸ್ 'ಎ' ವೈರಸ್‌ನ ಇನ್‌ಕ್ಯುಬೇಷನ್ ಪೀರಿಯಡ್ ರೋಗಾಣು ದೇಹ ಸೇರಿದ ನಂತರ ಲಕ್ಷಣಗಳು ಹೊರಹೊಮ್ಮುವ ಅವಧಿ) 30 ರಿಂದ 45 ದಿನಗಳಷ್ಟು ದೀರ್ಘವಾಗಿರುತ್ತದೆ. ಜನರು ತಮ್ಮ ದೈನಂದಿನ ಕೆಲಸ ಕಾರ್ಯಗಳಿಗಾಗಿ ಬೇರೆ ಬೇರೆ ಊರುಗಳಿಗೆ, ಜಾಗಗಳಿಗೆ ಪ್ರಯಾಣ ಮಾಡುತ್ತಾರೆ. ಆ ಸಂದರ್ಭದಲ್ಲಿ ಅವರು ಎಲ್ಲೋ ಕಲುಷಿತ ನೀರು ಅಥವಾ ಆಹಾರ ಸೇವಿಸಿರಬಹುದು. ಅದರ ಲಕ್ಷಣಗಳು ಒಂದು ತಿಂಗಳ ನಂತರ ಈಗ ಕಾಣಿಸಿಕೊಳ್ಳುತ್ತಿರುವುದರಿಂದ, ಸೋಂಕು ನಮ್ಮದೇ ವಾರ್ಡ್‌ನಲ್ಲಿ ಹರಡಿದೆ ಎಂದು ನೇರವಾಗಿ ಹೇಳಲು ಸಾಧ್ಯವಿಲ್ಲ ಎನ್ನುತ್ತಾರೆ.

**ಹೆಪಟೈಟಿಸ್ ‘ಎ’ ವೈರಸ್‌ನ ಇನ್ ಕ್ಯುಬೇಷನ್ ಪೀರಿಯಡ್**

ಡೋಂಗರಕೇರಿ, ಅಳಕೆ, ಕುದ್ರೋಳಿ ಭಾಗದ ಬಾವಿ ನೀರು ಮತ್ತು ಕುಡಿಯುವ ನೀರಿನ ಮೂಲಗಳಿಗೆ ಕಡ್ಡಾಯವಾಗಿ ಕ್ಲೋರಿನೇಷನ್ ಮಾಡಲಾಗುತ್ತಿದೆ. ಆರೋಗ್ಯ ಕಾರ್ಯಕರ್ತರ ಮೂಲಕ ಮನೆ ಮನೆಗೆ ಭೇಟಿ ನೀಡಿ ಜಾಗೃತಿ ಮೂಡಿಸಲಾಗುತ್ತಿದೆ.

**ಹೆಪಟೈಟಿಸ್ ವಿಧಗಳು ಮತ್ತು ಲಸಿಕೆಯ ಮಹತ್ವ:** ಹೆಪಟೈಟಿಸ್‌ನಲ್ಲಿ ಒಟ್ಟು 5 ವಿಧಗಳಿದ್ದು ಇವು ಬೇರೆ ಬೇರೆ ಮಾರ್ಗಗಳ ಮೂಲಕ ಹರಡುತ್ತವೆ. ಹೆಪಟೈಟಿಸ್ 'ಬಿ', 'ಸಿ' ಮತ್ತು 'ಡಿ': ಇವು ಹೆಚ್.ಐ.ವಿ ಹರಡುವ ಮಾದರಿಯಲ್ಲೇ ಹರಡುತ್ತವೆ. ಅಸುರಕ್ಷಿತ ಲೈಂಗಿಕ ಸಂಪರ್ಕ, ಕಲುಷಿತ ರಕ್ತದ ವರ್ಗಾವಣೆ, ಸೋಂಕು ಇರುವ ಸೂಜಿ/ವೈದ್ಯಕೀಯ ಉಪಕರಣಗಳ ಬಳಕೆ ಹಾಗೂ ತಾಯಿಯಿಂದ ಮಗುವಿಗೆ ಹರಡುತ್ತದೆ. ಇದರಲ್ಲಿ ಹೆಪಟೈಟಿಸ್ 'ಬಿ' ತೀವ್ರ ಸ್ವರೂಪದ್ದಾಗಿದ್ದು, ಲಿವರ್ ಕ್ಯಾನ್ಸರ್ಗೆ ಕಾರಣವಾಗಬಹುದು.






ಉದಯವಾಹಿನಿ ಚಿತ್ರ

> ಹೆಪಟೈಟಿಸ್ 'ಬಿ' ಗೆ ಅತ್ಯಂತ ಪರಿಣಾಮಕಾರಿ ಲಸಿಕೆ ಲಭ್ಯವಿದೆ. ಮಕ್ಕಳಿಗೆ ಹುಟ್ಟಿದ ತಕ್ಷಣ, 6ನೇ ವಾರ, 10ನೇ ವಾರ ಮತ್ತು 14ನೇ ವಾರದಲ್ಲಿ ಒಟ್ಟು 4 ಡೋಸ್ ಲಸಿಕೆಯನ್ನು ಕಡ್ಡಾಯವಾಗಿ ಕೊಡಿಸಬೇಕು. ಸಾರ್ವಜನಿಕರು ಈ ಲಸಿಕೆಯನ್ನು ಪಡೆದು ಸುರಕ್ಷಿತರಾಗಬೇಕು. ಎಂದು ತಿಳಿಸಿದ್ದಾರೆ.
> -ಡಾ.ಹೆಚ್.ಆರ್.ತಿಮ್ಮಯ್ಯ

**ಕುಡಿಯುವ ನೀರು ಸುರಕ್ಷಿತವಾಗಿಲ್ಲ**

> ಒಟ್ಟು 40 ನೀರಿನ ಮಾದರಿಗಳನ್ನು ಸಂಗ್ರಹಿಸಿ ಲ್ಯಾಬ್ ಪರೀಕ್ಷೆಗೆ ಒಳಪಡಿಸಲಾಗಿದೆ. ಇದರಲ್ಲಿ 27 ವರದಿಗಳು ಬಂದಿದ್ದು, ಇನ್ನು 13 ವರದಿಗಳ ನಿರೀಕ್ಷೆಯಲ್ಲಿದೆ. ಬಂದಿರುವ ವರದಿಗಳಲ್ಲಿ ಕುಡಿಯುವ ನೀರು ಸುರಕ್ಷಿತವಾಗಿಲ್ಲ ಎಂಬ ಅಂಶ ಒಂದು ಕಡೆ ಕಂಡುಬಂದಿದೆ.

> ಸಾರ್ವಜನಿಕರಿಗೆ ಯಾವುದೇ ಮಾಹಿತಿ ಅಥವಾ ಪೂರಕ ನೆರವು ಬೇಕಿದ್ದಲ್ಲಿ ಜಿಲ್ಲಾ ಸರ್ವೇಕ್ಷಣಾ ಘಟಕ ಅಥವಾ ಜಿಲ್ಲಾ ಆರೋಗ್ಯ ಅಧಿಕಾರಿಗಳ ವೈಯಕ್ತಿಕ ಮೊಬೈಲ್ ಸಂಖ್ಯೆ: 9449843050 ಸಂಪರ್ಕಿಸಬಹುದು ಅಥವಾ ಇದೇ ಸಂಖ್ಯೆಗೆ ವಾಟ್ಸ್‌ಆಯಪ್ ಮೂಲಕವೂ ಮಾಹಿತಿ ರವಾನಿಸಬಹುದು ಎಂದು ತಿಳಿಸಿದ್ದಾರೆ.
> - ಡಾ.ಹೆಚ್.ಆರ್.ತಿಮ್ಮಯ್ಯ